₹ 4 ಪುಟ: 4 ಸಂಪುಟ: 4 ಸಂಚಿಕೆ 50 newsbelagavi@gmail.com 9900332089 9900332089



# ಬೆಳಗಾವಿ ವರದಿ

ಕನ್ನಡ ದಿನಪತ್ರಿಕೆ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

Volume : 4 Issue: 50 Friday, 07, APRIL, 2023 RNI: KARKAN/2020/79084 Regn,No:G-2/PMG/KA/NK/BM/139/2021-23 24

## ಕಾಂಗ್ರೆಸ್ ಅಭ್ಯರ್ಥಿಗಳ 2ನೇ ಪಟ್ಟಿ ಪ್ರಕಟ



ಬೆಂಗಳೂರು: ಕರ್ನಾಟಕ ವಿಧಾನಸಭೆ ಚುನಾವಣೆಗೆ ಕಾಂಗ್ರೆಸ್ ಅಭ್ಯರ್ಥಿಗಳ ಎಡನೇ ಪಟ್ಟಿ ಪ್ರಕಟವಾಗಿದೆ. ಎಐಸಿಸಿ 42 ಕ್ಷೇತ್ರಗಳ ಎರಡನೇ ಪಟ್ಟಿ ಬಿಡುಗಡೆ ಮಾಡಿದೆ. ವಿಶೇಷ ಅಂದ್ರೆ ಎಡರನೇ ಪಟ್ಟಿಯಲ್ಲಿ ವಲಸಿಗರಿಗೆ ಕಾಂಗ್ರೆಸ್ ಹೈಕಮಾಮಡ್ ಮಣೆ ಹಾಕಿದೆ. ಇತ್ತೀಚೆಗೆ ಜೆಡಿಎಸ್ ಹಾಗೂ ಬಿಜೆಪಿ ತೊರೆದು ಕಾಂಗ್ರೆಸ್ ಸೇರ್ಪಡೆಯಾದ ಕೆಲವರಿಗೆ ಎರಡನೇ ಪಟ್ಟಿಯಲ್ಲಿ ಟಿಕೆಟ್ ಘೋಷಣೆ ಮಾಡಲಾಗಿದೆ.

### 42 ಕ್ಷೇತ್ರಗಳಿಗೆ ಅಭ್ಯರ್ಥಿಗಳ ಹೆಸರು ಇಂತಿದೆ

1 ನಿಪ್ಪಾಣಿ– ಕಾಕಾ ಸಾಹೇಬ್ ಪಾಟೀಲ್
2 ಗೋಕಾಕ್– ಮಹಾಂತೇಶ್ ಕಡಾಡಿ
3 ಕಿತ್ತೂರು– ಬಾಬಾ ಸಾಹೇಬ್ ಡಿ ಪಾಟೀಲ್
4 ಸವದತ್ತಿ ಯಲ್ಲಮ್ಮ– ವಿಶ್ವಾಸ್ ವಸಂತ್ ವೈದ್ಯ
5 ಮುದೋಳ್– ಆರ್ ಬಿ ತಿಮ್ಮಾಪುರ
6 ಬಾದಾಮಿ–ಭೀಮಸೇನ್ ಬಿ ಚಿಮ್ಮನಕಟ್ಟಿ
7 ಬೀಳಗಿ– ಜೆ.ಟಿ ಪಾಟೀಲ್
8 ದೇವರಹಿಪ್ಪರಗಿ– ಎಸ್.ಆರ್. ಪಾಟೀಲ್
9 ಬಾಗಲಕೋಟೆ– ಹುಲ್ಲಪ್ಪ ವೈ ಮೇಟಿ 10 ಬಸವಕಲ್ಯಾಣ– ವಿಜಯ್ ಧರ್ಮಸಿಂಗ್
11 ಕಲಘಟಗಿ– ಸಂತೋಷ್ ಲಾಡ್
12 ಅಫಜಲ್‌ಪುರ್– ಎಂವೈ ಪಾಟೀಲ್
13 ಮಡಿಕೇರಿ– ಡಾ. ಮಂತರಗೌಡ
14 ಚಾಮುಂಡೇಶ್ವರಿ– ಸಿದ್ದೇಗೌಡ
15 ಮಂಡ್ಯ– ಪಿ.ರವಿಕುಮಾರ್
16 ಬೇಲೂರು– ಬಿ. ಶಿವರಾಂ
17 ಗುಬ್ಬಿ– ಎಸ್.ಆರ್ ಶ್ರೀನಿವಾಸ್
18 ಚಿತ್ರದುರ್ಗ– ವೀರೇಂದ್ರ ಪಪ್ಪಿ
19 ಮೊಣಕಾಲ್ಮೂರು– ಎನ್. ವೈ ಗೋಪಾಲಕೃಷ್ಣ
20 ಮಹಾಲಕ್ಷ್ಮಿ ಲೇಔಟ್– ಕೇಶವ್ ಮೂರ್ತಿ
21 ಯಶವಂತಪುರ– ಎಸ್. ಬಾಲರಾಜಗೌಡ
22 ಯಲಹಂಕ– ಕೇಶವ್ ರಾಜಣ್ಣ
23 ಧಾರವಾಡ– ವಿನಯ್ ಕುಲಕರ್ಣಿ
24 ತುಮಕೂರು ಸಿಟಿ– ಇಕ್ಬಾಲ್ ಅಹಮದ್
25 ಕಡೂರು– ಆನಂದ್ ಕೆ ಎಸ್
26 ಉಡುಪಿ– ಪ್ರಸಾದ್ ರಾಜ್ ಕಾಂಚನ್
27 ತೀರ್ಥಹಳ್ಳಿ– ಕಿಮ್ಮನೆ ರತ್ನಾಕರ್
28 ಪದ್ಮನಾಭನಗರ– ರಘುನಾಥ್ ನಾಯ್ಡು
29 ಮೇಲುಕೋಟೆ– ದರ್ಶನ್ ಪುಟ್ಟಣ್ಣಯ್ಯಗೆ ಬೆಂಬಲ (ಸರ್ವೋದಯ ಕರ್ನಾಟಕ ಪಾರ್ಟಿ)
30 ಮಂಡ್ಯ– ಪಿ.ರವಿಕುಮಾರ್
31 ಬಿಜಾಪುರ ನಗರ (ವಿಜಯಪುರ)–ಅಬ್ದುಲ್ ಅಹ್ಮದ್ ಖಾಜಾ ಸಾಹೇಬ್ ಮುಶ್ರಿಫ್
32 ನಾಗಠಾಣ– ವಿಠ್ಠಲ್ ಕಟಕದೊಂಡ
33 ಯಾದಗಿರಿ– ಚೆನ್ನರೆಡ್ಡಿ
34 ಕೃಷ್ಣರಾಜಪೇಟೆ– ಬಿ.ಎಲ್ ದೇವರಾಜ್
35 ಕೊಳ್ಳೆಗಾಲ ಖಅ– ಎ.ಆರ್ ಕೃಷ್ಣ ಮೂರ್ತಿ
36 ಗುರಮಿಟ್ಕಲ್– ಬಾಬರಾಮ್ ಚಿಂಚನಸೂರ್
37 ಗುಲ್ಬರ್ಗ ದಕ್ಷಿಣ–ಅಲ್ಲಮಪ್ರಭು ಪಾಟೀಲ್
38 ಗಂಗಾವತಿ– ಇಕ್ಬಾಲ್ ಅನ್ಸಾರಿ
39 ನರಗುಂದಾ– ಬಿ. ಆರ್ ಯವಗಲ್
40 ಶಿರಸಿ–ಭೀಮಣ್ಣ ನಾಯ್ಕ್
41 ಯಲ್ಲಾಪುರ– ವಿ ಎಸ್ ಪಾಟೀಲ್
42 ಕುಡ್ಲಿಗಿ– ಸಂತೋಷ ಎಸ್ ಲಾಡ್

## ಪ್ರಜಾಪ್ರಭುತ್ವದ ಬಗ್ಗೆ ಹೆಚ್ಚು ಮಾತನಾಡುವ ಮೋದಿ ಸರ್ಕಾರ

# ಮಾತಿನಂತೆ ನಡೆಯುವುದಿಲ್ಲ: ಮಲ್ಲಿಕಾರ್ಜುನ ಖರ್ಗೆ

ನವದೆಹಲಿ: ಸರ್ಕಾರ ಪ್ರಜಾಪ್ರಭುತ್ವದ ಬಗ್ಗೆ ಹೆಚ್ಚು ಮಾತನಾಡುತ್ತದೆ. ಆದರೆ, ಅವರು ಹೇಳಿದ್ದು ಅವರ ಕಾರ್ಯಗಳಲ್ಲಿ ಕಾಣಿಸುತ್ತಿಲ್ಲ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರು ಪ್ರಧಾನಮಂತ್ರಿ ನರೇಂದ್ರ ಮೋದಿ ವಿರುದ್ಧ ಗುರುವಾರ ವಾಗ್ದಾಳಿ ನಡೆಸಿದ್ದಾರೆ.



ದೆಹಲಿಯಲ್ಲಿ ಮಾಧ್ಯಮದವರನ್ನುದ್ದೇಶಿಸಿ ಮಾತನಾಡಿದ ಖರ್ಗೆ ಅವರು, ಬಜೆಟ್ ಅಧಿವೇಶನವನ್ನು ವ್ಯರ್ಥ ಮಾಡುವುದು ಸರ್ಕಾರದ ಉದ್ದೇಶವಾಗಿತ್ತು. ಸರ್ಕಾರ ಪ್ರಜಾಪ್ರಭುತ್ವದ ಬಗ್ಗೆ ಸಾಕಷ್ಟು ಮಾತನಾಡುತ್ತದೆ, ಆದರೆ ಅವರು ಹೇಳಿದಂತೆ ನಡೆಯುವುದಿಲ್ಲ. ಆದ–'ರೆ, ಪ್ರತಿಪಕ್ಷಗಳು ಪ್ರಜಾಪ್ರಭುತ್ವ ಮತ್ತು ಸಂವಿಧಾನಕ್ಕಾಗಿ ಒಗ್ಗಟ್ಟಿನಿಂದ ಹೋರಾಡುತ್ತಿವೆ ಎಂದು ಹೇಳಿದರು.

50 ಲಕ್ಷ ಕೋಟಿ ರೂಪಾಯಿಗಳ ಬಜೆಟ್ ಅನ್ನು ಕೇವಲ 12 ನಿಮಿಷಗಳಲ್ಲಿ ಅಂಗೀಕರಿಸಲಾಗಿದೆ, ಆದರೆ, ಸರ್ಕಾರ ಮಾತ್ರ ವಿರೋಧ ಪಕ್ಷಗಳಿಗೆ ಆಸಕ್ತಿಯಿಲ್ಲ ಎಂದು ಆರೋಪಿಸುತ್ತದೆ. ಈ ಮೂಲಕ ಸದನದಲ್ಲಿ ಗದ್ದಲ ಏರ್ಪಡುವಂತೆ ಮಾಡುತ್ತಾರೆ. ಸದನದಲ್ಲಿ ಸೃಷ್ಟಿಯಾದ ಗದ್ದಲ ಆಡಳಿತ ಪಕ್ಷದಿಂದ ಆಗಿದೆ. ನಾವು ಬೇಡಿಕೆ ಇಟ್ಟಾಗಲೆಲ್ಲ ನಮಗೆ ಮಾತನಾಡಲು ಅವಕಾಶ ನೀಡಲಿಲ್ಲ. 52 ವರ್ಷಗಳ ನನ್ನ ಸಾರ್ವಜನಿಕ ಜೀವನದಲ್ಲಿ ಈ ರೀತಿ ನಡೆಯುತ್ತಿರುವುದು ಇದೇ ಮೊದಲು.

ಈ ಹಿಂದೆಂದೂ ಈ ರೀತಿಯಾಗಿರಲಿಲ್ಲ ಎಂದು ಕಿಡಿಕಾರಿದರು.


ಬಜೆಟ್ ಅಧಿವೇಶನವನ್ನು ವ್ಯರ್ಥ ಮಾಡುವುದು ಸರ್ಕಾರದ ಉದ್ದೇಶವಾಗಿ–ತ್ತು. ಇದನ್ನು ನಾವು ಖಂಡಿಸುತ್ತೇವೆ. ಇದು ಹೀಗೆಯೇ ಮುಂದುವರೆದಿದ್ದೇ ಆದರೆ, ಪ್ರಜಾಪ್ರಭುತ್ವ ಅಂತ್ಯಗೊಳ್ಳುತ್ತದೆ. ನಾವು ಸರ್ವಾಧಿಕಾರದತ್ತ ಸಾಗುತ್ತೇವೆಂದು ಎಚ್ಚರಿಸಿದ್ದಾರೆ.

ಅದಾನಿ ವಿಷಯಜದ ಕುರಿತು 18 ರಿಂದ 19 ವಿರೋಧ ಪಕ್ಷಗಳು ಧ್ವನಿ ಎತ್ತಿವೆ. ಅದಾನಿಯವರ ಸಂಪತ್ತು ಕೇವಲ 2 ರಿಂದ 2.5 ವರ್ಷಗಳ ಅವಧಿಯಲ್ಲಿ 12 ಲಕ್ಷ ಕೋಟಿ ರೂ.ಗೆ ಹೇಗೆ ಹೆಚ್ಚಾಯಿತು ಎಂದು ಪ್ರಶ್ನಿಸಿದ್ದಾರೆ.

ಅದಾನಿ ವಿಚಾರವನ್ನು ಜೆಪಿಸಿ ತನಿಖೆಗೆ ಒಪ್ಪಿಸಲು ಸರ್ಕಾರ ಹೆದರುತ್ತಿರುವುದೇಕೆ? ಇದರಲ್ಲಿ ಏನೋ ಮರ್ಮವಿದೆ. ಹೀಗಾಗಿಯೇ ಸರ್ಕಾರ ಜೆಪಿಸಿ ತನಿಖೆಗೆ ಒಪ್ಪಿಸುತ್ತಿಲ್ಲ. ಅದಾನಿ ವಿಚಾರವನ್ನು ಪ್ರಸ್ತಾಪಿಸಿದಾಗಲೆಲ್ಲಾ ಸರ್ಕಾರ ಲಂಡನ್‌ನಲ್ಲಿ ರಾಹುಲ್ ಗಾಂಧಿ ನೀಡಿದ್ದ ಹೇಳಿಕೆ ಸಂಬಂಧ ಕ್ಷಮೆಯಾಚಿಸಬೇಕೆಂದು ಆಗ್ರಹಿಸುತ್ತಾ ವಿಷಯಾಂತರ ಮಾಡುತ್ತಾರೆ. ಅದಾನಿ ಪ್ರಕರಣದಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಲು ಜೆಪಿಸಿ ತನಿಖೆಗೆ ಒತ್ತಾಯಿಸಲಾಗುತ್ತಿದೆ. ಇದ–ರಿಂದ ವಿರೋಧ ಪಕ್ಷಗಳ ಸಂಸದರು ಕೂಡ ದಾಖಲೆಗಳ ಪರಿಶೀಲನೆಗೆ ಅವಕಾಶ ಪಡೆದುಕೊಳ್ಳುತ್ತಾರೆಂದು ಹೇಳಿದರು.

ಇದೇ ವೇಳೆ ರಾಹುಲ್ ಗಾಂಧಿಯವರ ಅನರ್ಹತೆ ವಿಚಾರ ಕುರಿತು ಮಾತನಾಡಿದ ಅವರು, "ಮಿಂಚಿನ ವೇಗದಲ್ಲಿ" ರಾಹುಲ್ ಗಾಂಧಿಯವರನ್ನು ಅನರ್ಹತೆಗೊಳಿಸಲಾಯಿತು. ಬಿಜೆಪಿ ಸಂಸದರೊಬ್ಬರನ್ನೂ ಕೂಡ ಈ ಹಿಂದೆ ದೋಷಿ ಎಂದು ತೀರ್ಪು ನೀಡಿದ್ದ ನ್ಯಾಯಾಲಯ ಅವರಿಗೆ 3 ವರ್ಷ ಶಿಕ್ಷೆ ವಿಧಿಸಿತ್ತು. ಶಿಕ್ಷೆಯಾಗಿ 16 ದಿನಗಳಾದರೂ ಅವರನ್ನು ಅನರ್ಹಗೊಳಿಸಲಾಗಿರಲಿಲ್ಲ ಎಂದು ಕಿಡಿಕಾರಿದರು.

## ಬಿಜೆಪಿ ಶಾಸಕರೊಬ್ಬರ ಮಹಿಳೆ ಜತೆ ಇರುವ ಅಶ್ಲೀಲ ಫೋಟೊ ವೈರಲ್



ಮಂಗಳೂರು: ಕರ್ನಾಟಕ ವಿಧಾನಸಭೆ ಚುನಾವಣೆ ರಂಗೇರಿದ್ದು, ಕ್ಷಣ ಕ್ಷಣ–ಕ್ಕೂ ರಾಜ್ಯ ರಾಜಕಾರಣದಲ್ಲಿ ಮಹತ್ವದ ಬೆಳವಣಿಗೆಗಳು ನಡೆಯುತ್ತಿವೆ. ಇನ್ನು ಈಗಾಗಲೇ ಕೆಲವರು ಟಿಕೆಟ್ ಕನ್ಫರ್ಮ್ ಮಾಡಿಕೊಂಡು ಕ್ಷೇತ್ರಗಳಲ್ಲಿ ಬೀಡು ಬಿಟ್ಟು ಭರ್ಜರಿ ಪ್ರಚಾರದಲ್ಲಿ ತೊಡಗಿಸಿಕೊಂಡಿದ್ದಾರೆ. ಈ ಚುನಾವಣೆ ಸಂದರ್ಭದಲ್ಲೇ ಬಿಜೆಪಿ ಶಾಸಕರೊಬ್ಬರು ಮಹಿಳೆ ಜೊತೆ ಇರುವ ಅಶ್ಲೀಲ ಫೋಟೋಗಳು ವೈರಲ್ ಆಗಿವೆ. ಮಂಗಳೂರಿನ ಪುತ್ತೂರು ಕ್ಷೇತ್ರದ ಬಿಜೆಪಿ ಶಾಸಕ ಸಂಜೀವ ಮಠಂದೂರು ಅವರು ಮಹಿಳೆಯೊಂದಿಗೆ ಇರುವ ಫೋಟೋಗಳು ವೈರಲ್ ಆಗಿದ್ದು, ಈ ಬಗ್ಗೆ ಅವರು ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಮಹಿಳೆಯೊಂದಿಗಿನ ಫೋಟೋವನ್ನು ಅಲ್ಲಗಳೆದಿದ್ದು, ನನ್ನ ಫೋಟೋವನ್ನು ಎಡಿಟ್ ಮಾಡಿ ವೈರಲ್ ಮಾಡಿದ್ದಾರೆ ಎಂದಿದ್ದಾರೆ. ಇನ್ನು ಈ ಬಗ್ಗೆ ಅವರು ಉಪ್ಪಿನಂಗಡಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ನನ್ನ ಫೋಟೋವನ್ನು ಯಾರೋ ಎಡಿಟ್ ಮಾಡಿ ವೈರಲ್ ಮಾಡಿದ್ದಾರೆ ಎಂದು ದೂ–ರಿನಲ್ಲಿ ಉಲ್ಲೇಖಿಸಿದ್ದು, ಇದೀಗ ಈ ಫೋಟೋವನ್ನು ವೈರಲ್ ಮಾಡುತ್ತಿರುವವ ವಿರುದ್ಧ ಕ್ರಮಕೈಗೊಳ್ಳುವಂತೆ ದೂರಿನಲ್ಲಿ ಮನವಿ ಮಾಡಿದ್ದಾರೆ. ಇನ್ನು ಉಪ್ಪಿನಂಗಡಿ ಪೊಲೀಸರು ಇನ್ಫಾರ್ಮೇಶನ್ ಟೆಕ್ನಾಲಜಿ ಆಕ್ಟ್ ಪ್ರಕಾರ ಎಫ್.ಐ.ಆರ್ ದಾಖಲು ದಾಖಲಿಸಿಕೊಂಡು ತನಿಖೆ ಆರಂಭಿಸಿದ್ದಾರೆ.

ಕರ್ನಾಟಕ ವಿಧಾನಸಭೆಗೆ ದಿನಾಂಕ ನಿಗದಿಯಾಗುತ್ತಿದ್ದಂತೆಯೇ ಇತ್ತ ದಕ್ಷಿಣ ಕನ್ನಡ ಜಿಲ್ಲೆ ಪುತ್ತೂರ ವಿಧಾನಸಭಾ ಕ್ಷೇತ್ರದಲ್ಲೂ ಚುನಾವಣೆ ಚಟುವಟಿಕೆಗಳು ಬಿರುಸುಗೊಂಡಿವೆ. 2018ರಲ್ಲಿ ಭಾರತೀಯ ಜನತಾ ಪಾರ್ಟಿಯ ಸಂಜೀವ್ ಮಠಂದೂರು ಅವರು ಕಾಂಗ್ರೆಸ್ನ ಶಕುಂತಳಾ ಶೆಟ್ಟಿ ಅವರನ್ನು 19477 ಮತಗಳ ಅಂತರದಿಂದ ಮಣಿಸಿದ್ದರು. ಇದೀಗ ಸಂಜೀವ ಮಠಂದೂರು ಮತ್ತೊಮ್ಮೆ ಕಣಕ್ಕಿಳಿಯಲು ತಯಾರಿ ನಡೆಸಿದ್ದಾರೆ. ಆದ್ರೆ, ಮಠಂದೂರು ವಿರುದ್ಧ ಬಣ ರಾಜಕೀಯದ ಆರೋಪಗಳು ಕೇಳಿಬಂದಿವೆ. 2018ರ ವಿಧಾನಸಭೆ ಚುನಾವಣೆಯಲ್ಲಿ ಹಿಂದೂ ಸಂಘಟನೆ ಮುಖಂಡ ಅರುಣ್ ಕುಮಾರ್ ಅವರಿಗೆ ಟಿಕೆಟ್ ಸಿಗಬಹುದೆಂಬ ನಿರೀಕ್ಷೆ ಇತ್ತಾದರೂ ಕೊನೆ ಕ್ಷಣದಲ್ಲಿ ಬಿಜೆಪಿ ಮಠಂದೂ–ರಿಗೆ ಮಣೆ ಹಾಕಿತ್ತು. ಈ ಬಾರಿ ಉದ್ಯಮಿ ಆಗಿರುವ ಸಮಾಜಿಕ ಸೇವೆಯಲ್ಲಿ ಮುಂಚೂಣಿಯಲ್ಲಿರುವ ಡಿ. ವಿ. ಸದಾನಂದ ಗೌಡ ಅವರ ಆಪ್ತರಾಗಿರುವ ಅಶೋಕ್ ರೈ ಈ ಬಾರಿ ಪುತ್ತೂರು ಟಿಕೆಟ್ಗಾಗಿ ಕಸರತ್ತು ನಡೆಸಿದ್ದಾರೆ. ಹೀಗಾಗಿ ಪುತ್ತೂರು ಬಿಜೆಪಿ ಟಿಕೆಟ್ಗಾಗಿ ಭರ್ಜರಿ ಫೈಟ್ ನಡೆದಿದೆ. ಇದರ ಮಧ್ಯೆ ಹಾಲಿ ಶಾಸಕ ಸಂಜೀವ ಮಠಂದೂರು ಅವರ ಫೋಟೋ ವೈರಲ್ ಆಗಿದೆ.

### ಅದಾನಿ ವಿಚಾರದಲ್ಲಿ ಪ್ರಧಾನಿ ವಿರುದ್ಧ ಆರೋಪ:

## ರಾಹುಲ್ ಗಾಂಧಿ ಪುನರಾವರ್ತಿತ ಅಪರಾಧಿ: ನಿರ್ಮಲಾ ಸೀತಾರಾಮನ್



ಬೆಂಗಳೂರು: ಅದಾನಿ ವಿಚಾರದಲ್ಲಿ ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಆಧಾರರಹಿತ ಆರೋಪಗಳನ್ನು ಮಾಡಿದ್ದಕ್ಕಾಗಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಯನ್ನು ತೀವ್ರವಾಗಿ ಟೀಕಿಸಿರುವ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ಅಂತಹ ಆರೋಪಗಳನ್ನು ಹೊರಿಸುವಲ್ಲಿ ರಾಹುಲ್ 'ಪುನರಾವರ್ತಿತ ಅಪರಾಧಿ' ಎಂದು ಗುರುವಾರ ಬಣ್ಣಿಸಿದ್ದಾರೆ.

ಅದಾನಿ ಅವರಿಗೆ ಎಲ್ಲಾ ವಿಷಯಗಳಲ್ಲಿ ಅನಾವಶ್ಯಕ ಅನುಕೂಲಗಳನ್ನು ಮಾಡಿಕೊಡಲಾಗಿದೆ ಎಂದು ಎಂದು ರಾಹುಲ್ ಗಾಂಧಿ ನಿಜವಾಗಿಯೂ ಭಾವಿಸಿದರೆ, ಅದು ನಿಜವಲ್ಲ ಎಂದು ಸೀತಾರಾಮನ್ ರಾಜ್ಯ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಕೇಳಲಾದ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದರು.

ಪ್ರಧಾನಿ ವಿರುದ್ಧ ಆಧಾರರಹಿತ ಆರೋಪಗಳನ್ನು ಮಾಡುವ ವಿಷಯದಲ್ಲಿ ಅವರು ಈಗ ಪುನರಾವರ್ತಿತ ಅಪರಾಧಿಯಾಗುತ್ತಿದ್ದಾರೆ ಎಂದು ನಾನು ಹೇಳುತ್ತೇನೆ. 2019ರ ಚುನಾವಣೆಗೆ ಮುಂಚಿತವಾಗಿ ನಾವು ಅವರನ್ನು ನೋಡಿದ್ದೇವೆ. ಅವರೀಗ ಮತ್ತೆ ಅದನ್ನೇ ಮಾಡುತ್ತಿದ್ದಾರೆ. ಅವರು ಪ್ರಧಾನಿ ವಿರುದ್ಧ ಎಲ್ಲಾ ಸುಳ್ಳು ಆರೋಪಗಳನ್ನು ಮಾಡುತ್ತಿದ್ದರೂ, ಯಾವುದೇ ಪಾಠ ಕಲಿಯುವಂತೆ ಕಾಣುತ್ತಿಲ್ಲ ಎಂದು ಅವರು ಹೇಳಿದರು.

ಅದಾನಿಗೆ ಕೇರಳ ಸರ್ಕಾರ ಮತ್ತು ರಾಜಸ್ಥಾನದಲ್ಲಿ ಸೌರವಿದ್ಯುತ್ ಯೋಜನೆಗೆ ನೀಡಿದ 'ಅನಗತ್ಯ ಉಪಕಾರ'ದ ವಿರುದ್ಧ ರಾಹುಲ್ ಏಕೆ ಧ್ವನಿ ಎತ್ತಲಿಲ್ಲ. ಇದು ಕೇರಳದಲ್ಲಿ ಅಂದಿನ ಕಾಂಗ್ರೆಸ್ ಸರ್ಕಾರ ಅದಾನಿಗೆ ವಿಝಿಂಜಂ ಬಂದರನ್ನು ತಟ್ಟೆಯಲ್ಲಿ ನೀಡಿತು ಎಂದರು.

ಯಾವುದೇ ಟೆಂಡರ್ ಆಧಾರದಲ್ಲಿ ಅದನ್ನು ಅವರಿಗೆ ನೀಡಿಲ್ಲ. ಈಗ ಅಲ್ಲಿ ಕಾಂಗ್ರೆಸ್ ಸರ್ಕಾರವಲ್ಲ, ಸಿಪಿಎಂ ಸರ್ಕಾರ ಇದೆ. ಆದರೆ, ಕೇರಳವು ಆ ಆದೇಶವನ್ನು ರದ್ದುಗೊಳಿಸಬೇಕೆಂದು ಕೇಳಲು ಮತ್ತು ಒತ್ತಾಯಿಸಲು ರಾಹುಲ್ ಗಾಂಧಿ ತಡೆದದ್ದು ಯಾವುದು? ಎಂದು ಸೀತಾರಾಮನ್ ಪ್ರಶ್ನಿಸಿದರು.

'ಸಂಪೂರ್ಣ ಸೌರ ವಿದ್ಯುತ್ ಯೋಜನೆ'ಯನ್ನು ಕಾಂಗ್ರೆಸ್ ಆಡಳಿತವಿರುವ ರಾಜಸ್ಥಾನದಲ್ಲಿ ಅದಾನಿಗೆ ನೀಡಲಾಗಿದೆ. ಇದನ್ನು ಪ್ರಶ್ನಿಸದಂತೆ ರಾಹುಲ್ ಗಾಂಧಿಯವರನ್ನು ಏನು ತಡೆಯುತ್ತಿದೆ? ಎಂದು ಕಿಡಿಕಾರಿದರು.

## ಕಾಂಗ್ರೆಸ್ ಶಾಸಕಿಯ ಕಾರು ಸೀಜ್ ಮಾಡಿದ ಪೊಲೀಸರು



ಬೆಂಗಳೂರು: ಕಾಂಗ್ರೆಸ್ ಹಿರಿಯ ನಾಯಕ ರಾಮಲಿಂಗಾ ರೆಡ್ಡಿ ಅವರ ಪುತ್ರಿ ಬಿಟಿಎಂ ಲೇಔಟ್ ಹಾಲಿ ಶಾಸಕಿ ಸೌಮ್ಯಾ ರೆಡ್ಡಿ ಅವರ ಕಾರನ್ನು ಚುನಾವಣಾ ಅಧಿಕಾರಿಗಳು ಸೀಜ್ ಮಾಡಿದ್ದಾರೆ. ತಿಲಕನಗರ ಪೊಲೀಸ್ ಠಾಣೆ ಬಳಿ ಕಾರನ್ನು ಕವರ್ ಮಾಡಿ ನಿಲ್ಲಿಸಲಾಗಿದೆ.

ಶಾಸಕಿ ಸೌಮ್ಯಾ ರೆಡ್ಡಿ ಅವರದ್ದು ಎನ್ನಲಾದ ಕಾರಿನಲ್ಲಿ ಮತದಾರ–ರಿಗೆ ಸೀರೆ ಹಂಚಲು ಹೋಗುತ್ತಿದ್ದರು ಅನ್ನೋ ಅನುಮಾನ ಬಂದಿದೆ. ಸೀರೆಗಳನ್ನು ತೆಗೆದುಕೊಂಡು ಹೋಗುತ್ತಿದ್ದ ವೇಳೆ ಚುನಾವಣಾ ಅಧಿಕಾರಿಗಳು ಕಾರನ್ನು ವಶಕ್ಕೆ ಪಡೆದಿದ್ದಾರೆ.


## ಐತಿಹಾಸಿಕ ಕರಗ ಮಹೋತ್ಸವದ ವೇಳೆ ಅಗ್ನಿ ಅವಘಡ

ಬೆಂಗಳೂರು: ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ಐತಿಹಾಸಿಕ ಕರಗ ಮಹೋತ್ಸವ ಆರಂಭವಾಗಿದ್ದು, ಈ ವೇಳೆ ಅಗ್ನಿ ಅವಘಡ ಸಂಭವಿಸಿದೆ

ದೇವಸ್ಥಾನದ ಮುಂದೆ ಹಚ್ಚಲಾಗಿದ್ದ ಕರ್ಪೂರದ ಬೆಂಕಿ ತಗುಲಿ ದ್ವಿಚಕ್ರವಾಹನಗಳು ಬೆಂಕಿಗಾಹುತಿಯಾಗಿವೆ. ವಾಹನಗಳನ್ನು ತೆರವುಗೊಳಿಸುವಂತೆ ಮೈಕ್ ನಲ್ಲಿ ಘೋಷಿಸಲಾಗಿದ್ದರೂ ಭಕ್ತರು ವಾಹನಗಳನ್ನು ತೆರವುಗೊಳಿಸಿಲ್ಲ. ಇದ–ರಿಂದಾಗಿ ಬೆಂಕಿ ಸುತ್ತಮುತ್ತಲೂ ವ್ಯಾಪಿಸಿದೆ ಎನ್ನಲಾಗಿದೆ.

ದೇವಸ್ಥಾನದ ಮುಂದೆ ನಿಲ್ಲಿಸಿದ್ದ 10ಕ್ಕೂ ಹೆಚ್ಚು ದ್ವಿಚಕ್ರವಾಹನಗಳು ಸುಟ್ಟು ಕರಕಲಾಗಿವೆ ಎಂದು ತಿಳಿದುಬಂದಿದೆ.

## ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಸಾಮೂಹಿಕ ನಕಲು: 16 ಶಿಕ್ಷಕರು ಅಮಾನತು




ಕಲಬುರಗಿ: ಕಲಬುರಗಿ, ಕೊಪ್ಪಳ ಜಿಲ್ಲೆಯ ಮೂರು ಪರೀಕ್ಷಾ ಕೇಂದ್ರಗಳ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಸಾಮೂಹಿಕ ನಕಲು ಮಾಡಲು ಸಹಕರಿಸಿದ ಆರೋಪದ ಮೇಲೆ 16 ಶಿಕ್ಷಕರನ್ನು ಅಮಾನತು ಮಾಡಲಾಗಿದೆ.

ಅಫಜಲಪುರ ತಾಲೂಕಿನ ಗೊಬ್ಬೂರ ಬಿ ಪರೀಕ್ಷಾ ಕೇಂದ್ರದಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಮುಖ್ಯ ಶಿಕ್ಷಕ ಸೇರಿ 16 ಶಿಕ್ಷಕರನ್ನು ಶಿಕ್ಷಣ ಇಲಾಖೆ ಸೇವೆಯಿಂದ ಅಮಾನತು ಮಾಡಿದೆ.

ಏಪ್ರಿಲ್ 3 ರಂದು ಎಸ್.ಎಸ್.ಎಲ್.ಸಿ. ಗಣಿತ ವಿಷಯದ ಪರೀಕ್ಷೆ ನಡೆದಿದ್ದು, ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಇಶಾ ಪಂತ್ ಬಂದೋಬಸ್ತ್ ಪರಿಶೀಲನೆಗೆ ತೆರಳಿದ್ದರು. ಈ ವೇಳೆ ವಿದ್ಯಾರ್ಥಿಗಳು ಮೈಕ್ರೋ ಜೆರಾಕ್ಸ್ ಪುಸ್ತಕ ಮತ್ತು ಟಿಪ್ಪಣಿ ಚೀಟಿಗಳಿಂದ ಸಾಮೂಹಿಕ ನಕಲು ಮಾಡಿ ಅವುಗಳನ್ನು ಎಸೆದಿರುವುದು ಕಂಡುಬಂದಿತ್ತು. ಪರೀಕ್ಷಾ ಕೇಂದ್ರದಲ್ಲಿ ವ್ಯಕ್ತಿಯೊಬ್ಬರು ಮೈಕ್ರೋ ಜೆರಾಕ್ಸ್ ಪುಸ್ತಕ ಮತ್ತು ಚೀಟಿಗಳನ್ನು ಸುಟ್ಟು ಹಾಕಿದ್ದು, ಫೋಟೋ ಮತ್ತು ವಿಡಿಯೋ ಚಿತ್ರೀಕರಣಗಳನ್ನು ಶಿಕ್ಷಣ ಇಲಾಖೆಗೆ ಸಲ್ಲಿಸಲಾಗಿತ್ತು.

ಶಿಕ್ಷಣ ಇಲಾಖೆ ಅಧಿಕಾರಿಗಳು ಹಾಗೂ ಪೊಲೀಸ್ ಅಧೀಕ್ಷಕಿ ಇಶಾ ಪಂತ್ ಅವರು ಪರೀಕ್ಷಾ ಕೇಂದ್ರಕ್ಕೆ ಭೇಟಿ ನೀಡಿದಾಗ ಪರೀಕ್ಷಾ ಕೇಂದ್ರದ ಸುತ್ತ ಜನರು ಇದ್ದರು. ಕೊಠಡಿ ಕಿಟಕಿಗಳ ಬಳಿ ನಕಲು ಚೀಟಿಗಳು, ಟಿಪ್ಪಣಿ ಚೀಟಿಗಳು ಕಂಡುಬಂದಿದ್ದವು. ಪರೀಕ್ಷಾ ಕೇಂದ್ರದ ಸುತ್ತ ನಿಷೇಧಾಜ್ಞೆ ಇದ್ದರೂ ಸಾರ್ವಜನಿಕರು ನಿಷೇಧಿತ ಪ್ರದೇಶದಲ್ಲಿ ಓಡಾಡಿಕೊಂಡಿದ್ದರು. ಈ ಹಿನ್ನೆಲೆಯಲ್ಲಿ ಎಸ್‌ಎಸ್‌ಎಲ್ಸಿ ಪರೀಕ್ಷಾ ಕೇಂದ್ರದ ಅಧೀಕ್ಷಕ, ಕಸ್ಟೋಡಿಯನ್, ಜಾಗೃತದಳ ಸಿಬ್ಬಂದಿ, ಕೊಠಡಿ ಮೇಲ್ವಿಚಾರಕರು ಸೇರಿ 16 ಶಿಕ್ಷಕರನ್ನು ಸೇವೆಯಿಂದ ಅಮಾನತು ಮಾಡಲಾಗಿದೆ.

## 5, 8 ನೇ ತರಗತಿ ಪರೀಕ್ಷೆ: ಯಾವುದೇ ವಿದ್ಯಾರ್ಥಿಯನ್ನು ಫೇಲ್ ಮಾಡುವಂತಿಲ್ಲ: ಸರ್ಕಾರ ಸೂಚನೆ



ಬೆಂಗಳೂರು : ಶಾಲಾ ಶಿಕ್ಷಣ ಇಲಾಖೆಯು ರಾಜ್ಯ ಪಠ್ಯಕ್ರಮದ 5 ಮತ್ತು 8 ನೇ ತರಗತಿ ಮಕ್ಕಳಿಗೆ ನಡೆಸಿರುವ ಮೌಲ್ಯಾಂಕನ ಪರೀಕ್ಷೆಗೆ ಗ್ರೇಡ್ ನಿಗದ ಮಾಡಿದ್ದು, ಯಾವುದೇ ವಿದ್ಯಾರ್ಥಿಯನ್ನು ಅನುತ್ತೀರ್ಣ ಮಾಡುವಂತಿಲ್ಲ ಎಂಬ ಸೂಚನೆ ನೀಡಿದೆ.


ಮೌಲ್ಯಾಂಕನ ಪರೀಕ್ಷೆಗಳನ್ನು 40 ಅಂಕಗಳ ಲಿಖಿತ ಮೌಲ್ಯಂಕನ ಮತ್ತು ಶಾಲಾ ಹಂತದಲ್ಲಿ 10 ಅಂಕಗಳ ಮೌಖಿಕ ಮೌಲ್ಯಾಂಕನದಲ್ಲಿ ನಡೆಸಲಾಗಿದೆ. ಒಟ್ಟಾರೆ 50 ಅಂಕಗಳಲ್ಲಿ ವಿದ್ಯಾರ್ಥಿ ಗಳಿಸಿ ಅಂಕಗಳನ್ನು 20 ಅಂಕಗಳಿಗೆ ಪರಿವರ್ತಿಸಿ ಗ್ರೇಡ್ ನೀಡಲಾಗುತ್ತದೆ.

ಮಾರ್ಚ್ 27 ರಿಂದ ಏಪ್ರಿಲ್ 1 ರವರೆಗೆ ಶಾಲಾ ಹಂತದಲ್ಲಿ ಮೌಲ್ಯಂಕನ ನಡೆಸಲಾಗಿದ್ದು, ಯಾವುದೇ ವಿದ್ಯಾರ್ಥಿಯನ್ನು ಅನುತ್ತೀರ್ಣ ಮಾಡುವಂತಿಲ್ಲ ಎಂಬ ಸೂಚನೆ ನೀಡಲಾಗಿದೆ. ಫಲಿತಾಂಶವನ್ನು ಸಂಬಂಧಿಸಿದ ವಿದ್ಯಾರ್ಥಿ ಹಾಗೂ ಪಾಲಕರಿಗೆ ಮಾತ್ರ ತಿಳಿಸಲಾಗುತ್ತಿದೆ.

## ಆಕ್ಸ್‌ಫಾಮ್ ಇಂಡಿಯಾ ವಿರುದ್ಧ ಸಿಬಿಐ ತನಿಖೆಗೆ ಗೃಹ ಸಚಿವಾಲಯ ಶಿಫಾರಸು

ನವದೆಹಲಿ: ವಿದೇಶಿ ದೇಣಿಗೆ(ನಿಯಂತ್ರಣ) ಕಾಯಿದೆ, 2010 ಅನ್ನು ಉಲ್ಲಂಘಿಸಿದ ಆರೋಪ ಎದುರಿಸುತ್ತಿರುವ ಎನ್ ಜಿಒ ಆಕ್ಸ್‌ಫಾಮ್ ಇಂಡಿಯಾದ ವ್ಯವಹಾರಗಳ ಕುರಿತು ಸಿಬಿಐ ತನಿಖೆಗೆ ಕೇಂದ್ರ ಗೃಹ ಸಚಿವಾಲಯ ಗುರುವಾರ ಶಿಫಾರಸು ಮಾಡಿದೆ ಎಂದು ಮೂಲಗಳು ತಿಳಿಸಿವೆ.

ಎಫ್‌ಸಿಆರ್‌ಎ ಅಡಿಯಲ್ಲಿ ನೋಂದಾಯಿಸಿದ ನಂತರವೂ ಆಕ್ಸ್‌ಫಾಮ್ ಇಂಡಿಯಾ ವಿದೇಶಿ ದೇಣಿಗೆಯನ್ನು ವಿವಿಧ ಘಟಕಗಳಿಗೆ ವರ್ಗಾಯಿಸುವುದನ್ನು ಮುಂದುವರೆಸಿದೆ ಎಂದು ಕೇಂದ್ರ ಗೃಹ ಸಚಿವಾಲಯ ಹೇಳಿದೆ.




ಆದಾಯ ತೆರಿಗೆ ಇಲಾಖೆ ನಡೆಸಿದ ಸಮೀಕ್ಷೆಯಲ್ಲಿ, ಆಕ್ಸ್‌ಫಾಮ್ ಇಂಡಿಂ–ಯಾ ಇತರ ಎಫ್‌ಸಿಆರ್‌ಎ–ನೋಂದಾಯಿತ ಸಂಘಗಳಿಗೆ ಅಥವಾ ಲಾಭದಾಯಕ ಮಾರ್ಗದ ಮೂಲಕ ಹಣವನ್ನು ರೂಟ್ ಮಾಡಿ, ಎಫ್‌ಸಿಆರ್‌ಎಯ ನಿಬಂಧನೆಗಳನ್ನು ತಪ್ಪಿಸಲು ಯೋಜಿಸುತ್ತಿರುವುದು ಅದರ ಹಲವು ಇಮೇಲ್‌ಗಳಲ್ಲಿ ಕಂಡುಬಂದಿವೆ ಎಂದು ಮೂಲಗಳು ತಿಳಿಸಿವೆ.

ಸಾಮಾಜಿಕ ಕಾರ್ಯಗಳನ್ನು ಕೈಗೊಳ್ಳಲು ನೋಂದಾಯಿಸಿಕೊಂಡಿರುವ ಆಕ್ಸ್‌ಫಾಮ್ ಇಂಡಿಯಾ, ತನ್ನ ಸಹವರ್ತಿಗಳು ಮತ್ತು ಉದ್ಯೋಗಿಗಳ ಮೂಲಕ ನೀತಿ ಸಂಶೋಧನಾ ಕೇಂದ್ರಕ್ಕೆ **(CPR)** ಕಮಿಷನ್ ರೂಪದಲ್ಲಿ ಹಣವನ್ನು ರವಾನಿಸಿದೆ ಎಂದು ಮೂಲಗಳು ಹೇಳಿವೆ.

ಆಕ್ಸ್‌ಫಾಮ್ ಇಂಡಿಯಾ ಒಂದು ಎನ್‌ಜಿಒ ಸಂಸ್ಥೆಯಾಗಿದ್ದು, ಇದು ಮಕ್ಕಳ ಶಿಕ್ಷಣ, ಮಹಿಳಾ ಸಬಲೀಕರಣ, ಅಸಮಾನತೆಯ ಬಗ್ಗೆ ಧ್ವನಿ ಎತ್ತುವ ಕಾರ್ಯವನ್ನು ತನ್ನ ವರದಿಯ ಮೂಲಕ ಮಾಡುತ್ತದೆ.

## ಹಣ ಸೊಂಟಕ್ಕೆ ಕಟ್ಟಿಕೊಂಡು ಬೈಕ್‌ಲ್ಲಿ ಸಾಗಾಟ; 7 ಲಕ್ಷ ರೂ. ಪೊಲೀಸರ ವಶಕ್ಕೆ

ದಾವಣಗೆರೆ: ಚುನಾವಣೆ ಸಮೀಪದಲ್ಲಿ ಲಕ್ಷಾಂತರ, ಕೋಟ್ಯಾಂತರ ರೂಪಾಯಿ ಹಣ ಅಕ್ರಮವಾಗಿ ಸಾಗಾಟವಾಗುತ್ತಿರುವುದು ಅಲ್ಲಲ್ಲಿ ಪತ್ತೆಯಾಗುತ್ತಿದೆ. ಇದೀಗ ದಾವಣಗೆರೆಯಲ್ಲೂ ದಾಖಲೆ ಇಲ್ಲದೆ ಸಾಗಿಸುತ್ತಿದ್ದ 7.5 ಲಕ್ಷ



ಹಣವನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ದಾವಣಗೆರೆ ಜಿಲ್ಲೆಯ ಹೊನ್ನಾಳಿ ನ್ಯಾಮತಿ ತಾಲೂಕಿನ ಜೀನಹಳ್ಳಿ ಚೆಕ್ ಪೋಸ್ಟ್‌ನಲ್ಲಿ ಬೈಕ್ ತಡೆದ ಪೊಲೀಸರು ಸವಾರನನ್ನು ತಪಾಸಣೆ ನಡೆಸಿದ್ದಾರೆ. ಈ ವೇಳೆ ಸೊಂಟದಲ್ಲಿ ಕಂತೆಕಂತೆ ನೋಟುಗಳು ಪತ್ತೆಯಾಗಿವೆ.

ಶಿಕಾರಿಪುರ ಮೂಲದ ಸೈಫುಲ್ಲಾ ಮತ್ತು ಕುಮಾರ್ ಎಂಬವರು ಬೈಕ್ನಲ್ಲಿ ಹಣ ಸಾಗಾಟ ಮಾಡುತ್ತಿದ್ದರು. ವಿಚಾರಣೆ ವೇಳೆ ಸರಿಯಾದ ಮಾಹಿತಿ ನೀಡದೆ ದಾವಣಗೆರೆಯಿಂದ ಬಂದಿದ್ದು, ಹೊನ್ನಾಳಿಯಿಂದ ಬಂದಿದ್ದು ಎಂದು ಗೊಂದಲ ಸೃಷ್ಟಿಸಿದ್ದಾರೆ. ಬೈಕ್ ಸವಾರರನ್ನು ತಪಾಸಣೆ ನಡೆಸುವಾಗಲೇ ಪೊಲೀಸ್ ಸಿಬ್ಬಂದಿ ವಿಡಿಯೋ ಚಿತ್ರೀಕರಣ ಮಾಡಿದ್ದಾರೆ.

## 85 ವರ್ಷದ ವೃದ್ಧೆಯನ್ನು ಅತ್ಯಾಚಾರ: ಆರೋಪಿ ಬಂಧನ



ಹಾಸನ: 85 ವರ್ಷದ ವೃದ್ಧೆಯನ್ನು ಬರ್ಬರವಾಗಿ ಕೊಂದು ಬಳಿಕ ಅತ್ಯಾಚಾರವೆಸಗಿದ ಅಮಾನುಷ ಘಟನೆ ಹಾಸನ ಜಿಲ್ಲೆಯ ಅರಸೀಕೆರೆ ತಾಲೂಕಿನ ಯರೇಹಳ್ಳಿ ಗ್ರಾಮದಲ್ಲಿ ನಡೆದಿದೆ.

ಅರಸೀಕೆರೆ ತಾಲೂಕಿನ ಯರೇಹಳ್ಳಿ ಗ್ರಾಮದ ಮಿಥುನ್ ಕುಮಾರ್ (32) ಅತ್ಯಾಚಾರ ಎಸಗಿದ ಆರೋಪಿಯಾಗಿದ್ದು, ಐದು ವರ್ಷಗಳ ಹಿಂದೆಯೂ ಇದೇ ರೀತಿ ವೃದ್ಧೆಯ ಮೇಲೆ ಅತ್ಯಾಚಾರಕ್ಕೆ ಯತ್ನಿಸಿದ್ದ.

ಅದೇ ಸುಳಿವು ಹಿಡಿದು ವಿಚಾರಣೆ ನಡೆಸಿದಾಗ ತಾನು ಮಾಡಿದ ಪಾಪ ಕೃತ್ಯವನ್ನು ಒಪ್ಪಿಕೊಂಡಿದ್ದು, ಪೊಲೀಸರು ಈತನನ್ನು ಬಂಧಿಸಿದ್ದಾರೆ. ಏಪ್ರಿಲ್ 1ರಂದು ತನ್ನ ಜಮೀನಿನ ಬಳಿ ತೆರಳಿದ್ದ ವೃದ್ಧೆಯನ್ನು ಅತ್ಯಾಚಾರ ಮಾಡಲು ಯತ್ನಿಸಿದ್ದು, ಇದಕ್ಕೆ ಪ್ರತಿರೋಧ ತೋರಿದ ವೃದ್ಧೆಯ ತಲೆಮೇಲೆ ಕಲ್ಲು ಎತ್ತಿಹಾಕಿ ಹತ್ಯೆಗೈದು ಬಳಿಕ ಅತ್ಯಾಚಾರ ಎಸಗಿದ್ದಾನೆ.

ತನ್ನ ಜಮೀನಿನ ಬಳಿ ತೆರಳಲು ಹೋಗಿ ದಾರಿತಪ್ಪಿ ಬೇರೆಡೆ ಹೋಗಿದ್ದ ಅಜ್ಜಿಯನ್ನು ಜಮೀನಿನ ಬಳಿ ಬಿಡುವುದಾಗಿ ಬೈಕಿನಲ್ಲಿ ಕರೆದೊಯ್ದು ನಿರ್ಜನ ಪ್ರದೇಶದಲ್ಲಿ ಅತ್ಯಾಚಾರ ಎಸಗಲು ಯತ್ನಿಸಿದ್ದಾನೆ. ಈ ದೌರ್ಜನ್ಯವನ್ನು ವಿರೋಧಿಸಿದಾಗ ಬರ್ಬರವಾಗಿ ಕೊಂದು ನಂತರ ವೃದ್ಧೆಯ ಮೇಲೆ ಅತ್ಯಾಚಾರವೆಸಗಿದ್ದಾನೆ.

ತಾಯಿ ಮನೆಗೆ ಬಂದಿಲ್ಲ ಎಂದು ಏಪ್ರಿಲ್ 2ರಂದು ಕುಟುಂಬಸ್ಥರು ಹುಡುಕಾಡಿದ ವೇಳೆ ಯರೇಹಳ್ಳಿ ಗ್ರಾಮದ ಜಮೀನಿನಲ್ಲಿ ವೃದ್ಧೆಯ ಮೃತದೇಹ ಸಂಪೂರ್ಣ ಬೆತ್ತಲೆ ಸ್ಥಿತಿಯಲ್ಲಿ ಪತ್ತೆಯಾಗಿದೆ.

ಅನುಮಾನಾಸ್ಪದ ಸಾವು ಕೇಸು ದಾಖಲಿಸಿಕೊಂಡ ಪೊಲೀಸರು ತನಿಖೆ ನಡೆಸಿದಾಗ ಈ ಅಮಾನುಷ ಕೃತ್ಯ ಬಯಲಾಗಿದ್ದು, ಕೊಲೆ ಅತ್ಯಾಚಾರ ಖಾತ್ರಿಯಾಗುತ್ತಲೇ ಅನುಮಾನಾಸ್ಪದ ಸಾವು ಪ್ರಕರಣವನ್ನು ಕೊಲೆ ಅತ್ಯಾಚಾರ ಕೇಸ್ ಆಗಿ ಬದಲಾಯಿಸಿ ಆರೋಪಿಯನ್ನು ಬಂಧಿಸಿದ್ದಾರೆ.

## ಅಬಕಾರಿ ನೀತಿ ಹಗರಣ: ಸತ್ಯೇಂದ್ರ ಜೈನ್‌ಗೆ ಜಾಮೀನು ನಿರಾಕರಣೆ

ನವದೆಹಲಿ: ಅಬಕಾರಿ ನೀತಿ ಹಗರಣ–ಕ್ಕೆ ಸಂಬಂಧಿಸಿದಂತೆ ಹಣಕಾಸು ವರ್ಗಾವಣೆ ಪ್ರಕರಣದಲ್ಲಿ ತಿಹಾರ್ ಜೈಲಿನಲ್ಲಿರುವ ಎಎಪಿ ನಾಯಕ ಹಾಗೂ ಮಾಜಿ ಸಚಿವ ಸತ್ಯೇಂದ್ರ ಜೈನ್‌ಗೆ ದೆಹಲಿ ಹೈಕೋರ್ಟ್ ಜಾಮೀನು ನಿರಾಕರಿಸಿದೆ.

ಸತ್ಯೇಂದ್ರ ಜೈನ್ ಪರ ವಕೀಲರು ಜಾಮೀನು ಕೋರಿ ಅರ್ಜಿ ಸಲ್ಲಿಸಿದ್ದರು. ಜಾಮೀನು ಅರ್ಜಿಯಲ್ಲಿ ಸತ್ಯೇಂದರ್ ಜೈನ್ ಅವರು ಎಲ್ಲಾ ಸಂದರ್ಭಗಳಲ್ಲಿ ಜಾರಿ ನಿರ್ದೇಶನಾಲಯದೊಂದಿಗೆ ಸಹಕರಿಸಿದ್ದಾರೆ. ಹಾಗೂ ಸತ್ಯೇಂದ್ರ ಜೈನ್ ಅವರ ಆದಾಯವನ್ನು ತಪ್ಪಾಗಿ ಗುರುತಿಸಲಾಗಿದೆ. ಈ ಹಿನ್ನೆಲೆಯಲ್ಲಿ ಅವರಿಗೆ ಜಾಮೀನು ನೀಡಬೇಕು ಎಂದು ನ್ಯಾಯಾಲಯಕ್ಕೆ ಮನವಿ ಮಾಡಿದ್ದರು.

ಸತ್ಯೇಂದ್ರ ಜೈನ್ ಅವರ ಆದಾಯವನ್ನು ತಪ್ಪಾಗಿ ಗುರುತಿಸಿಲ್ಲ, ಅವರು ಪ್ರಭಾವಿ ವ್ಯಕ್ತಿಯಾಗಿದ್ದು, ಸಾಕ್ಷ್ಯಗಳನ್ನು ತಿರುಚಬಹುದು ಆಗಾಗಿ ಅವ–ರಿಗೆ ಜಾಮೀನು ನೀಡಬಾರದು ಎಂದು ಜಾರಿ ನಿರ್ದೇಶನಾಲಯದ ಅಧಿಕಾರಿಗಳು ನ್ಯಾಯಾಲಯಕ್ಕೆ ಮನವಿ ಮಾಡಿದ್ದರು.

ಹಣ ಅಕ್ರಮ ವರ್ಗಾವಣೆ ಪ್ರಕರಣದ ಆರೋಪಕ್ಕೆ ಸಂಬಂಧಿಸಿದಂತೆ ಜೈನ್ ಅವರು 2022 ಮೇ 20ರಿಂದ ತಿಹಾರ್ ಜೈಲಿನಲ್ಲಿದ್ದಾರೆ.

# ಬಿಜೆಪಿ ಕಚೇರಿಯಲ್ಲಿ ಬಿಜೆಪಿ ಸಂಸ್ಥಾಪನಾ ದಿನಾಚರಣೆ

ಬಳ್ಳಾರಿ: ಬಳ್ಳಾರಿ ನಗರದ ಸಂಗನಕಲ್ಲು ರಸ್ತೆಯಲ್ಲಿರುವ ವಾಜಪೇಯಿ ಬಡವಾಣೆಯಲ್ಲಿ ದಿನಾಂಕ 6.4.2023 ರಂದು ನೂತನ ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ಬಿಜೆಪಿ ಸಂಸ್ಥಾಪನಾ ದಿನಾಚರಣೆಯನ್ನು ಮಾಡಲಾಯಿತು. ಮತ್ತು ನರೇಂದ್ರ ಮೋದಿ ಜಿಯವರ ಬಾಷಣ ನೇರಪ್ರಸಾರದಲ್ಲಿ ವಿಕ್ಷಿಸಿಲಾಯಿತು.



ಈ ಕಾರ್ಯಕ್ರಮದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷರಾದ ಗೋನಾಳು ಮುರಹರಗೌಡರವರು, ಬಳ್ಳಾರಿ ನಗರ ಜನಪ್ರಿಯ ಶಾಸಕರಾದ ಜಿ ಸೋಮಶೇಖರ ರೆಡ್ಡಿ ಯವರು, ರಾಜ್ಯ ರೈತ ಮೋರ್ಚಾ ಪ್ರಧಾನ ಕಾರ್ಯದರ್ಶಿಗಳಾದ ಗುರುಲಿಂಗನಗೌಡರವರು, ಜಿಲ್ಲಾ ಉಪಾಧ್ಯಕ್ಷರಾದ ವೀರಶೇಖರ ರೆಡ್ಡಿಯವರು, ಶ್ರೀನಿವಾಸ್ ಮೋತ್ಕರ್ ರವರು, ಉಪಾಧ್ಯಕ್ಷರಾದ ಗಾಳಿ ಶಂಕರಪ್ಪ ರವರು, ಕಾರ್ಯದರ್ಶಿಗಳಾದ ಸುಮಾ ರೆಡ್ಡಿ ಯವರು, ಕಾರ್ಯಾಲಯ ಕಾರ್ಯದರ್ಶಿಗಳಾದ ಬಿ ರಾಮಕೃಷ್ಣರವರು, ಜಿಲ್ಲಾ ಖಜಾಂಚಿಯಾದ ಶಂಭು ಪ್ರಸಾದ್ ರವರು,ಜಿಲ್ಲಾ ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷರಾದ ಸುಗುಣಾ ರವರು, ಒಬಿಸಿ ಮೋರ್ಚಾದ ಜಿಲ್ಲಾಧ್ಯಕ್ಷರಾದ ಗಾದಿಲಿಂಗನಗೌಡರವರು, ಪುಷ್ಪಾ ರವರು, ರಾಜ್ಯ ಒಬಿಸಿ ಮೋರ್ಚಾದ ಕಾರ್ಯಕಾರಣಿ ಸದಸ್ಯರಾದ ತಿಪ್ಪಣ್ಣ ರವರು, ಹಿರಿಯ ಮುಖಂಡರಾದ ಜಿ ರಾಮಚಂದ್ರಯ್ಯ ರವರು, ರಾಜ್ಯ ಕಾರ್ಯಕಾರಣಿ ಸದಸ್ಯರಾದ ವಿಜಯ ಲಕ್ಷ್ಮಿ ರವರು,ಬಳ್ಳಾರಿ ನಗರ ಮಂಡಲದ ಅಧ್ಯಕ್ಷರಾದ ಕೆ ಬಿ ವೆಂಕಟೇಶ್ ರವರು, ಪ್ರಧಾನ ಕಾರ್ಯದರ್ಶಿಗಳಾದ ಕೆ ರಾಮಾಂಜಿ ಯವರು, ಬಿಜೆಪಿ ಜಿಲ್ಲಾ ಮಾಧ್ಯಮ ವಿಭಾಗದ ಸಹ ಸಂಚಾಲಕರಾದ ರಾಜೀವ್ ತೋಗರಿ , ಬಿಜೆಪಿ ಜಿಲ್ಲಾ ಸೋಶಿಯಲ್ ಮೀಡಿಯಾ ಅಂಜಿ ಕಮ್ಮರಚೇಡು ರವರು,ಯವರು,ಚುನಾಯಿತ ಜನಪ್ರತಿನಿಧಿಗಳಾದ ವೇಮಣ್ಣ ರವರು, ಜಿಲ್ಲಾ ಎಸ್ ಟಿ ಮೋರ್ಚಾ ಪ್ರಧಾನ ಕಾರ್ಯದರ್ಶಿಗಳಾದ ರಘು, ಮೈನಾರಿಟಿ ಮೋರ್ಚಾ ಪ್ರಧಾನ ಕಾರ್ಯದರ್ಶಿಗಳಾದ ಮೆಹಬೂಬ್ ಬಾಷ ರವರು, ಬಿಜೆಪಿ ಮುಖಂಡರಾದ ಶಿವಾನಂದ, ಪ್ರತಾಪ್ ರೆಡ್ಡಿ ಯವರು,ರವಿ ತೇಜ, ಭಾಗವಹಿಸಿದ್ದರು.

# ಮಾದರಿ ನೀತಿ ಸಂಹಿತೆ; ಚೆಕ್‌ಪೋಸ್ಟ್ ಗಳಲ್ಲಿ ಬಿಗಿ ಭದ್ರತೆ–10 ಲಕ್ಷ ರೂ. ನಗದು ಹಣ, 131.13 ಲೀ ಮದ್ಯ ವಶ: ಡಿಸಿ ಮಾಲಪಾಟಿ




ಬಳ್ಳಾರಿ : ಸಾರ್ವತ್ರಿಕ ವಿಧಾನಸಭಾ ಚುನಾವಣೆಗೆ ಸಂಬಂಧಿಸಿದಂತೆ ನೀತಿ ಸಂಹಿತೆ ಜಾರಿಯಲ್ಲಿದ್ದು,ಬುಧವಾರದಂದು ನೀತಿ ಸಂಹಿತೆ ಉಲ್ಲಂಘಿಸಿ ದಾಖಲೆಯಿಲ್ಲದೇ ಸಾಗಿಸುತ್ತಿದ್ದ 10 ಲಕ್ಷ ನಗದು ಹಣ ಸೇರಿ 131.13 ಲೀಟರ್ (ರೂ.50,268 ಸಾವಿರ ಬೆಲೆಬಾಳುವ) ಮದ್ಯ ವಶಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪವನ್ ಕುಮಾರ್ ಮಾಲಪಾಟಿ ಅವರು ಮಾಹಿತಿ ನೀಡಿದ್ದಾರೆ.

ಜಿಲ್ಲೆಯಾದ್ಯಂತ ನೀತಿ ಸಂಹಿತೆ ಕಟ್ಟುನಿಟ್ಟಾಗಿ ಜಾ–ರಿಗೊಳಿಸಲು ವಿವಿಧ ತಂಡಗಳನ್ನು ರಚಿಸಲಾಗಿದ್ದು, ಈಗಾಗಲೇ ಕಾರ್ಯಪ್ರವೃತ್ತವಾಗಿದೆ. ಒಟ್ಟು 43 ಫ್ಲೈಯಿಂಗ್ ಸ್ಕ್ವಾಡ್, 27 ಎಸ್‌ಎಸ್‌ಟಿ ತಂಡ ಹಾಗೂ 7 ಅಬಕಾರಿ ತಂಡ ಕೆಲಸ ನಿರ್ವಹಿಸುತ್ತಿವೆ.

ಬುಧವಾರ ವರದಿಯ ಪ್ರಕಾರ, 92–ಸಿರುಗುಪ್ಪ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಸ್ಟಾಟಿಕ್ ಸರ್ವೈವ್‌ಲೆನ್ಸ್ ಟೀಮ್(ಎಸ್‌ಎಸ್‌ಟಿ) ತಂಡವು ಪರಿಶೀಲನೆ ವೇಳೆ ದಾಖಲೆ ಇಲ್ಲದೇ ಸಾಗಿಸುತ್ತಿದ್ದ 10 ಲಕ್ಷ ರೂ.ಗಳನ್ನು ವಶಪಡಿಸಿಕೊಂಡು ಕಮಿಟಿ ಮುಂದೆ ಹಾಜರು ಪಡಿಸಿ ವಿಚಾರಣೆಗೆ ಒಳಪಡಿಸಲಾಗಿದೆ. ಯಾವುದೇ ಎಫ್‌ಐಆರ್ ಪ್ರಕರಣ ದಾಖಲಿಸಿರುವುದಿಲ್ಲ.

ಅಬಕಾರಿ ಇಲಾಖೆಯಿಂದ 102.60 ಲೀಟರ್ ಮದ್ಯ(37,668 ಸಾವಿರ ರೂ. ಬೆಲೆಬಾಳುವ) ಹಾಗೂ ಪೊಲೀಸ್ ಇಲಾಖೆಯಿಂದ 28.53 ಲೀಟರ್ (12,600 ರೂ. ಬೆಲೆಬಾಳುವ) ಮದ್ಯ ಸೇರಿದಂತೆ ಒಟ್ಟು 131.13 ಲೀಟರ್ ಮದ್ಯ ವಶಪಡಿಸಿಕೊಳ್ಳಲಾಗಿದೆ ಎಂದು ಅವರು ತಿಳಿಸಿದ್ದಾರೆ.

# ವಿದವೆಯನ್ನು ಮದುವೆಯಾಗುವುದಾಗಿ ನಂಬಿಸಿ 3 ಬಾರಿ ಗರ್ಭಪಾತ ಮಾಡಿಸಿದ ಪೊಲೀಸ್



ಕೊಪ್ಪಳ: ಪೊಲೀಸ್ ಪೇದೆಯೊಬ್ಬ ವಿದವೆಯನ್ನು ಪ್ರೀತಿಸಿ, ವಿವಾಹವಾಗುವುದಾಗಿ ನಂಬಿಸಿ ಆಕೆಗೆ ಮೂರು ಬಾರಿ ಗರ್ಭಪಾತ ಮಾಡಿ ಈಗ ಕೈಕೊಟ್ಟಿರುವ ಘಟನೆ ಕೊಪ್ಪಳದಲ್ಲಿ ನಡೆದಿದೆ.

ಕೊಪ್ಪಳದ ಮುನಿರಾಬಾದ್ ನಲ್ಲಿ ಐಆರ್ ಬಿ ಪೊಲೀಸ್ ಆಗಿರುವ ಯಮನೂರಪ್ಪ, ವಿದವೆಯನ್ನು ಪ್ರೀತಿಸಿ, ಆಕೆಯನ್ನು ವಿವಾಹವಾಗುವುದಾಗಿ ನಂಬಿಸಿ 5 ವರ್ಷಗಳ ಕಾಲ ಲಿವಿನ್ ಟುಗೆದರ್ ಸಂಬಂಧವಿಟ್ಟುಕೊಂಡು 5 ವರ್ಷಗಳಲ್ಲಿ ಮೂರು ಬಾರಿ ಆಕೆಗೆ ಗರ್ಭಪಾತ ಮಾಡಿಸಿದ್ದಾನೆ.

ಈಗ ಮತ್ತೊಮ್ಮೆ ಮಹಿಳೆ ಗರ್ಭಿಣಿಯಾಗಿದ್ದು, ಈ ಬಾರಿ ಗರ್ಭಪಾತಕ್ಕೆ ಒಪ್ಪಿಲ್ಲ, ಮದುವೆಯಾಗುವಂತೆ ಮಹಿಳೆ ಹಠ ಹಿಡಿದಿದ್ದಾಳೆ.

ಇದರಿಂದ ಪೊಲೀಸನ ಪ್ರೀತಿಯ ನಾಟಕ ಬಯಲಾಗಿದ್ದು, ಮಹಿಳೆಗೆ ಕೈಕೊಟ್ಟು ನಾಪತ್ತೆಯಾಗಿದ್ದಾನೆ. ಬಟ್ಟೆ ಅಂಗಡಿ ನಡೆಸುತ್ತಿದ್ದ ಮಹಿಳೆಗೆ ಪತಿ ಸಾವನ್ನಪ್ಪಿದ್ದ.

ಎರಡನೆ ಮದುವೆಯಾಗಿತ್ತಾದರೂ ಅದು ವಿಚ್ಛೇಧನವಾಗಿತ್ತು. ಬಟ್ಟೆ ಅಂಗಡಿ ನಡೆಸಿ ಜೀವನ ಸಾಗಿಸುತ್ತಿದ್ದ ಮಹಿಳೆಗೆ ಪೊಲೀಸ್ ಯಮನೂರಪ್ಪ ಪರಿಚಯವಾಗಿದ್ದು, ಮದುವೆಯಾಗುವುದಾಗಿ ನಂಬಿಸಿ 5 ವರ್ಷ ಜೊತೆಗಿದ್ದು, ಈಗ ಆತ ಎಸ್ಕೇಪ್ ಆಗಿದ್ದಾನೆ. ಮಹಿಳೆ ಎಸ್ ಪಿ ಕಚೇರಿಗೆ ದೂರು ನೀಡಿದ್ದಾಳೆ.

# ಕಾಂಗ್ರೆಸ್ ತೊರೆದು ಕೆಆರ್‌ಪಿಪಿ ಪಕ್ಷಕ್ಕೆ ಸೇರ್ಪಡೆ



ಬಳ್ಳಾರಿ: ಬಳ್ಳಾರಿ ನಗರದ ಹವಂಬಾವಿ ಪ್ರದೇಶದಲ್ಲಿರುವ ಕೆ.ಆರ್.ಪಿ.ಪಿ ಗ್ಲಾಸ್ ಹೌಸ್ ಕಛೇರಿಯಲ್ಲಿ ಬಳ್ಳಾರಿಯ 19ನೇ ವಾರ್ಡಿನ ಹುಸೇನ್ ನಗರ್ ನಿವಾಸಿಗಳಾದ ಗೋಪಿ, ಶ್ರೀಧರ್ ಇವರ ನೇತೃತ್ವದಲ್ಲಿ ಕಾಂಗ್ರೆಸ್ ಪಕ್ಷ ತೊರೆದು ಗೋವಿಂದರಾಜುಲು, ವೆಂಕಟೇಶ್, ವೀರೇಶ್, ನವೀನ್ ಕುಮಾರ್, ಉದಯಕುಮಾರ್, ರಘು, ಅನೇಕ ಮಹಿಳೆಯರು ಸೇರಿದಂತೆ ನೂರಾರು ಕಾರ್ಯಕರ್ತರು ಕಲ್ಯಾಣ ರಾಜ್ಯ ಪ್ರಗತಿ ಪಕ್ಷದ ನಗರ ಅಭ್ಯರ್ಥಿಯಾದ ಲಕ್ಷ್ಮಿ ಅರುಣಾ, ಮತ್ತು ಪಕ್ಷದ ಮುಖಂಡರಾದ ಅಲಿಖಾನ್, ಎಸ್ ಟಿ ಘಟಕದ ಅಧ್ಯಕ್ಷರಾದ ಉಮಾರಾಜ್ ಇವರ ಸಮ್ಮುಖದಲ್ಲಿ ಕಲ್ಯಾಣ ರಾಜ್ಯಪ್ರಗಿ ಪಕ್ಷಕ್ಕೆ ಸೇರ್ಪಡೆಗೊಂಡರು. ಈ ಸಂದರ್ಭದಲ್ಲಿ ಪಕ್ಷದ ಪದಾಧಿಕಾರಿಗಳು ಕಾರ್ಯಕರ್ತರು ಉಪಸ್ಥಿತರಿದ್ದರು.

# ಮುದ್ದಾಪುರ ಗ್ರಾಮದ ಬೂತ್ ಮಟ್ಟದ ಕಾರ್ಯಕರ್ತರ ಸಂಘಟನಾ ಸಭೆಯಲ್ಲಿ ಭಾಗಿಯಾದ ಟಿ ಹೆಚ್ ಸುರೇಶ್ ಬಾಬು

ಬಳ್ಳಾರಿ: ಬಳ್ಳಾರಿ ಜಿಲ್ಲೆಯ ಕಂಪ್ಲಿ ಕ್ಷೇತ್ರದ ವ್ಯಾಪ್ತಿಯ ನಂ.10 ಮುದ್ದಾಪುರ ಗ್ರಾಮಕ್ಕೆ ಟಿ ಹೆಚ್ ಸುರೇಶ್ ಬಾಬು ರವರು ತೆರಳಿ ಗ್ರಾಮದಲ್ಲಿರುವ ವಿವಿಧ ದೇವಸ್ಥಾನಗಳಿಗೆ ಭೇಟಿ ನೀಡಿ, ದರ್ಶನ ಪಡೆದು, ಕ್ಷೇತ್ರದ ಸಮೃದ್ಧಿಗಾಗಿ ಪ್ರಾರ್ಥಿಸಿದರು.

ಬಳಿಕ ಆಯೋಜಿಸಿದ್ದ ಗ್ರಾಮದ ಬೂತ್ ಮಟ್ಟದ ವಿವಿಧ ಸಮುದಾಯಗಳ ಸಂಘಟನಾ ಸಭೆಯಲ್ಲಿ ಭಾಗವಹಿಸಿ ಗ್ರಾಮದಲ್ಲಿ ಕೈಗೊಳ್ಳಬೇಕಾದ ಅಭಿವೃದ್ಧಿ ಕಾರ್ಯಕ್ರಮಗಳ ಕುರಿತು ಮಾಹಿತಿ ಪಡೆದು ಈಡೇರಿಸುವ ಭರವಸೆ ನೀಡಿದರು.

ಇದೆ ವೇಳೆ ಹಲವು ಮುಖಂಡರು ಕಾಂಗ್ರೆಸ್ ಪಕ್ಷವನ್ನು ತೊರೆದು ಟಿ ಹೆಚ್ ಸುರೇಶ್ ಬಾಬು" ನೇತೃತ್ವದಲ್ಲಿ ಬಿಜೆಪಿ ಪಕ್ಷಕ್ಕೆ ಸೇರ್ಪಡೆಯಾದರು.

ನೂತನವಾಗಿ ಪಕ್ಷ ಸೇರ್ಪಡೆಯಾದ ಎಲ್ಲರನ್ನು



ಅಭಿನಂದಿಸಿ ಕಂಪ್ಲಿ ಕ್ಷೇತ್ರದ ಸಮೃದ್ಧಿಗಾಗಿ ಬಿಜೆಪಿ ಪಕ್ಷವನ್ನು ಬೆಂಬಲಿಸುವಂತೆ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಪಕ್ಷದ ಹಿರಿಯರಾದ ಯರಂಗಳಿ ತಿಮ್ಮರೆಡ್ಡಿ, ರವರು ಗ್ರಾಮದ ಹಿರಿಯ ಕಾರ್ಯಕರ್ತರು ಗ್ರಾಮಸ್ಥರು ಅಭಿಮಾನಿಗಳು ಜೊತೆಯಲ್ಲಿದ್ದರು.

# ಬೆಳಗಾವಿ ಜಿಲ್ಲೆ ಟಿಕೆಟ್ ಹಂಚಿಕೆ: ಹೊಸ ಪ್ರಯೋಗಕ್ಕೆ ಮುಂದಾದ ಕಾಂಗ್ರೆಸ್

ಬೆಂಗಳೂರು: ಕರ್ನಾಟಕ ವಿಧಾನಸಭಾ ಚುನಾವಣೆಗೆ ಕೆಲವೇ ದಿನಗಳು ಉಳಿದಿದ್ದು, ಕಾಂಗ್ರೆಸ್ ತನ್ನ ಅಭ್ಯರ್ಥಿಗಳ ಎರಡನೇ ಪಟ್ಟಿ ಬಿಡುಗಡೆ ಮಾಡಿದೆ. ಅಳೆದೂ ತೂಗಿ ಈ ಪಟ್ಟಿಯನ್ನು ಸಿದ್ಧಪಡಿಸಲಾಗಿದೆ. ಬೆಳಗಾವಿ ಜಿಲ್ಲೆಯ ನಾಲ್ಕು ಕ್ಷೇತ್ರಗಳಿಗೆ ಅಭ್ಯರ್ಥಿಗಳನ್ನು ಘೋಷಣೆ ಮಾಡಲಾಗಿದೆ. ಜಿಲ್ಲೆಯ 18ಕ್ಷೇತ್ರಗಳ ಪೈಕಿ 13 ಕ್ಷೇತ್ರಗಳಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗಿದೆ. ಮೊದಲ ಪಟ್ಟಿಯಲ್ಲಿ 9 ಕ್ಷೇತ್ರಗಳಿಗೆ ಅಭ್ಯರ್ಥಿಗಳನ್ನು ಘೋಷಣೆ ಮಾಡಲಾಗಿತ್ತು.

ಗೋಕಾಕ ಕ್ಷೇತ್ರದಲ್ಲಿ ರಮೇಶ್ ಜಾರಕಿಹೊಳಿ ವಿರುದ್ಧ ಹೊಸ ಮುಖವನ್ನು ಕಣಕ್ಕಿಳಿಸಿರುವುದು ಕುತೂಹಲ ಮೂಡಿಸಿದೆ. ಇಲ್ಲಿ ಡಾ ಮಹಾಂತೇಶ್ ಕಡಾಡಿ ಅವರನ್ನು ಕಣಕ್ಕಿಳಿಸಲಾಗಿದೆ. ಕಾಂಗ್ರೆಸ್ ಟಿಕೆಟ್ ಪಡೆಯುವ ನಿರೀಕ್ಷೆಯಲ್ಲಿ ಜೆಡಿಎಸ್‌ನಿಂದ ಕಾಂಗ್ರೆಸ್‌ಗೆ ಬಂದಿದ್ದ ಅಶೋಕ್ ಪೂಜಾರಿ ಅವರಿಗೆ ತೀವ್ರ ನಿರಾಸೆ ಉಂಟಾಗಿದ್ದು ಮುಂದೆ ಯಾವ ಹೆಜ್ಜೆ ಇಡಲಿದ್ದಾರೆ ಎನ್ನುವುದು ಕುತೂಹಲ ಮೂಡಿಸಿದೆ. ವೃತ್ತಿಯಲ್ಲಿ ವೈದ್ಯರಾಗಿರುವ ಡಾ ಮಹಾಂತೇಶ್ ಕಡಾಡಿ ಅವರಿಗೆ ಟಿಕೆಟ್ ನೀಡುವ ಮೂಲಕ ಕಾಂಗ್ರೆಸ್ ಹೊಸ ಪ್ರಯೋಗಕ್ಕೆ ಮುಂದಾಗಿದೆ.

ಮಹಾಂತೇಶ್ ಅವರು ಪಂಚಮಸಾಲಿ ಸಮುದಾಯಕ್ಕೆ ಸೇರಿದವರಾಗಿದ್ದಾರೆ. ಈ ಪ್ರಯೋಗ ಫಲಿತಾಂಶ ನೀಡಲಿದೆಯೆ ಎನ್ನುವುದು ಮುಂದಿನ ದಿನಗಳಲ್ಲಿ ತಿಳಿದು ಬರಲಿದೆ. ಗೋಕಾಕ ವಿಧಾನಸಭಾ ಕ್ಷೇತ್ರದಲ್ಲಿ ಟಿಕೆಟ್ ಖಚಿತ



ಎಂದು ಭಾವಿಸಿದ್ದ ಅಶೋಕ ಪೂಜಾರಿ ಈಗಾಗಲೇ ಪ್ರಚಾರ ಕೈಗೊಂಡಿದ್ದರು. ಟಿಕೆಟ್ ನೀಡುತ್ತೇವೆ ಎಂದು ಪಕ್ಷಕ್ಕೆ ಸೇರಿಸಿ ಕೊಂಡಿರುವುದು ಅವರೇ ಹೇಳಿ ಕೊಂಡಿದ್ದರು.

ಜಾರಕಿಹೊಳಿಗೆ ಪೈಪೋಟಿ ನೀಡಿದ್ದ ಪೂಜಾರಿ!

ಗೋಕಾಕ ವಿಧಾನಸಭಾ ಕ್ಷೇತ್ರದಲ್ಲಿ ರಮೇಶ್ ಜಾರಕಿಹೊಳಿಗೆ 2008ರಿಂದಲೂ ಅಶೋಕ್ ಪೂಜಾರಿ ಪೈಪೋಟಿ ನೀಡುತ್ತಲೇ ಬಂದಿದ್ದಾರೆ. ಆದರೆ ಒಮ್ಮೆಯೂ ಗೆಲುವು ದಾಖಲಿಸಲು ಸಾಧ್ಯವಾಗಿಲ್ಲ. 2008 ಮತ್ತು 2013ರಲ್ಲಿ ಜೆಡಿಎಸ್‌ನಿಂದ ಸ್ಪರ್ಧಿಸಿದ್ದ ಅಶೋಕ್ ಪೂಜಾರಿ ರಮೇಶ್ ಜಾರಕಿಹೊಳಿಗೆ ಪೈಪೋಟಿ ನೀಡಿದ್ದರು.

2018ರಲ್ಲಿ ಬಿಜೆಪಿಯಿಂದ ಸ್ಪರ್ಧಿಸಿದ್ದ ಅಶೋಕ್ ಪೂಜಾರಿ ಮತ್ತೆ ಗೋಕಾಕ್ ಸಾಹುಕಾರರಿಗೆ ತೀವ್ರ ಸ್ಪರ್ಧೆಯೊಡ್ಡಿದ್ದರು. 2019ರಲ್ಲಿ ಆಪರೇಶನ್ ಕಮಲ ಮೂಲಕ ರಮೇಶ್ ಜಾರಕಿಹೊಳಿ ಬಿಜೆಪಿ ಸೇರಿ ಸಚಿವರಾದ ನಂತರ ಅಶೋಕ್ ಪೂಜಾರಿ ಜೆಡಿಎಸ್‌ಗೆ ಮರಳಿ ಉಪ ಚುನಾವಣೆಯಲ್ಲಿ ಸ್ಪರ್ಧಿಸಿ ಮೂರನೇ ಸ್ಥಾನಕ್ಕೆ ತೃಪ್ತಿಪಟ್ಟಿದ್ದರು.

ಈ ಬಾರಿ ಕಾಂಗ್ರೆಸ್ ಟಿಕೆಟ್ ಪಡೆಯಲೇಬೇಕು ಎಂದು ಹಠ ತೊಟ್ಟು ಕಾಂಗ್ರೆಸ್‌ಗೆ ಬಂದಿದ್ದ ಅಶೋಕ್ ಪೂಜಾ–ರಿಗೆ ವರಿಷ್ಠರು ಶಾಕ್ ನೀಡಿದ್ದಾರೆ. ಇದೀಗ ಅಶೋಕ್ ಪೂಜಾರಿ ಜೆಡಿಎಸ್ ನತ್ತ ಮುಖ ಮಾಡುವ ಸಾಧ್ಯತೆಗಳಿವೆ ಎಂದು ಅವರ ಆಪ್ತರು ಹೇಳುತ್ತಾರೆ. ಪಂಚಮಸಾಲಿ ಲಿಂಗಾಯತ ಸಮುದಾಯಕ್ಕೆ ಟಿಕೆಟ್ ನೀಡಿರುವ ಕಾಂಗ್ರೆಸ್ ತಂತ್ರ ಎಷ್ಟರ ಮಟ್ಟಿಗೆ ಯಶಸ್ವಿಯಾಗುತ್ತದೆ ಎಂಬ ಕುತೂಹಲ ಮೂಡಿದೆ.

ಉಳಿದಂತೆ ಸವದತ್ತಿ ಕ್ಷೇತ್ರದಿಂದ ವಿಶ್ವಾಸ ವೈದ್ಯ, ನಿಪ್ಪಾಣಿ ಕ್ಷೇತ್ರಕ್ಕೆ ಕಾಕಾಸಾಹೇಬ ಪಾಟೀಲ್ ಹಾಗೂ ಕಿತ್ತೂರು ಕ್ಷೇತ್ರದಿಂದ ಬಾಬಾಸಾಹೇಬ ಪಾಟೀಲ್ ಅವರಿಗೆ ಕಾಂಗ್ರೆಸ್ ಟಿಕೆಟ್ ನೀಡಲಾಗಿದೆ.

# ಮತದಾನದ ಅರಿವು ಮೂಡಿಸುವ ವಿವಿಧ ಜಿಲ್ಲಾ ಮಟ್ಟದ ಕಾರ್ಯಕ್ರಮಗಳ ಆಯೋಜನೆ

ಧಾರವಾಡ: ಧಾರವಾಡ ಜಿಲ್ಲೆಯ ಹುಬ್ಬಳ್ಳಿ ಮತ್ತು ಧಾರವಾಡ ಶಹರಗಳಲ್ಲಿ ಸ್ವೀಪ್ ಕಾರ್ಯಕ್ರಮದಡಿ ಮತದಾನದ ಅರಿವು ಮೂಡಿಸುವ ಸಲುವಾಗಿ ವಿವಿಧ ಜಿಲ್ಲಾ ಮಟ್ಟದ ಕಾರ್ಯಕ್ರಮಗಳನ್ನು ಆಯೋಜಿಸಲು ತಿರ್ಮಾನಿಸಲಾಗಿದೆ. ಅದರಂತೆ ಜಿಲ್ಲೆಯ ಎಲ್ಲ ಜಿಲ್ಲಾ ಮಟ್ಟದ ಮತ್ತು ತಾಲೂಕ ಮಟ್ಟದ ಅಧಿಕಾರಿಗಳು ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಕಾರ್ಯಕ್ರಮಗಳನ್ನು ಯಶಸ್ವಿಗೊಳಿಸುವಂತೆ ಜಿಲ್ಲಾಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾ ಸ್ವೀಪ್ ನೋಡಲ್ ಅಧಿಕಾರಿ ಸ್ವರೂಪ ಟಿ.ಕೆ. ಅವರು ಆದೇಶಿಸಿದ್ದಾರೆ.

ಜಿಲ್ಲಾ ಮಟ್ಟದ ಕಾರ್ಯಕ್ರಮಗಳ ಪಟ್ಟಿ:

ಏ. 8 ರಂದು ಬೆಳಿಗ್ಗೆ 10–30 ರಿಂದ 11–30 ರ ವರೆಗೆ ಜಿಲ್ಲಾ ವಿಕಲಚೇತನರ ಕಲ್ಯಾಣ ಅಧಿಕಾರಿಗಳು ಅಂಗವಿಕಲ ಮತದಾರರ ಬೈಕ್ ರ್ಯಾಲಿಯನ್ನು ಆಯೋಜಿಸಿದ್ದಾರೆ. ಆರ್.ಎನ್. ಶೆಟ್ಟಿ ಕ್ರೀಡಾಂಗಣದಿಂದ ಕೆಸಿಸಿ ಬ್ಯಾಂಕ್, ಕಲಾಭವನದವರೆಗೆ ರ್ಯಾಲಿ ನಡೆಯಲಿದೆ. ಫಲಾನುಭವಿಗಳು ತಮ್ಮ ತ್ರಿಚಕ್ರ ವಾಹನಗಳೊಂದಿಗೆ ಹಾಜರಿರಬೇಕು.

ಏ.8 ರಂದು ಸಂಜೆ 7 ರಿಂದ 8 ರ ವರೆಗೆ ಕನ್ನಡ ಮತ್ತು ಇಲಾಖೆಯ ಸಹಾಯಕ ನಿರ್ದೇಶಕರು ಮೇಣದಬತ್ತಿ ಹಾಗೂ ಮೊಬೈಲ್ ಟಾರ್ಚ್ ರ್ಯಾಲಿಯನ್ನು ಆಯೋಜಿಸಿದ್ದಾರೆ, ಕೆಸಿಡಿ ಕಾಲೇಜ ಸರ್ಕಲ್ದಿಂದ ಜ್ಯುಬಲಿ ಸರ್ಕಲ್ವರೆಗೆ ರ್ಯಾಲಿ ನಡೆಯಲಿದೆ. ಮೇಣದಬತ್ತಿಯೊಂದಿಗೆ ವಸತಿ ನಿಲಯದ ವಿದ್ಯಾರ್ಥಿಗಳು ಭಾಗವಹಿಸಬೇಕು.

ಏ.10 ರಂದು ಬೆಳಿಗ್ಗೆ 10–30 ರಿಂದ ಸಂಜೆ 4 ಗಂಟೆಯವರೆಗೆ ಜಿಲ್ಲಾಮಟ್ಟದ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ತಹಸೀಲ್ದಾರರು ಜಿಲ್ಲಾ ಮಟ್ಟದ ಅಧಿಕಾರಿಗಳ ಬೈಕ್ ರ್ಯಾಲಿಯನ್ನು ಆಯೋಜಿಸಿದ್ದಾರೆ. ಜಿಲ್ಲಾಧಿಕಾರಿಗಳ ಕಚೇರಿಯಿಂದ ಕೆಸಿಡಿ ಸರ್ಕಲ್, ಸಪ್ತಾಪುರ, ಕರ್ನಾಟಕ ವಿಶ್ವವಿದ್ಯಾಲಯದವರೆಗೆ ರ್ಯಾಲಿ ನಡೆಯಲಿದೆ. ಎಲ್ಲ ಅಧಿಕಾರಿಗಳು ಹಾಜರಿದ್ದು, ಬೈಕ್ ರ್ಯಾಲಿಯಲ್ಲಿ ಭಾಗವಹಿಸಬೇಕು.

ಏ.11 ರಂದು ಮುಂಜಾನೆ 10 ರಿಂದ 11 ಗಂಟೆ ವರೆಗೆ ಡಿ ಡಿ ಪಿ ಐ, ಡಿ ಡಿ ಪಿ ಯು, ಎನ್‌ಎಸ್‌ಎಸ್, ಕ್ರೀಡಾ ಹಾಗೂ ಯುವಜನ ಇಲಾಖೆ ಅವರು ಮಾನವ ಸರಪಳಿ ಕಾರ್ಯಕ್ರಮವನ್ನು ಜ್ಯುಬಲಿ ಸರ್ಕಲ್ನಲ್ಲಿ ಆಯೋಜಿಸಿದ್ದಾರೆ. ಎಲ್ಲ ನೌಕರರು, ವಿದ್ಯಾರ್ಥಿಗಳು ಎನ್‌ಎಸ್‌ಎಸ್ ಯುವಕರು ಹಾಜರಿರಬೇಕು.

ಏ.11 ರಂದು ಬೆಳಿಗ್ಗೆ 10 ರಿಂದ ರಜಾಕ ಸೋನೇಖಾನ ಹಾಗೂ ಜವಳಿ ಅವರು ಸಿಗ್ನೇಚರ್ ಕ್ಯಾಂಪೇನ್ ಅನ್ನು ಅಂಜುಮನ್ ಕಾಲೇಜಿನಲ್ಲಿ ಆಯೋಜಿಸಲಾಗಿದೆ. ಮೈಕ್ಸೆಟ್. ಪ್ಲೇ ಕಾರ್ಡ್ಸ್‌ಗಳೊಂದಿಗೆ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು.

ಏ.13 ರಂದು ಬೆಳಿಗ್ಗೆ 10–30 ರಿಂದ 11–30 ರ ವರೆಗೆ ಹೊಸ ಬಸ್ಟ್ಯಾಂಡ್ನಲ್ಲಿ ಉಪ ನಿರ್ದೇಶಕರು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಧಿಕಾರಿಗಳು ತೃತೀಯ ಲಿಂಗಿದವರ ರ್ಯಾಲಿ ಹಮ್ಮಿಕೊಳ್ಳಲಾಗಿದೆ. ಮೈಕ್ ಸೆಟ್ ಪ್ಲೇ ಕಾರ್ಡ್ಸ್, ರಂಗೋಲಿ, ಮೆಹಂದಿ, ಹಾಡು, ಡ್ಯಾನ್ಸ್ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ.

ಏ. 15 ರಂದು ಬೆಳಿಗ್ಗೆ 10 ರಿಂದ 2 ಗಂಟೆಯವರೆಗೆ ಸಿಬಿಟಿ, ಹಳೆ ಬಸ್ ನಿಲ್ದಾಣದಲ್ಲಿ ರಂಗೋಲಿ ಮತ್ತು ಮೆಹಂದಿ ಕಾರ್ಯಕ್ರಮವನ್ನು ಆಯೋಜಿಸಿದ್ದಾರೆ. ಅಂಗನವಾಡಿ ಕಾರ್ಯಕರ್ತರು ಶಿಕ್ಷಕಿಯರು ಭಾಗವಹಿಸುವರು.

ಏ. 15 ರಂದು ಬೆಳಿಗ್ಗೆ 6 ರಿಂದ ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಹಾಗೂ ಕಾಲೇಜು ಶಿಕ್ಷಣ ಇಲಾಖೆ ಜಂಟಿ ನಿರ್ದೇಶಕರು ಪಂಜಿನ ಮೆರವಣಿಗೆಯನ್ನು ಅಯೋಜಿಸಿದ್ದಾರೆ. ಕಲಾಭವನದಿಂದ ಅಂಜುಮನ್ ಸರ್ಕಲ್, ಸಿಬಿಟಿ ಸ್ಟೇಷ್ ರೋಡ್, ಕೆಸಿಸಿ ಬ್ಯಾಂಕ್ ಸರ್ಕಲ್, ಟಿಕಾರೆ ರೋಡ್, ಆರ್.ಎನ್. ಶೆಟ್ಟಿ ಕ್ರೀಡಾಂಗಣದ ಮೂಲಕ ಮೆರವಣಿಗೆ ಸಾಗುವುದು.

ಏ.16 ರಂದು ಬೆಳಿಗ್ಗೆ 10–30 ರಿಂದ ಕಾರ್ಯನಿರ್ವಾಹಕ ಅಧಿಕಾ–ರಿಗಳು ಕೆಸಿಡಿ ಕ್ರಿಡಾಂಗಣದಲ್ಲಿ ಪತಂಗ (ಗಾಳಿಪಟ) ಉತ್ಸವವನ್ನು ಆಯೋಜಿಸಿದ್ದಾರೆ.

ಏ.18 ರಂದು ಬೆಳಿಗ್ಗೆ 10 ರಿಂದ 12–30 ವರೆಗೆ ಕನ್ನಡ ಮತ್ತು ಇಲಾಖೆಯವರು ಜಿಲ್ಲಾ ಪಂಚಾಯತಿ ಕಲಾತಂಡದವರು ಜಿಲ್ಲಾ ಪಂಚಾಯತಿಯಿಂದ ರಥಯಾತ್ರೆ ಮಾಡುವರು.

ಏ.27 ರಂದು ಬೆಳಿಗ್ಗೆ 10 ರಿಂದ ರಜಾಕ್ ಸೋನೆಖಾನ ಹಾಗೂ ವಾರ್ತಾ ಇಲಾಖೆ ಅವರಿಂದ ಧಾರವಾಡದ ಸರಕಾರಿ ಮಹಿಳಾ ಕಾಲೇಜಿನಲ್ಲಿ ಫ್ಯಾಷನ್ ಶೋ ಆಯೋಜಿಸಲಾಗಿದೆ.

# ವಿಧಾನಸಭಾ ಚುನಾವಣೆ: ಶಸ್ತ್ರಗಳನ್ನು ಠೇವಣಿ ಮಾಡುವಂತೆ ಸೂಚನೆ

ಕೊಪ್ಪಳ: ಕರ್ನಾಟಕ ವಿಧಾನಸಭಾ ಸಾರ್ವತ್ರಿಕ ಚುನಾವಣೆ–2023ರ ಹಿನ್ನೆಲೆಯಲ್ಲಿ ಶಸ್ತ್ರಗಳನ್ನು ಪೊಲೀಸ್ ಇಲಾಖೆಯಲ್ಲಿ ಠೇವಣಿ ಮಾಡಿಕೊಳ್ಳುವಂತೆ ಜಿಲ್ಲಾಧಿಕಾ–ರಿಗಳಾದ ಎಂ.ಸುಂದರೇಶ ಬಾಬು ಅವರು ಆದೇಶ ಹೊರಡಿಸಿದ್ದಾರೆ.

ಚುನಾವಣೆ ಅವಧಿಯಲ್ಲಿ ಕೊಪ್ಪಳ ಜಿಲ್ಲೆಯಾದ್ಯಂತ ಯಾವುದೇ ರೀತಿಯ ಅಹಿತಕರ ಘಟನೆ ಜರುಗದಂತೆ, ಕಾನೂನು ಸುವ್ಯವಸ್ಥೆ ಮತ್ತು ಶಾಂತಿ ಪಾಲನೆಗಾಗಿ ಹಾಗೂ ಸಾರ್ವಜನಿಕ ಹಿತಸಕ್ತಿ ಕಾಪಾಡುವ ಹಿತದೃಷ್ಠಿಯಿಂದ ಕೊಪ್ಪಳ ಜಿಲ್ಲಾ ವ್ಯಾಪ್ತಿಯ ರೈತರು, ಗಣ್ಯವ್ಯಕ್ತಿಗಳು ಮತ್ತು ಇತರರು ಹೊಂದಿರುವ ಶಸ್ತ್ರಗಳನ್ನು ಪೊಲೀಸ್ ಇಲಾಖೆಯಲ್ಲಿ ಠೇವಣಿ ಮಾಡುವುದು ಅತೀ ಅವಶ್ಯಕವಾಗಿದ್ದು, ಪ್ರಜಾ ಪ್ರಾತಿನಿಧ್ಯ ಕಾಯ್ದೆ–1951ರ ಕಲಂ 134(ಬಿ) ಮತ್ತು ಶಸ್ತ್ರ ಕಾಯ್ದೆ 1959 ಕಲಂ 21ರ ಪ್ರಕಾರ ಶಸ್ತ್ರಗಳನ್ನು ಪೊಲೀಸ್ ಇಲಾಖೆಯಲ್ಲಿ ಠೇವಣಿ ಮಾಡಿಕೊಳ್ಳುವಂತೆ ಹಾಗೂ ಚುನಾವಣಾ ನೀತಿ ಸಂಹಿತೆ ಅವಧಿ ಮುಗಿದ ನಂತರ ನಿಯಮಾನುಸಾರ ಪರವಾನಿಗೆದಾರರ ವಶಕ್ಕೆ ನೀಡಲು ಜಿಲ್ಲಾ ಪೊಲೀಸ್ ಅಧೀಕ್ಷಕರಿಗೆ ಸೂಚನೆ ನೀಡಿದೆ.

# ರಾಡಾರ್ ಸಂಪರ್ಕ ಕಳೆದುಕೊಂಡ ಜಪಾನ್‌ನ ಮಿಲಿಟರಿ ಹೆಲಿಕಾಪ್ಟರ್

ಟೋಕಿಯೊ: 10 ಮಂದಿ ಪ್ರಯಾಣಿಸುತ್ತಿದ್ದ ಜಪಾನ್‌ನ ಮಿಲಿಟರಿ ಹೆಲಿಕಾಪ್ಟರ್, ಒಕಿನಾವಾದ ದಕ್ಷಿಣ ಪ್ರಾಂತ್ಯದಲ್ಲಿ ಗುರುವಾರ ರಾಡಾರ್ ಸಂಪರ್ಕ ಕಳೆದುಕೊಂಡಿದೆ ಎಂದು ಮಾಧ್ಯಮಗಳು ವರದಿ ಮಾಡಿವೆ.

ಸಂಜೆ 4.30ರ ಸುಮಾರಿಗೆ ವಿಮಾನ ಕಣ್ಮರೆಯಾಗಿದೆ. ಮಿಲಿಟರಿ ಪಡೆಗಳು ಹೆಲಿಕಾಪ್ಟರ್ ಪತ್ತೆಯಲ್ಲಿ ತೊಡಗಿವೆ ಎಂದು ವರದಿ ತಿಳಿಸಿದೆ.

ಹೆಲಿಕಾಪ್ಟರ್ ದಕ್ಷಿಣದ ಕುಮಾಟೊ ಪ್ರದೇಶದ ಮಿಲಿಟರಿ ಶಾಖೆಗೆ ಸೇರಿದ್ದಾಗಿದೆ ಎಂದು ಸರ್ಕಾರಿ ಮಾಧ್ಯಮ ಎನ್‌ಎಚ್‌ಕೆ ವರದಿ ಮಾಡಿದೆ.

# ತಾಲ್ಲೂಕು ಮಟ್ಟದ ಸ್ವೀಪ್ ಕಾರ್ಯಕ್ರಮ



ಬಳ್ಳಾರಿ: ಕರ್ನಾಟಕ ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ಜಿಲ್ಲಾ ಚುನಾವಣಾ ಸಮಿತಿಯ ಸೂಚನೆ ಮೇರೆಗೆ ಮೋಕ ಗ್ರಾಮ ಪಂಚಾಯಿತಿಯಲ್ಲಿ ತಾಲೂಕು ಮಟ್ಟದ ಸ್ವೀಪ್ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಜಾಗೃತಿ ವಾಹನಗಳಿಗೆ ಚಾಲನೆ ನೀಡಿದ ಬಳ್ಳಾರಿ ಆಯುಕ್ತ ಹೇಮಂತ್ ಕುಮಾರ್ ಎನ್ ಅವರು, ಪಂಜಿನ ಮೆರವಣಿಗೆಯಲ್ಲೂ ಭಾಗವಹಿಸಿದ್ದರು. ತಾಲೂಕು ಚುನಾವಣೆ ಅಧಿಕಾರಿ ಆಗಿರುವ ಹೇಮಂತ್ ಕುಮಾರ್ ಅವರು, ತಾಲೂಕು ಪಂಚಾಯತಿ ಕಾರ್ಯ ನಿರ್ವಹಣಾಧಿಕಾ–ರಿಗಳೊಂದಿಗೆ ಚುನಾವಣೆ ಕುರಿತು ಜನರಿಗೆ ಚುನಾವಣಾ ಜಾಗೃತಿ ಮೂಡಿಸಿದರು.

ಈ ಕಾರ್ಯಕ್ರಮದಲ್ಲಿ ಗ್ರಾಮದ ಸುಮಾರು 500 ಜನ ಉಪಸ್ಥಿತರಿದ್ದು, ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

ತಾಲೂಕಿನ ಎಲ್ಲ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಮತ್ತು ಸ್ವಸಹಾಯ ಸಂಘಗಳ ಸದಸ್ಯರು, ಆಶಾ ಅಂಗನವಾಡಿಯ ಕಾರ್ಯಕರ್ತರು, ನರೇಗಾ ಕೂಲಿಕಾರರು ಉಪಸ್ಥಿತರಿದ್ದರು ಕೊನೆಯಲ್ಲಿ ಚುನಾವಣಾ ಜಾಗೃತಿಯ ಪ್ರಮಾಣ ವಚನ ಭೋದಿಸಲಾಯಿತು.

# ಜಿಲ್ಲಾ ಪೊಲೀಸ್ ಇಲಾಖೆಗೆ ಬ್ಯಾರಿಕೇಡ್ ವಿತರಣೆ



ಬಳ್ಳಾರಿ: ಬಳ್ಳಾರಿ ಜಿಲ್ಲಾ ಪೊಲೀಸ್ ಇಲಾಖೆಗೆ 100 ಬ್ಯಾರಿಕೇಡ್‌ಗಳನ್ನು ದಿ ರಾಮ್ಕೊ ಸಿಮೆಂಟ್ಸ್ ಲಿಮಿಟೆಡ್ ವತಿಯಿಂದ ವಿತರಿಸಲಾಯಿತು.

ಬಳ್ಳಾರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇ–ರಿಯ ಆವರಣದಲ್ಲಿ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು ಅವರ ಉಪಸ್ಥಿತಿಥಿ–ಯಲ್ಲಿ ದಿ ರಾಮ್ಕೊ ಸಿಮೆಂಟ್ಸ್ ಲಿಮಿಟೆಡ್ ವತಿಯಿಂದ ನೂರು ಬ್ಯಾರಿಕೇಡ್‌ಗಳನ್ನು ಕೊಡುಗೆಯಾಗಿ ಬಳ್ಳಾರಿ ಜಿಲ್ಲಾ ಪೊಲೀಸ್ ಇಲಾಖೆಗೆ ಹಸ್ತಾಂತರಿಸಲಾಯಿತು.

ಈ ಸಂದರ್ಭದಲ್ಲಿ ಬಳ್ಳಾರಿ ಡಿವೈಎಸ್ಪಿ ಬಸವರಾಜ, ವೃತ್ತ ನಿರೀಕ್ಷಕರಾದ ವಾಸು ಕುಮಾರ್, ದಿ ರಾಮ್ಕೊ ಸಿಮೆಂಟ್ಸ್ ಲಿಮಿಟೆಡ್‌ನ ಟೆಕ್ನಿಕಲ್ ಮ್ಯಾನೇಜರ್ ಎಸ್. ಅರುಣ್ ಕುಮಾರ್, ಬಳ್ಳಾರಿ ಮಾರ್ಕೆಟಿಂಗ್ ಅಧಿಕಾರಿ ಸಾಯಿನಾಥ್ ಹಾಗೂ ದಿ ರಾಮ್ಕೊ ಸಿಮೆಂಟ್ಸ್ ಲಿಮಿಟೆಡ್‌ನ ಡೀಲರ್ಸ್‌ಗಳು, ಕೈಲಾಸ್ ಜೈನ್ ಮತ್ತಿತರರು ಉಪಸ್ಥಿತರಿದ್ದರು.

# ಮರಳಿ ಕಾಂಗ್ರೆಸ್ ಸೇರ್ಪಡೆಯಾದ ಮೊಹಮ್ಮದ್ ರಿಯಾಜ್ ಮತ್ತು ಬೆಂಬಲಿಗರು

ಬಳ್ಳಾರಿ: ಬಳ್ಳಾರಿ ನಗರದ ಕೌಲ್ ಬಜಾರ್ 30ನೇ ವಾರ್ಡಿನ ಬಿಜೆಪಿ ಮುಖಂಡರಾದ ಮೊಹಮ್ಮದ್ ರಿಯಾಜ್ ಅವರು ಬಳ್ಳಾರಿ ಗ್ರಾಮಾಂತರ ಶಾಸಕರಾದ ಬಿ.ನಾಗೇಂದ್ರ ಅವರ ಸಮ್ಮುಖದಲ್ಲಿ ಅಪಾರ ಬೆಂಬಲಿಗರೊಂದಿಗೆ ಬುಧವಾರ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದರು.

ಇದೇ ವೇಳೆ ಬಿಜೆಪಿ ಮುಖಂಡರಾದ ಖಾಜಾ ಸಾಬ್, ಶೇಕ್ ಮಿಸುಬದ್ದೀನ್, ನಜೀರ್, ನವೀದ್, ಮುಕ್ತೈರ್, ಇಸ್ಮಾಯಿಲ್, ರಫೀಕ್, ಜಾಫರ್, ಮುನೀರ್, ಬಶೀರ್, ಶಾಫಿ, ಹಾದಿ, ಜಾಕೀರ್, ಸುಹೇಲ್, ಪಾಷಾ ಸೇರಿದಂತೆ ನೂರಾರು ಬಿಜೆಪಿ ಮುಖಂಡರನ್ನು



ಗ್ರಾಮೀಣ ಶಾಸಕ ಬಿ.ನಾಗೇಂದ್ರ ಅವರು ತುಂಬು ಹೃದಯದಿಂದ ಕಾಂಗ್ರೆಸ್ ಪಕ್ಷಕ್ಕೆ ಸ್ವಾಗತಿಸಿದರು.

ನಂತರ ಮಾತನಾಡಿದ ಮಾನ್ಯ ಶಾಸಕ ಬಿ.ನಾಗೇಂದ್ರ ಅವರು ಗ್ರಾಮೀಣ ಕ್ಷೇತ್ರದ ವಾರ್ಡ್ ಗಳಲ್ಲಿ ಸ್ವಚ್ಛತೆ ಕಾಪಾಡುವುದು, ಶುದ್ಧ ಕುಡಿಯುವ ನೀರು ಪೂರೈಕೆ, ಒಳಚರಂಡಿ ವ್ಯವಸ್ಥೆ ಮಾಡುವ ಮೂಲಕ ವಾರ್ಡ್ ಗಳ ಅಭಿವೃದ್ಧಿ ಪಡಿಸುವುದೇ ನನ್ನ ಗುರಿ ಎಂದರು.

ತಮಗೆ ಕಷ್ಟ ಬಂದಾಗ ಮಧ್ಯರಾತ್ರಿಯಲ್ಲಿ ಸಹ ನಾನು ನಿಮ್ಮ ಸೇವೆ ಮಾಡಲು ಸದಾ ಸಿದ್ದನಾಗಿರುತ್ತೇನೆ.

ಸಮುದಾಯದ ಜನರಿಗೆ ಯಾರಾದರೂ ಭಯಪಡಿಸಿದರೆ ಹೆದರಬಾರದು ನಾವೆಲ್ಲ ನಿಮ್ಮ ಜೊತೆ ಇದ್ದೇವೆ ಎಂದು ಹೇಳಿದರು.

ಚುನಾವಣೆ ಸಂದರ್ಭದಲ್ಲಿ ಆಮಿಷ ಒಡ್ಡುವವರು ಬರುತ್ತಾರೆ. ಅದು ಮಾಡುತ್ತೇವೆ, ಇದು ಮಾಡುತ್ತೇವೆ ಎನ್ನುತ್ತಾರೆ ಯಾರೂ ಕೂಡ ವಿಚಲಿತರಾಗಬಾರದು. ಗೊಂದಲಕ್ಕೆ ಈಡಾಗಬಾರದು ಎಂದರು. ಮುಂಬರುವ ದಿನಗಳಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರಲಿದೆ.

ನಾನು ಶಾಸಕನಾದರೆ ನೀವೆಲ್ಲ ಶಾಸಕನಾದಂತೆ ಎಂದು ಹೇಳಿದ ಶಾಸಕ ನಾಗೇಂದ್ರ, ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರುವುದು ಖಚಿತ. ಆಗ ಕೌಲಬಜಾರ್ ಪ್ರದೇಶವನ್ನು, ಇಡೀ ಗ್ರಾಮೀಣ ಕ್ಷೇತ್ರವನ್ನು ಅಭಿವೃದ್ಧಿಪಡಿಸೋಣ ಎಂದರು.

ಈ ಸಂದರ್ಭದಲ್ಲಿ ಪಾಲಿಕೆ ಸದಸ್ಯರು, ವಾರ್ಡಿನ ಪ್ರಮುಖರು ಹಾಗೂ ಶಾಸಕರ ಬೆಂಬಲಿಗರು ಸೇರಿದಂತೆ ಕಾಂಗ್ರೆಸ್ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಜೂಟ್ ಬ್ಯಾಗ್ ತಯಾರಿಕೆ ತರಬೇತಿ: ಅರ್ಜಿ ಅಹ್ವಾನ

ಬೆಳಗಾವಿ: ಕೆನರಾ ಬ್ಯಾಂಕ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ ವತಿಯಿಂದ ಬೆಳಗಾವಿ ಜಿಲ್ಲೆಯ ಗ್ರಾಮೀಣ ಪ್ರದೇಶದ ಯುವತಿಯರಿಗೆ ಮತ್ತು ಮಹಿಳಾ ನಿರುದ್ಯೋಗಿಗಳಿಗೆ ಜೂಟ್ ಬ್ಯಾಗ್ ತಯಾರಿಕೆಗೆ 13 ದಿನಗಳ ತರಬೇತಿಗಾಗಿ ಅರ್ಜಿಗಳನ್ನು ಅಹ್ವಾನಿಸಲಾಗಿದೆ.

**ಅರ್ಹತೆಗಳು :**

18 ರಿಂದ 45 ವಯಸ್ಸಿನವರಾಗಿರಬೇಕು, ಗಾಮೀಣ ಪ್ರದೇಶದವರಾಗಿರಬೇಕು, ಐಡಿ, ಜಾಬ್ ಕಾರ್ಡ ಹೊಂದಿರಬೇಕು, ಆಧಾರ ಕಾರ್ಡ, ಬ್ಯಾಂಕ ಪಾಸ್ ಬುಕ್, 3 ಭಾವಚಿತ್ರಗಳು ಹೊಂದಿರಬೇಕು.

ತರಬೇತಿಯು ಊಟ ಮತ್ತು ವಸತಿಯೊಂದಿಗೆ ಸಂಪೂರ್ಣ ಉಚಿತವಾಗಿರುತ್ತದೆ.

ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ ಏ. 22 2023, ಅರ್ಜಿಯನ್ನು ಸಂಸ್ಥೆಯ ಅರ್ಜಿ ನಮೂನೆಯಲ್ಲಿ ಅಥ–ವಾ ಬಿಳಿಹಾಳಿಯಲ್ಲಿ ನೇರವಾಗಿ ಕಾರ್ಯಾಲಯಕ್ಕೆ, ಪೋಸ್ಟ್ ಮುಖಾಂತರ ಅಥವಾ ಗೂಗಲ್ ಪಾರ್ಮ ಲಿಂಕನಲ್ಲಿ https://docs.google.com/forms/d/e/1FAIpQLS-dZEI9npV5dVuQbdqFXUGc6yt__7daI02Y-rhyvRSLywjlFfKA/viewform?vc=0&c=0&w=1&-flr=0 ಅರ್ಜಿಗಳನ್ನು ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 0831–2440644, 8296792166, 9845750043, 8050406866, 8867388906, 9449860564 ಸಂಪರ್ಕಿಸಬುದು ಅಥವಾ ಸಂಸ್ಥೆಯ ವಿಳಾಸ:– ಕೆನರಾ ಬ್ಯಾಂಕ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ (ಸಿಬಿ ಆರ್‌ಸೆಟಿ), ಪ್ಲಾಟ ನಂ. ಸಿ ಎ –03 (ಪಾರ್ಟ) ಕಣಬರ್ಗಿ ಇಂಡಸ್ಟ್ರಿಯಲ್ ಎರಿಯಾ, ಆಟೋ ನಗರ. ಬೆಳಗಾವಿ – 590015 ಕಛೇರಿಗೆ ಭೇಟಿ ನೀಡಬಹುದು ಎಂದು ಕೆನರಾ ಬ್ಯಾಂಕ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾಗವಾಡದಲ್ಲಿ ಸಹಾಯಕ ಚುನಾವಣಾ ಅಧಿಕಾರಿಗಳ ಕಛೇರಿ ಪ್ರಾರಂಭ

ಬೆಳಗಾವಿ: ಕರ್ನಾಟಕ ವಿಧಾನಸಭೆ 2023 ನೇ ಸಾಲಿನ ವಿಧಾನಸಭಾ ಸಾರ್ವತ್ರಿಕ ಚುನಾವಣೆ ಘೋಷಿತವಾಗಿದ್ದು, 04–ಕಾಗವಾಡ ವಿಧಾನಸಭಾ ಮತಕ್ಷೇತ್ರದ ಸಹಾಯಕ ಚುನಾವಣಾ ಅಧಿಕಾರಿಗಳ ಕಛೇರಿಯನ್ನು ಶಿವಾನಂದ ಮಹಾವಿದ್ಯಾಲಯ ಕಾಗವಾಡ–291223 ಬಸ್ ನಿಲ್ದಾಣದ ಹತ್ತಿರ ಕೊಠಡಿ ಸಂಖ್ಯೆ 02 ರಲ್ಲಿ ಪ್ರಾರಂಭಿಸಲಾಗಿದೆ.

04– ಕಾಗವಾಡ ವಿಧಾನಸಭಾ ಮತಕ್ಷೇತ್ರ ಕಛೇರಿ ದೂರವಾಣಿ ಸಂಖ್ಯೆ 08339–200172, 24/7 ಸಹಾಯವಾಣಿ ಸಂಖ್ಯೆ 08339–264555 ಹಾಗೂ ಇಮೇಲ್ ವಿಳಾಸ Ro04kaga-wad2023@gmail.com, tahelnkag@gmail.com

04–ಕಾಗವಾಡ ವಿಧಾನಸಭಾ ಮತಕ್ಷೇತ್ರದ ಅಭ್ಯರ್ಥಿಗಳು ಚುನಾವಣಾ ಪ್ರಚಾರ ಕಾರ್ಯಕ್ರಮದ ಅನುಮತಿ ಪಡೆಯಬೇಕಾದಲ್ಲಿ ಆನ್‌ಲೈನ್ ಮೂಲಕ ಚುನಾವಣೆ ವೆಬ್‌ಸೈಟ್ https:://suvidha.eci.gov.in ನಲ್ಲಿ ಅರ್ಜಿಯನ್ನು 48 ಗಂಟೆಗಳ ಒಳಗಾಗಿ ಸಲ್ಲಿಸಿ ಚುನಾವಣಾ ಅಧಿಕಾರಿಗಳ ಅನುಮತಿಯನ್ನು ಪಡೆಯಬಹುದಾಗಿದೆ ಎಂದು ಕಾಗವಾಡ ತಹಶೀಲ್ದಾರ ಹಾಗೂ ವಿಧಾನಸಭಾ ಮತಕ್ಷೇತ್ರದ ಸಹಾಯಕ ಚುನಾವಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಕ್ರಮವಾಗಿ ಸಾಗಿಸುತ್ತಿದ್ದ 1.68 ಲಕ್ಷ ಮೌಲ್ಯದ ಸೀರೆಗಳು ಜಪ್ತಿ



ಗದಗ: ಜಿಲ್ಲೆಯ ಚೆಕ್ ಪೋಸ್ಟ್‌ಗಳಲ್ಲಿ ಈಗಾಗಲೇ ಹದ್ದಿನ ಕಣ್ಣು ಇಡಲಾಗಿದ್ದು, ಅಕ್ರಮವಾಗಿ ಸಾಗಿಸುತ್ತಿದ್ದ 1.68 ಲಕ್ಷ ಮೌಲ್ಯದ 561 ಸೀರೆಗಳನ್ನ ತಾಲೂಕಿನ ದುಂದೂರ ಚೆಕ್ ಪೋಸ್ಟ್‌ನಲ್ಲಿ ಚುನಾವಣೆ ಅಧಿಕಾರಿಗಳು ಜಪ್ತಿ ಮಾಡಿದ್ದಾರೆ.

ಹುಬ್ಬಳ್ಳಿಯಿಂದ ಗದಗ ನಗರ ಕಡೆ ಸಾಗಿಸುತ್ತಿದ್ದ ವೇಳೆ ಚೆಕ್ ಪೋಸ್ಟ್ ನಲ್ಲಿ ಸಿಕ್ಕಿ ಹಾಕಿಕೊಂಡಿದ್ದಾರೆ. ಈ ಕುರಿತು ಗದಗ ಗ್ರಾಮೀಣ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ ಎಂದು ಗದಗ ಎಸ್ಪಿ ಬಿ ಎಸ್ ನೇಮಗೌಡ ಮಾಹಿತಿ ನೀಡಿದ್ದಾರೆ.

# ಏಪ್ರೀಲ್ 24 ರಂದು ರಾಷ್ಟ್ರೀಯ ಲೋಕ ಅದಾಲತ್

ಧಾರವಾಡ: ಧಾರವಾಡ ಜಿಲ್ಲೆಯಾದ್ಯಂತ ಇರುವ ಎಲ್ಲಾ ಅಧೀನ ನ್ಯಾಯಾಲಯಗಳಲ್ಲಿ ಏಪ್ರೀಲ್ 24 ರಂದು ರಾಷ್ಟ್ರೀಯ ಲೋಕ ಅದಾಲತ್‌ನ್ನು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನಿರ್ದೇಶನದ ಮೇರೆಗೆ ಆಯೋಜಿಸಲಾಗಿದೆ.

ಈ ಲೋಕ್ ಅದಾಲತ್ದಲ್ಲಿ ನ್ಯಾಯಾಲಯದಲ್ಲಿ ಬಾಕಿ ಇರುವ ರಾಜಿ ಆಗಬಹುದಾದ ಎಲ್ಲ ಪ್ರಕರಣಗಳನ್ನು ಹಾಗೂ ಮೋಟಾರ್ ವಾಹನ ಅಪಘಾತ ಪರಿಹಾರದ ಪ್ರಕರಣಗಳು, ಭೂ ಸ್ವಾಧೀನ ಪ್ರಕರಣಗಳು, ವಿದ್ಯುತ್ ಮಂಡಳಿ ಮುಂತಾದ ಸ್ಥಳೀಯ ಸಂಸ್ಥೆಗಳ ಪರ ಮತ್ತು ವಿರುದ್ಧ ದಾಖಲಾದ ಪ್ರಕರಣಗಳು, ಬ್ಯಾಂಕುಗಳಿಗೆ ಸಂಬಂಧಿಸಿದ ಪ್ರಕರಣಗಳು, ವೈವಾಹಿಕ ಅಥ–ವಾ ಜೀವನಾಂಶ ಪ್ರಕರಣಗಳು, ಕಾನೂನಿನನ್ವಯ ರಾಜೀ ಆಗಬಹುದಾದ ಕ್ರಿಮಿನಲ್ ಪ್ರಕರಣಗಳು, ಕಾರ್ಮಿಕ ನಷ್ಟ ಪರಿಹಾರ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದು. ಬ್ಯಾಂಕ್, ಕಾರ್ಮಿಕರು, ನೀರು ಮತ್ತು ವಿದ್ಯುತ್ಗೆ ಸಂಬಂಧಿಸಿದ ವ್ಯಾಜ್ಯಪೂರ್ವ ಪ್ರಕರಣಗಳನ್ನು ಬಗೆಹರಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿರುತ್ತದೆ. ಸಾರ್ವಜನಿಕರು ವಿಶೇಷವಾಗಿ ಕಕ್ಷಿಗಾರರು ಹೆಚ್ಚಿನ ಸಂಖ್ಯೆಯಲ್ಲಿ ಲೋಕ್ ಅದಾಲತ್ನ ಸದುಪಯೋಗಪಡಿಸಿಕೊಳ್ಳಬೇಕೆಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶೆ ಸಿ.ಎಮ್. ಪುಷ್ಪಲತ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶ್ರೀ ಮಾರಿಕಾಂಭಾ ದೇವಿಯ ದರ್ಶನ ಪಡೆದು ಪ್ರಚಾರ ಪ್ರಾರಂಭಿಸಿದ ಸಿದ್ದಪ್ಪ



ಬಳ್ಳಾರಿ: ಬಳ್ಳಾರಿ ಜಿಲ್ಲೆಯ ಸಿರುಗುಪ್ಪ ವಿಧಾನಸಭಾ ಕ್ಷೇತ್ರದ ಚಳ್ಳೆಕೂಡ್ಲುರು ಗ್ರಾಮದ ಶ್ರೀ ಮಾರಿಕಾಂಭಾ ದೇವಿಯ ದರ್ಶನ ಪಡೆದು ಮೊದಲ ದಿನದ ಪ್ರಚಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಕೂಡ್ಲೂರು ಗ್ರಾಮದ ಅಂಬರೀಶ ಗೌಡ ಮತ್ತು ಹಚ್ಚೊಳ್ಳಿ ಗ್ರಾಮದ ಯುವಕರು ಬಿಜೆಪಿಗೆ ಸೇರ್ಪಡೆಗೊಂಡರು. ಮುಖಂಡರಾದ ಮುದುಕಪ್ಪ, ಹುಸೇನಪ್ಪ, ಅಯ್ಯಪ್ಪ, ಶೇಖರ ಗೌಡ, ವಿರಭದ್ರಗೌಡ,ಯಲ್ಲಯ್ಯ,ರಾಘವೇಂದ್ರ ಮತ್ತಿತರರು ಉಪಸ್ಥಿತರಿದ್ದರು.

# ಲೈಂಗಿಕ ಹಾಗೂ ಸಂತಾನೋತ್ಪತ್ತಿ ಆರೋಗ್ಯದ ಮೇಲೆ ಸಮುದಾಯದ ಭಾಗವಹಿಸಿಕೆ ಅತಿ ಅವಶ್ಯಕತೇ: ವಿಜಯಲಕ್ಷ್ಮಿ




ಬಳ್ಳಾರಿ: ಸಮುದಾಯದ ಸಹಭಾಗಿತ್ವ ಇದ್ದರೆ ಎಲ್ಲರಿಗೂ ಆರೋಗ್ಯ ಸಾಧ್ಯತೆ ಎಂದು ಡಾಕ್ಟರ್ ಶಗುಪ್ತ ಕರೆ ನೀಡಿದರು, ಫ್ಯಾಮಿಲಿ ಪ್ಲಾನಿಂಗ್ ಅಸೋಸಿಯೇಷನ್ ಆಫ್ ಇಂಡಿಯಾ ಬಳ್ಳಾರಿ ಶಾಖೆ ಹಾಗೂ ಪ್ರಾಥ–ಮಿಕ ಆರೋಗ್ಯ ಕೇಂದ್ರ ಗುಗ್ಗರಹಟ್ಟಿ ಸಂಯುಕ್ತ ಆಶ್ರಯದಲ್ಲಿ ವಿಶ್ವ ಆರೋಗ್ಯ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗಿತ್ತು.

ಈ ದಿನವೂ ಗರ್ಭಿಣಿಯರಿಗೆ ಹಾಗೂ ಸಾರ್ವಜನಿಕರಿಗೆ ಉನ್ನತ ಆರೋಗ್ಯ ಸೇವೆಯನ್ನು ಕೊಡುವ ನಿಟ್ಟಿನಲ್ಲಿ ಉಚಿತ ತಪಾಸಣೆ ಶಿಬಿರ ಹಾಗೂ ಎಫ್‌ಪಿಎಐ ಬಳ್ಳಾರಿ ಶಾಖೆ ವತಿಯಿಂದ ಅರಿವು ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಸಂಸ್ಥೆಯ ವತಿಯಿಂದ ಶ್ರೀಮತಿ ವಿಜಯಲಕ್ಷ್ಮಿ ಶಾಖ ವ್ಯವಸ್ಥಾಪಕರು ಕಾರ್ಯಕ್ರಮವನ್ನು ಉದ್ದೇಶಿಸಿ ಲೈಂಗಿಕ ಹಾಗೂ ಸಂತಾನೋತ್ಪತ್ತಿ ಆರೋಗ್ಯದ ಮೇಲೆ ಸಮುದಾಯದ ಭಾಗವಹಿಸಿಕೆ ಅತಿ ಅವಶ್ಯಕತೇ ಇದೆ ಹಾಗೆ ಕುಟುಂಬ ಯೋಜನಾ ಪದ್ಧತಿಯ ಬಗ್ಗೆ ವಿವರಿಸಿದರು.

ಆದ್ದರಿಂದ ಸ್ವಯಂ ಪ್ರೇರಿತರಾಗಿ ಭಾಗವಹಿಸಿ ಆರೋಗ್ಯದ ಸೇವೆಯನ್ನು ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ತದ ನಂತರ ಡಾಕ್ಟರ್ ಶಗುಪ್ತ ರವರು ನೆರೆದ ಗರ್ಭಿಣಿ ಸ್ತ್ರೀಯರಿಗೆ ಹಾಗೂ ಜನಸಾಮಾನ್ಯರಿಗೆ ತಪಾಸಣೆಯನ್ನು ಮಾಡಿದರು.

ಈ ಕಾರ್ಯಕ್ರಮದಲ್ಲಿ ಎಫ್‌ಪಿಎಐ ಸಿಬ್ಬಂದಿ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ಗೊಗ್ಗರಹಟ್ಟಿ ಸಿಬ್ಬಂದಿ ಉಪಸ್ಥಿತರಿದ್ದರು.

# ಹಾನಿಟ್ರ್ಯಾಪ್ ಮಾಡುವ ಗ್ಯಾಂಗ್ ಅರೆಸ್ಟ್



ದಾವಣಗೆರೆ: ಮಿಸ್ ಕಾಲ್ ಕೊಟ್ಟು ಮಂಚಕ್ಕೆ ಆಹ್ವಾನಿಸಿ ಹಾನಿಟ್ರ್ಯಾಪ್ ಮಾಡುವ ಗ್ಯಾಂಗ್ ಪತ್ತೆಯಾಗಿದ್ದು, ಇಬ್ಬರು ಮಹಿಳೆಯರು ಸೇರಿದಂತೆ ನಾಲ್ವರನ್ನು ದಾವಣಗೆರೆಯ ವಿದ್ಯಾನಗರ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಗಂಗಮ್ಮ (30) ಗಿಡ್ಡ ಗಂಗಮ್ಮ (52) ಹರೀಶ್ (32) ಚಂದ್ರು (30) ಬಂಧಿತ ಆರೋಪಿಗಳು. ಚನ್ನಗಿರಿ ಮೂಲದ ವ್ಯಕ್ತಿಯೊಬ್ಬನಿಗೆ ಆರೋಪಿ ಗಂಗಮ್ಮ ಮಿಸ್ ಕಾಲ್ ಮಾಡಿದ್ದಾಳೆ. ಬಳಿಕ ಮತ್ತೆ ಆ ವ್ಯಕ್ತಿ ಮರು ಕರೆ ಮಾಡಿದ್ದು, ಹಾಗೇ ಪೋನಿನಲ್ಲಿ ಪರಿಚಯವಾಗಿದೆ. ನಂತರ ಗಂಗಮ್ಮ ದಾವಣಗೆರೆಗೆ ಬನ್ನಿ, ನಿಮ್ಮ ಜೊತೆ ಊಟ ಮಾಡಬೇಕೆಂದು ಹೇಳಿ ಕರೆಸಿಕೊಂಡಿದ್ದಾಳೆ.

ಹೀಗೆ ನಾಲ್ವರು ಸೇರಿ ದಾವಣಗೆರೆ ನಗರದ ಸಿದ್ದವೀರಪ್ಪ ಬಡಾವಣೆಯಲ್ಲಿ ಹಾನಿಟ್ರ್ಯಾಪ್ ಮಾಡಲು ಪ್ಲಾನ್ ಮಾಡಿದ್ದಾರೆ. ಬಳಿಕ ಆ ವ್ಯಕ್ತಿ ಬರುತ್ತಿದ್ದಂತೆ ಗಿಡ್ಡ ಗಂಗಮ್ಮ ಆತನನ್ನು ಕರೆದುಕೊಂಡು ರೂಮಿಗೆ ಹೋಗಿದ್ದಾಳೆ.

ಇದೆ ವೇಳೆ ಹರೀಶ್ ಹಾಗೂ ಚಂದ್ರು ಅಲ್ಲಿಗೆ ಬಂದು ಅವ–ರಿಬ್ಬರು ಮನೆಯ ಬೇಡ್ ರೂಮ್ನಲ್ಲಿ ಹೋಗುತ್ತಿದ್ದಂತೆ ಕ್ಯಾಮರಾ ತೆಗೆದುಕೊಂಡು ವಿಡಿಯೋ ಮಾಡಿ, ಮೂರು ಲಕ್ಷ ರೂಪಾಯಿಗೆ ಬೇಡಿಕೆ ಇಟ್ಟು ಒಂದು ಲಕ್ಷ ಐವತ್ತು ಸಾವಿರ ರೂಪಾಯಿ ವಸೂಲಿ ಮಾಡಿದ್ದಾರೆ ಈ ಆರೋಪಿಗಳು.'

ರಕ್ಷಣಾ ವೇದಿಕೆಯ ಹೆಸರನ್ನ ಹೇಳಿಕೊಂಡು ಹರೀಶ್ ಬೆದರಿಕೆ ಹಾಕಿದ್ದಾನೆ.

ಇತ್ತ ಗಂಗಮ್ಮ ಕೂಡ ನಾಟಕ ಶುರುವಮಾಡಿಕೊಂಡಿದ್ದಾಳೆ. ನನ್ನ ಮಾನ ಹೋಗುತ್ತದೆ ದಯವಿಟ್ಟು ಅವರು ಕೇಳಿದಷ್ಟು ಹಣವನ್ನ ಕೊಟ್ಟುಬಿಡಿ ಎಂದು ಆತನಿಗೆ ಬೇಡಿಕೊಂಡವಳಂತೆ ನಾಟಕ ಮಾಡಿದ್ದಾಳೆ. ಇಂತಹ ಖತರ್ನಾಕ್ ಗ್ಯಾಂಗ್ನ್ನ ಇದೀಗ ಪೊಲೀಸರು ಬಂಧಿಸಿ, ಆರೋಪಿಗಳಿಂದ ಒಂದು ಲಕ್ಷ ಐವತ್ತು ಸಾವಿರ ರೂಪಾಯಿಯನ್ನ ವಶ ಪಡೆದಿದ್ದಾರೆ.

# ಆಯತಪ್ಪಿ 70 ಅಡಿ ಎತ್ತರದ ರಥದಿಂದ ಬಿದ್ದು ವ್ಯಕ್ತಿ ಸಾವು



ವಿಜಯಪುರ: ವಿಜಯಪುರ ಜಿಲ್ಲೆ ಸಿಂದಗಿ ತಾಲೂಕಿನ ಗೋಲಗೇ–ರಿಯ ಗೊಲ್ಲಾಳೇಶ್ವರ ರಥೋತ್ಸವದ ವೇಳೆ ಆಯತಪ್ಪಿ ಮೇಲಿಂದ ಬಿದ್ದು ವ್ಯಕ್ತಿಯೋರ್ವ ಮೃತಪಟ್ಟ ಘಟನೆ ನಡೆದಿದೆ. ಮೃತ ದುರ್ದೈವಿ ಗೋಲಗೇರಿ ನಿವಾಸಿ ಮುದುಕಣ್ಣ ಕಾಚಾಪುರ (50) ಎಂದು ತಿಳಿದುಬಂದಿದೆ.

ಈತ ಮೇಲಿನಿಂದ ಕೆಳಕ್ಕೆ ಬಿದ್ದ ಸಂದರ್ಭದಲ್ಲಿ ರಥದ ಬಳಿ ನಿಂತಿ–ದ್ದ ಮತ್ತೋರ್ವ ವ್ಯಕ್ತಿಗೆ ಗಾಯವಾಗಿದೆ. ಕೂಡಲೇ ಆತನನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಮುದುಕಣ್ಣ ಸುಮಾರು 70 ಅಡಿ ಎತ್ತರದ ರಥದ ಮೇಲೇರಿ ಕಳಶ ಕಟ್ಟುತ್ತಿದ್ದ. ಈ ವೇಳೆ ಆಯತಪ್ಪಿ ಕೆಳಕ್ಕೆ ಬಿದ್ದಿದ್ದಾನೆ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ. ಸಿಂದಗಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

# ಅನಧಿಕೃತವಾಗಿ ಸಾಗಾಟ: 35 ಲಕ್ಷ ರೂ. ಮೌಲ್ಯದ ಬಿಯರ್ ಜಪ್ತಿ



ಚಿಕ್ಕಬಳ್ಳಾಪುರ: ರಾಜ್ಯ ವಿಧಾನಸಭೆ ಚುನಾವಣಾ ದಿನಾಂಕ ಈಗಾಗಲೇ ಘೋಷಣೆಯಾಗಿದ್ದು, ಚುನಾವಣಾ ಅಕ್ರಮ ತಡೆಯಲು ನೀತಿ ಸಂಹಿತೆ ಜಾರಿಯಾಗಿದೆ. ರಾಜ್ಯದ ಪ್ರತಿಯೊಂದು ಜಿಲ್ಲೆಗಳಲ್ಲಿಯೂ ಚೆಕ್ಪೋಸ್ಟ್‌ಗಳನ್ನ ತೆಗೆದು ಅಕ್ರಮ ನಡೆಯದಂತೆ ಎಚ್ಚರಿಕೆ ವಹಿಸಲಾಗಿದೆ. ಈ ಮಧ್ಯೆ ಅನಧಿಕೃತವಾಗಿ ಛತ್ತೀಸ್ಗಡ ರಾಜ್ಯದಿಂದ ಬೆಂಗಳೂರಿನ ವೈಟ್ ಫೀಲ್ಡಿಗೆ 35 ಲಕ್ಷ ರೂಪಾಯಿ ಮೌಲ್ಯದ ಬಿಯರ್ರ್‌ನ್ನು ಕಂಟೈನರ್ ಲಾರಿಯಲ್ಲಿ ಸಾಗಾಟ ಮಾಡುತ್ತಿದ್ದಾಗ ರಾಷ್ಟ್ರೀಯ ಹೆದ್ದಾರಿ 44 ರ ಅಗಲಗುರ್ಕಿ ಗ್ರಾಮದ ಬಳಿ ಚಿಕ್ಕಬಳ್ಳಾಪುರ ಅಬಕಾರಿ ಇಲಾಖೆ ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ.

ಅಕ್ರಮವಾಗಿ ಸಾಗಿಸುತ್ತಿದ್ದ 35 ಲಕ್ಷ ರೂಪಾಯಿ ಮೌಲ್ಯದ 13, 800 ಲೀಟರ್ ಮದ್ಯವನ್ನ ಹಾಗೂ ಲಾರಿಯನ್ನು ಕೂಡ ಜಪ್ತಿ ಮಾಡಿ, ಲಾರಿ ಚಾಲಕನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದಾರೆ. ಬಳಿಕ ಇದು ಛತ್ತೀಸ್ಗಡದ ಸೋನಾ ಬ್ರೀವೇಜಸ್ ಕಂಪನಿಗೆ ಸೇರಿದ ಮದ್ಯ ಆಗಿದ್ದು, ಮದ್ಯ ಸಾಗಾಟಕ್ಕೆ ಪಡೆದಿದ್ದ ಅನುಮತಿಯ ಅವಧಿ ಎಪ್ರಿಲ್ 2ರಂದೆ ಮುಗಿದಿದ್ದು, ಆದರೂ ಕೂಡ ಅಕ್ರಮವಾಗಿ ಮದ್ಯ ಸಾಗಾಟ ಮಾಡುತ್ತಿದ್ದ ಕಾರಣ ಅನುಮಾನ ವ್ಯಕ್ತವಾಗಿದೆ. ಕರ್ನಾಟಕ ಅಬಕಾರಿ ಕಾಯ್ದೆ ಉಲ್ಲಂಘನೆ ಹಿನ್ನಲೆ ಅಬಕಾರಿ ಇಲಾಖೆ ಅಧಿಕಾರಿಗಳು ಪ್ರಕರಣ ದಾಖಲು ಮಾಡಿಕೊಂಡು ತನಿಖೆ ತೀವ್ರಗೋಳಿಸಿದ್ದಾರೆ.

# ಜಿಲ್ಲಾಮಟ್ಟದ ಜಿಂಗಲ್ಸ್ ಸ್ಪರ್ಧೆ ಆಯೋಜನೆ

ಧಾರವಾಡ: ಕರ್ನಾಟಕ ವಿಧಾನ ಸಭಾ ಸಾರ್ವತ್ರಿಕ ಚುನಾವಣೆ–2023 ರಂತೆ ಜಿಲ್ಲೆಯಲ್ಲಿ ಜಿಲ್ಲಾಮಟ್ಟದ ಜಿಂಗಲ್ಸ್ ಸ್ಪರ್ಧೆಯನ್ನು ಆಯೋಜಿಸಲಾಗಿದೆ.

ಜಿಲ್ಲೆಯಲ್ಲಿನ ಮತದಾರರಿಗೆ ಮತದಾನದ ಕುರಿತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಆಯೋಜಿಸಿರುವುದರ ಕುರಿತು ಕಾಲೇಜಿನ ವಿದ್ಯಾರ್ಥಿಗಳಿಗೆ ಜಿಂಗಲ್ಸ್ ಸ್ಪರ್ಧೆಯನ್ನು ಆಯೋಜಿಸಲು ಸ್ವೀಪ್ ಪ್ರಚಾರ ಸಮಿತಿಯು ಉದ್ದೇಶಿಸಿರುವುದರಿಂದ ವಿಶ್ವವಿದ್ಯಾಲಯಗಳ ಅಧೀನದಲ್ಲಿ ಬರುವ ಕಾಲೇಜಿನ ವಿದ್ಯಾರ್ಥಿಗಳು ಸ್ಪರ್ಧೆಯಲ್ಲಿ ಭಾಗವಹಿಸಬಹುದು.

ಯುವ ಮತದಾರರಿಗೆ, ಅಂಗವಿಕಲ ಮತದಾರರಿಗೆ, 80 ವರ್ಷ ಪೂರೈಸಿದ ಹಿರಿಯ ನಾಗರಿಕರಿಗೆ, ತೃತೀಯ ಲಿಂಗಿಗಳಿಗೆ ಮತದಾನದ ಕುರಿತು ಅರಿವು ಮೂಡಿಸುವ ಬಗ್ಗೆ 30 ರಿಂದ 40 ಸೆಕೆಂಡ್ಗಳ ಜಿಂಗಲ್ಸ್‌ಗಳನ್ನು ತಯಾರಿಸಿ ವಾಟ್ಸ್‌ಆಪ್ ಮುಖಾಂತರ ಜಿಲ್ಲಾ ಪಂಚಾಯತ್ ಕಾರ್ಯಾಲಯಕ್ಕೆ ವಾಟ್ಸ್‌ಆಪ್ ಮೊಬೈಲ್ ಸಂಖ್ಯೆ: 9632959459 ಏಪ್ರೀಲ್ 10, 2023 ರ ಸಂಜೆ 5 ಗಂಟೆಯೊಳಗಾಗಿ ಸಲ್ಲಿಸಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪವನಪುತ್ರ ಹನುಮಾನ ಜಾತಿರಹಿತ ದೇವರು: ಹಿರೂರ ಶ್ರೀ



ತಾಳಿಕೋಟೆ: ಶ್ರೀ ರಾಮನನ್ನೇ ತನ್ನ ಹೃದಯದಲ್ಲಿಟ್ಟುಕೊಂಡು ಧ್ಯಾನ ಸ್ವರೂಪಿಯಾಗಿ ಶ್ರೀರಾಮಚಂದ್ರನ ಸೇವಕನೆನಿಸಿಕೊಂಡಂತಹ ಪವನಪುತ್ರ ಹನುಮಾನನಿಗೆ ಆದಿ ಕಾಲದಿಂದಲೂ ಮಾರುತಿ, ಡೋಣಿ ರಾಜ, ಆಚಿಜನೇಯ, ಭಜರಂಗಿ ಎಂಬ ಅನೇಕ ಹೆಸರುಗಳಿಂದ ಕರೆಯಲಾಗುತ್ತಿರುವ ಪವನಪುತ್ರ ಹನುಮಾನನಿಗೆ ಪೂಜ್ಯಭಾವನೆಯಿಂದ ನಡೆದುಕೊಂಡು ಹೋಗುತ್ತಿರುವ ಭಕ್ತ ಸಮೂಹ ತಮ್ಮ ಬೇಕು ಬೇಡಿಕೆಗಳನ್ನು ಇಡೇರಿಸಿಕೊಂಡು ಮುಂದೆಸಾಗಿರುವುದು ಎಲ್ಲ ಭಕ್ತಸಮೂಹಕ್ಕೆ ಗೊತ್ತಿದ್ದ ವಿಷಯ ಇದಾಗಿದೆ ಎಂದು ಹಿರೂರ ಅನ್ನದಾನೇಶ್ವರ ಮಠದ ಪಟ್ಟಾದೀಶರಾದ ಶ್ರೀ ಷ.ಬ್ರ. ಜಯಸಿದ್ದೇಶ್ವರ ಮಹಾಸ್ವಾಮಿಗಳು ನುಡಿದರು.

ಗುರುವಾರರಂದು ಸ್ಥಳೀಯ ಶ್ರೀ ಆಶ್ರಯ ಬಡಾವಣೆಯಲ್ಲಿ ಶ್ರೀ ಮಾರುತಿ ಸೇವಾ ಸಂಘ ಹಾಗೂ ಗಜಾನನ ಮಂಡಳಿ ಹಾಗೂ ಶ್ರೀ ಹನುಮಾನ ಉತ್ಸವ ಸೇವಾ ಸಮಿತಿಯ ವತಿಯಿಂದ ಏರ್ಪಡಿಸಲಾದ ಶ್ರೀ ಮಾರುತೇಶ್ವರ 14ನೇ ವರ್ಷದ ಜಯಂತ್ಯೋತ್ಸವ ಹಾಗೂ ನವರಥೋತ್ಸವ ಲೋಕಾರ್ಪಣೆಯ ಕಾರ್ಯಕ್ರಮದಲ್ಲಿ ಧರ್ಮಸಭೆಯನ್ನು ಉದ್ದೇಶಿಸಿ ಮಾತನಾಡುತ್ತಿದ್ದ ಅವರು ಆಶ್ರಯ ಬಡಾವಣೆಯಲ್ಲಿ ನಿರ್ಮಾಣಗೊಂಡ ಶ್ರೀ ಮಾರುತೇಶ್ವರ ಮಂದಿರ ಹಾಗೂ ನವರಥೋತ್ಸವ ನಿರ್ಮಾಣದ ವಿಷಯವನ್ನು ಅವಲೋಕಿಸಿದಾಗ ಈ ಬಡಾವಣೆಯ ನಾಗರಿಕರು ಆಶ್ರಯ ಬಡಾವಣೆಯವರಲ್ಲ ಇವರೆಲ್ಲರೂ ಆಕಾಶದೊಳಗಿರುವ ಬಡಾವಣೆಯವರಾಗಿದ್ದಾರೆಂದರು. 14 ವರ್ಷಗಳಲ್ಲಿ ಬಹಳೇ ಶ್ರಮಪಟ್ಟ ಇಲ್ಲೀಯ ಸಂಘಟನೆಗಳಲ್ಲಿ ವಿವಿಧ ಧರ್ಮಿಯರು ಒಳಗೊಂಡಿದ್ದನ್ನು ನೋಡಿದರೆ ಕೋಮು ಸೌಹಾರ್ದತೆಯ ಭಾವನೆ ಮೂಡಿಸುವ ಬಡಾವಣೆ ಇದಾಗಿದೆ ಎಂದರು. ಹನುಮಾನ ದೇವರಿಗೆ ಎಲ್ಲ ಜಾತಿಯವರು ನಡೆದುಕೊಳ್ಳುತ್ತಾರೆ ಆತ ಜಾತಿ ರಹಿತ ದೇವನಾಗಿದ್ದಾನೆಂದು ಹೇಳಿದ ಶ್ರೀಗಳು ಹನುಮಾನನಿಗೆ ಶನಿ ದೇವರು ಕಾಡಲಿಕ್ಕೆ ಬಂದಾಗ ನನ್ನಮೈಯಲ್ಲಿ ಯಾವ ಸ್ಥಾನವೂ ಇಲ್ಲ ತಲೆಯ ಮೇಲೆ ಒಂದೆ ಸ್ಥಾಆನವಿದೆ ಎಂದು ಶನಿದೇವನಿಗೆ ಹೇಳಿದ ಹನುಮಂತನು ತನ್ನ ತಲೆಯ ಮೇಲೆ ಸ್ಥಾನ ನೀಡಿ ಶನಿದೇವರಿಗೆ ಕಾಡುವಂತಹ ಕಾರ್ಯ ಮಾಡಿದ ಹನುಮಾನನ ಇತಿಹಾಸ ವಿವ–ರಿಸಿದ ಶ್ರೀಗಳು ಈ ಕಾರಣದಿಂದಲೇ ಎಲ್ಲ ಭಕ್ತರು ತಮ್ಮ ಬೇಕುಬೇಡಿಕೆಗಳನ್ನು ಇಡೇ–ರಿಸಿಕೊಳ್ಳಲು ಮುಂದಾಗುತ್ತಾರೆಂದರು.

ಇನ್ನೋರ್ವ ಗುಂಡಕನಾಳ ಬೃಹನ ಮಠದ ಶ್ರೀ ಷ.ಬ್ರ.ಗುರುಲಿಂಗ ಶಿವಾಚಾರ್ಯರು ಶ್ರೀ ಮಾರುತೇಶ್ವರ ನವರಥೋತ್ಸವಕ್ಕೆ ಚಾಲನೆ ನೀಡಿ ಮಾತನಾಡುತ್ತಿದ್ದ ಶ್ರೀಗಳು ಧರ್ಮ, ಅರ್ಥ, ಕಾಮ,ಮೋಕ್ಷ ಇವುಗಳನ್ನು ಅರಿತು ನಡೆಯಯಬೇಕು ಯಾವ ರೀತಿ ತೆರಿನ ನಾಲ್ಕು ಗಾಲಿಗಳು ಸಮನಾಗಿ ಚಲಿಸುವ ಮೂಲಕ ಪಾದಕಟ್ಟೆಯನ್ನು ಮುಟ್ಟಿ ಮರಳಿ ಬರುತ್ತದೆಯೋ ಅದೇ ರೀತಿ ಸಂಸಾರ ಎಂಬುದರಲ್ಲಿ ಪತಿ ಪತ್ನಿ ಹಾಗೂ ಕುಟುಂಬಸ್ತರು ಸಮಭಾವನೆಯಿಂದ ನಡೆದುಕೊಂಡು ಹೋದರೆ ಮಾನವರಾದವರೆಲ್ಲರೂ ಸಾಕ್ಷಾತ್ಕಾರವನ್ನು ಮಾಡಿಕೊಳ್ಳಲು ಸಾಧ್ಯವೆಂದರು. ಶ್ರೀ ರಾಮಚಂದ್ರನನ್ನು ಪ್ರೀತಿಯಿಂದ ಗೆದ್ದವ ಹನುಮಾನ ಅವರ ಭಕ್ತಿ ಸಾಮಾನ್ಯ ಭಕ್ತಿ ಅದಾಗಿದ್ದಿಲ್ಲ ಅದು ದೇವನೊಲಿಮೆ ಮಾಡಿಕೊಳ್ಳುವ ಭಕ್ತಿಯಾಗಿತ್ತೆಂದರು.

ಶ್ರೀ ರಾಮಚಂದ್ರನಿಗೆ ನೀನು ನನ್ನ ಹೃದಯದಲ್ಲಿ ಇಡೀ ಅಂಗಾಂಗದಲ್ಲಿ ವಾಸವಾಗಿರುವೆ ಎಂದು ಶ್ರೀರಾಮಚಂದ್ರನಿಗೆ ಹನುಮಂತ ತನ್ನ ಎದೆ ಹರಿದುಕೊಂಡು ಶ್ರೀರಾಮಚಂದ್ರನಿಗೆ ಅವನ ಪ್ರತಿ ರೂಪತೊರಿಸಿ ಭಕ್ತಿ ಎಂಬುದು ಎಂತಹದ್ದಿದೆ ಎಂಬುದನ್ನು ಶ್ರೀ ರಾಮಚಂದ್ರನಿಗೆ ತೊರಿಸಿದ ಹನುಮಂತನ ಭಕ್ತಿ ಸಾಮಾನ್ಯದಲ್ಲ ಅಂತಹ ಮಾರುತೇಶ್ವರ ದೇವಾಲಯ ಹಾಗೂ ರಥವನ್ನು ನಿರ್ಮಾಣ ಮಾಡಿ ಇಂದು ಲೋಕಾರ್ಪಣೆಗೆ ಅನುವು ಮಾಡಿಕೊಟ್ಟಂತಹ ಆಶ್ರಯ ಬಡಾವಣೆಯ ಸಂಘಟಿಕರ ಕಾರ್ಯ ಮೆಚ್ಚುವಂತಹದ್ದಾಗಿದೆ ಎಂದರು.

# ಹೋಳಿ ಹುಣ್ಣಿಮೆಯು ಯಶಸ್ವಿ ಶ್ರೀ ಗಾಯಿತ್ರಿ ಉಪಾಸನೆ



ದಾವಣಗೆರೆ: ದಾವಣಗೆರೆಯ ಶ್ರೀ ಗಾಯತ್ರಿ ದೇವಿಯ ಉಪಾಸಕರ ಕ್ರಿಯಾತ್ಮಕ ಆಧ್ಯಾತ್ಮ ಸಂಸ್ಥೆ ಶ್ರೀ ಗಾಯತ್ರಿ ಪರಿವಾರದಿಂದ ಕಳೆದ 23 ವರ್ಷಗಳಿಂದ ಪ್ರತೀ ತಿಂಗಳ ಹುಣ್ಣಿಮೆಯಂದು ನಗರದ ಜಯದೇವ ವೃತ್ತದ ಹತ್ತಿರವಿರುವ ಶ್ರೀ ಶಂಕರಮಠದ ಆವರಣದಲ್ಲಿ ದವನದ ಹುಣ್ಣಿಮೆಯ ಅಂಗವಾಗಿ ಸಾಮೂಹಿಕ ಗಾಯಿತ್ರಿ ಪೂಜೆ, ಉಪಾಸನೆ ಯಶಸ್ವಿಯಾಗಿ ಅಷ್ಟೋತ್ತರ, ಮೃತ್ಯುಂಜಯ ಜಪದೊಂದಿಗೆ ಶ್ರೀ ಗಾಯತ್ರಿ ಪೂಜೆ, ಉಪಾಸನೆ ಯಶಸ್ವಿಯಾಗಿ ನಡೆಯಿತು ಎಂದು ಗಾಯತ್ರಿ ಪರಿವಾರದ ಪ್ರಧಾನ ಕಾರ್ಯದರ್ಶಿ ಸಾಲಿಗ್ರಾಮ ಗಣೇಶ್ ಶೆಣೈ ತಿಳಿಸಿದ್ದಾರೆ.

ಇಂದಿನ ಪೂಜಾ ಸೇವಾಕರ್ತರಾದ ಡಾ॥ ಸುಶೀಲಮ್ಮ ಹಾಗೂ ಪ್ರೇಮ್‌ಜಿ ಪಟೇಲ್‌ರವರು ಮತ್ತು ಅವರುಗಳ ಕುಟುಂಬ ವರ್ಗದ ಈ ತಿಂಗಳ ಸೇವೆ ಯೊಂದಿಗೆ ಪರಿವಾರದ ಗೌರವಾಧ್ಯಕ್ಷ ರಾದ ಕೆ.ಹೆಚ್. ಮಂಜುನಾಥ್, ಉಪಾಧ್ಯಕ್ಷರಾದ ಡಾ॥ ರಮೇಶ್ ಪಟೇಲ್, ಖಜಾಂಚಿ ಪುರುಷೋತ್ತಮ ಪಟೇಲ್, ಸಂಚಾಲಕರಾದ ಭಾವನ್ನಾರಾಯಣ, ಸಮಿತಿ ಸದಸ್ಯರಾದ ವಾಸುದೇವ ವೀರಭದ್ರರಾವ್, ವಿಜಯ ಕುಮಾರ್ ಶೆಟ್ಟಿ, ಸತ್ಯನಾರಾಯಣ, ವೀರಭದ್ರಪ್ಪ ಮತ್ತು ಕುಟುಂಬ, ವಿ.ಕೃಷ್ಣಮೂರ್ತಿ, ಸತೀಶ್.ಆರ್. ಎಂ., ಪ್ರಸಾದ್, ಬಿ.ಹೆಚ್. ಶಿವಕುಮಾರ ಸ್ವಾಮಿ, ಸಂಧ್ಯಾಶೀನಿವಾಸ್ ದಂಪತಿಗಳು, ಸ್ವರ್ಣಲಾ ಪ್ರಕಾಶ್, ಜಿ.ಎನ್. ಮಂಜುನಾಥ್ ಮುಂತಾದವರು ಉಪಸ್ಥಿತ–ರಿದ್ದರು.

# ಕಡ್ಡಾಯ ಮತದಾನ ಮಾಡಲು ಶಿಕ್ಷಕರಿಗೆ ಸಲಹೆ



ಕೊಪ್ಪಳ: ಭಾಗ್ಯನಗರ ನ್ಯಾಷನಲ್ ಶಾಲೆಯಲ್ಲಿ ಜರುಗುತ್ತಿರುವ ಪರೀಕ್ಷಾ ಮೌಲ್ಯಮಾಪನದಲ್ಲಿ ನಿರತರಾದ ಶಿಕ್ಷಕರಿಗೆ ಮತದಾನ ಜಾಗೃತಿ ಮೂಡಿಸಲಾಯಿತು.

ಈ ವೇಳೆ ಕೊಪ್ಪಳ ತಾ.ಪಂ ಅಕ್ಷರ ದಾಸೋಹದ ಸಹಾಯಕ ನಿರ್ದೇಶಕ ಹನುಮಂತಪ್ಪ ಎಚ್ ಅವರು ಮಾತನಾಡಿ, ಸಾರ್ವತ್ರಿಕ ವಿಧಾನಸಭಾ ಚುನಾವಣೆ ನಿಮಿತ್ತ ಮೇ 10ರಂದು ಮತದಾನ ಜರುಗಲಿದ್ದು, ಎಲ್ಲಾ ಶಿಕ್ಷಕರು ಅಂಚೆ ಮತ ಚೀಟಿ ಪಡೆದು ತಮ್ಮ ಮತದಾನದ ಹಕ್ಕನ್ನು ಚಲಾಯಿಸಬೇಕು. ಯಾರೂ ಸಹ ಮತದಾನದಿಂದ ದೂರ ಉಳಿಯಬಾರದು ಎಂದು ಸಲಹೆ ಮಾಡಿದರು.

ಮತದಾನ ಪ್ರತಿಜ್ಞೆಯನ್ನು ಶಾಲಾ ಮುಖ್ಯೋಪಾಧ್ಯಾಯರಾದ ದೇವಪ್ಪ ಬಚ್ಚಕ್ಕನವರ ಬೋಧಿಸಿದರು. ಸ್ವೀಪ್ ಕಾರ್ಯಕ್ರಮದಲ್ಲಿ 80 ಶಿಕ್ಷಕರು ಮತದಾನ ಪ್ರತಿಜ್ಞೆ ವಿಧಿ ಸ್ವೀಕರಿಸಿದರು. ಈ ಸಂದರ್ಭದಲ್ಲಿ ತಾಲೂಕ ಐಇಸಿ ಸಂಯೋಜಕರು, ಶಾಲಾ ಶಿಕ್ಷಕರು ಹಾಜರಿದ್ದರು.

# ಜ್ಞಾನ ಸಂಸ್ಕಾರ ಜೀವನದ ನಿಜವಾದ ಆಸ್ತಿ: ಶ್ರೀ ರಂಭಾಪುರಿ ಜಗದ್ಗುರು



ಬಾಳೆಹೊನ್ನೂರು: ದೀರ್ಘ ಕಾಲ ಜೊತೆಗಿದ್ದವರೆಲ್ಲ ಒಳ್ಳೆಯ ಸ್ನೇಹಿತರಲ್ಲ. ಕಷ್ಟ ಕಾಲದಲ್ಲಿ ಜೊತೆಗಿದ್ದವರೆ ನಿಜವಾದ ಸ್ನೇಹಿತರು. ಜ್ಞಾನ ಮತ್ತು ಸಂಸ್ಕಾರ ಮನುಷ್ಯ ಜೀವನದ ನಿಜವಾದ ಆಸ್ತಿಯೆಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶ್ರೀ ರಂಭಾಪುರಿ ಪೀಠದಲ್ಲಿ ಹುಣ್ಣಿಮೆ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯ ಬದುಕಲು ಹಣದ ಅವಶ್ಯಕತೆಯಿದೆ. ಆದರ್ಶ ವ್ಯಕ್ತಿಯಾಗಿ ಬಾಳಲು ಸದ್ಗುಣ ಬೇಕು. ಕರುಣೆ ಇದ್ದವರಿಗೆ ಕಷ್ಟ ಒಳ್ಳೆಯವರಿಗೆ ದು:ಖ ಜಾಸ್ತಿಯಿರುತ್ತದೆ. ನೋವಿರದ ವ್ಯಕ್ತಿ ಯಾರೂ ಇಲ್ಲ. ಒಬ್ಬೊಬ್ಬರಿಗೆ ಒಂದು ರೀತಿ ನೋವು ಇರುವುದು ಸಹಜ. ನೋವಿನಲ್ಲೂ ಛಲದಿಂದ ಬಾಳುವುದೇ ನಿಜವಾದ ಜೀವನವಾಗಿದೆ. ಒಳ್ಳೆಯ ಕೆಲಸಗಳು ಎಂದಿಗೂ ವ್ಯರ್ಥವಾಗುವುದಿಲ್ಲ. ಅದರ ಫಲ ಇದ್ದೇ ಇರುತ್ತದೆ.

ದೇಹ ಶುದ್ಧಿ, ನುಡಿ ಶುದ್ಧಿ ಮತ್ತು ಮನ: ಶುದ್ಧಿಯಿಂದ ಬಾಳಿದರೆ ಜೀವನದಲ್ಲಿ ಸುಖ ಶಾಂತಿ ಪ್ರಾಪ್ತವಾಗುವುದೆಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಜೀವಾತ್ಮರನ್ನು ಎಚ್ಚರಿಸಿದ್ದಾರೆ ಎಂದರು. ಇದೇ ಸಂದರ್ಭದಲ್ಲಿ "ರಂಭಾಪುರಿ ಬೆಳಗು" ಮಾಸ ಪತ್ರಿಕೆಯನ್ನು ಪ್ರಾಥ–ಮಿಕ ಮತ್ತು ಪ್ರೌಢ ಶಾಲಾ ಶಿಕ್ಷಣ ಸಚಿವ ಬಿ.ಸಿ.ನಾಗೇಶ ಬಿಡುಗಡೆ ಮಾಡಿ ಮಾತನಾಡಿ ಜನ ಸಮುದಾಯದಲ್ಲಿ ಜಾಗೃತಿ ಮತ್ತು ಅರಿವು ಮೂಡಿಸಲು ಪತ್ರಿಕೆಗಳ ಅವಶ್ಯಕತೆಯಿದೆ. ಧಾರ್ಮಿಕ ಸಾಮಾಜಿಕ ಅರಿವು ಹಾಗೂ ರಾಷ್ಟ್ರ ಭಕ್ತಿ ಮೂಡಿಸುವ ನಿಟ್ಟಿನಲ್ಲಿ ರಂಭಾಪುರಿ ಬೆಳಗು ಪ್ರಮುಖ ಪಾತ್ರ ವಹಿಸಿದೆ ಎಂದು ಹರುಷ ವ್ಯಕ್ತಪಡಿಸಿದರು.

ಹುಲಿಕೆರೆ ದೊಡ್ಡಮಠದ ವಿರೂಪಾಕ್ಷ ಶಿವಾಚಾರ್ಯ ಸ್ವಾಮಿಗಳು, ಕರ್ಪುರವಳ್ಳಿ ಮಠದ ಚಂದ್ರಶೇಖರ ಶಿವಾಚಾರ್ಯ ಸ್ವಾಮಿಗಳು, ಬಬಲಾದ ದಾನಯ್ಯ ದೇವರು, ಶ್ರೀ ಪೀಠದ ಆಡಳಿತಾಧಿಕಾರಿ ಎಸ್.ಬಿ.ಹಿರೇಮಠ, ಬೆಂಗಳೂ–ರಿನ ಹಾಲ್ಪೇನು ವೀರಭದ್ರಯ್ಯ, ನ್ಯಾಮತಿ ಬಸವರಾಜ, ಬೆಂಗಳೂರಿನ ಬಾಳಯ್ಯ ಇಂಡಿಮಠ, ಬ್ಯಾಡಿಗಿ ರವೀಂದ್ರ ಮತ್ತು ಹುಬ್ಬಳ್ಳಿ ವೀರೇಶ ಪಾಟೀಲ ಉಪಸ್ಥಿತ–ರಿದ್ದರು.

## ಬೆಳಗಾವಿ: ಕೊಗನೊಳಿ ಚೆಕ್ ಪೋಸ್ಟ್ ನಲ್ಲಿ ಮತ್ತೆ 1.50 ಕೋಟಿ ರೂ. ವಶ



ಬೆಳಗಾವಿ: ಮಹಾರಾಷ್ಟ್ರ ಗಡಿಯ ಕೊಗನೋಳಿ ಚೆಕ್ ಪೋಸ್ಟ್ ನಲ್ಲಿ ಬಸ್ ಪ್ರಯಾಣಿಕನೋರ್ವನಿಂದ ಒಂದೂವರೆ ಕೋಟಿ ರೂ. ವಶಪಡಿಸಿಕೊಳ್ಳಲಾಗಿದೆ.

ಕರ್ತವ್ಯ ನಿರತ ಪೊಲೀಸರು ಮತ್ತು ಚುನಾವಣೆ ಸಿಬ್ಬಂದಿ ಖಾಸಗಿ ಬಸ್ ಒಂದರಲ್ಲಿ ಮುಂಬೈನಿಂದ ಬರುತ್ತಿದ್ದ ಪ್ರಯಾಣಿಕನಲ್ಲಿದ್ದ ಹಣವನ್ನು ವಶಕ್ಕೆ ಪಡೆದರು. ಈ ಹಣಕ್ಕೆ ಆತನ ಬಳಿ ಯಾವುದೇ ದಾಖಲೆಗಳಿರಲಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ.

ಇದರಿಂದಾಗಿ ಬುಧವಾರ ಒಂದೇ ದಿನ ಬೆಳಗಾವಿ ಜಿಲ್ಲೆಯಲ್ಲಿ 3.61 ಕೇಟಿ ರೂ. ನಗದು ಹಾಗೂ 60.47 ಲಕ್ಷ ರೂ. ಆಭರಣ ವಶಪಡಿಸಿಕೊಂಡಂತಾಗಿದೆ. ಜಿಲ್ಲಾಧಿಕಾರಿ ನಿತೇಶ ಪಾಟೀಲ ಹಾಗೂ ಎಸ್ಪಿ ಸಂಜೀವ ಪಾಟೀಲ ಅವರು ಕರ್ತವ್ಯ ನಿರತ ಸಿಬ್ಬಂದಿ ಕಾರ್ಯವನ್ನು ಶ್ಲಾಘಿಸಿದ್ದಾರೆ.

## ಕಾನೂನು ಸುವ್ಯವಸ್ಥೆ ಉಲ್ಲಂಘನೆಯಾಗದಂತೆ ಇರಬೇಕು: ರೌಡಿಗಳಿಗೆ ಎಚ್ಚರಿಕೆ

ಹುಕ್ಕೇರಿ: ಚುನಾವಣೆ ವೇಳೆ ಸಾರ್ವಜನಿಕವಾಗಿ ಅಹಿತಕರ ಚಟುವಟಿಕೆಗಳಲ್ಲಿ ಭಾಗವಹಿಸದೆ ಹಾಗೂ ಕಾನೂನು ಸುವ್ಯವಸ್ಥೆ ಉಲ್ಲಂಘನೆಯಾಗದಂತೆ ಇರಬೇಕು. ಎಂದು ಹುಕ್ಕೇರಿ ಪೊಲೀಸ್ ಇನ್ಸ್ಪೆಕ್ಟರ್ ಮಹಮ್ಮದ ರಫೀಕ ತಹಶಿಲ್ದಾರ ರೌಡಿಗಳಿಗೆ ಖಡಕ್ ಎಚ್ಚರಿಕೆ ನೀಡಿದರು.

ಗುರುವಾರ ಬೆಳಿಗ್ಗೆ ಹುಕ್ಕೇರಿ ಪೊಲೀಸ ಠಾಣೆ ಆವರಣದಲ್ಲಿ ರೌಡಿಗಳನ್ನ ಠಾಣೆಗೆ ತಂದು ಎಚ್ಚರಿಕೆ ನೀಡಿದ್ದಾರೆ.

ಹುಕ್ಕೇರಿ ಸಿಪಿಐ ಮಹಮ್ಮದ ರಫೀಕ ತಹಸೀಲ್ದಾರ ಇವರ ನೇತೃತ್ವದಲ್ಲಿ, ರೌಡಿಗಳ ಪರೇಡ್ ನಡೆಸಿ, ರೌಡಿಗಳ ಚಟುವಟಿಕೆಗಳು, ಅವರ ಉದ್ಯೋಗ, ವಾಸಿಸುವ ಸ್ಥಳ, ಅವರ ಪರ ಕಾನೂನುಬಾಹಿರ ಚಟುವಟಿಕೆಗಳಲ್ಲಿ



ತೊಡಗಿರುವ ರೌಡಿಗಳ ಮಾಹಿತಿ ಹಾಗೂ ಕೆಲವರನ್ನು ವಶಕ್ಕೆ ಪಡೆದುಕೊಂಡು ವಿಚಾರಣೆ ನಡೆಸಿದರು.

ಪೆರೇಡ್‌ನಲ್ಲಿ ಭಾಗವಹಿಸುವ ರೌಡಿಗಳಲ್ಲಿ ಯಾವುದೇ ಅಪರಾಧ ಕೃತ್ಯಗಳಲ್ಲಿ ಭಾಗಿಯಾಗದೆ, ರೌಡಿ ಚಟುವಟಿಕೆಗಳನ್ನು ನಡೆಸದೆ, ಉತ್ತಮ ಜೀವನ ನಡೆಸುತ್ತಿರುವವರನ್ನು ರೌಡಿಪಟ್ಟಿಯಿಂದ ಕೈಬಿಡಲು ಪ್ರಯತ್ನಿಸಲಾಗುವುದು ಎಂದು ರೌಡಿಗಳಿಗೆ ತಿಳಿಹೇಳಿದರು.

ಈ ಸಂದರ್ಭದಲ್ಲಿ ಪೊಲೀಸ್ ಸಿಬ್ಬಂದಿಗಳಾದ ಮಂಜುನಾಥ ಕಬ್ಬೂರ ಎಸ್ ಆರ್ ರಾಮದುರ್ಗ, ಗಜಾನನ ಕಾಂಬಳೆ, ಅಜೀತ ನಾಯಿಕ ಉಮೇಶ ಅರಭಾಂವಿ ಹಾಜರಿದ್ದರು.

## ನೂರಾರು ಯುವಕರು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆ



ಬೆಳಗಾವಿ: ಶಾಸಕ ಸತೀಶ್ ಜಾರಕಿಹೊಳಿ ಅವರ ಸಮ್ಮುಖದಲ್ಲಿ ಯಮಕನಮರಡಿ ಮತಕ್ಷೇತ್ರದ ಹುದಲಿ ಗ್ರಾಮದ ನೂರಾರು ಯುವಕರು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದರು.

ಕಾಂಗ್ರೆಸ್ ಬಡವರ ಹಿತಕ್ಕಾಗಿ ಕೆಲಸ ಮಾಡುವ ಏಕೈಕ ಪಕ್ಷವಾಗಿದೆ. ಜನಪರವಾದ ಕಾಂಗ್ರೆಸ್ ಪಕ್ಷ ಬೆಂಬಲಿಸಲು ಇತರರನ್ನು ಪ್ರೇರೇಪಿಸಿ ಎಂದು ನೂತನ ಕಾರ್ಯಕರ್ತರಿಗೆ ತಿಳಿಸಿ ಕಾಂಗ್ರೆಸ್ ಪಕ್ಷದ ಶಾಲು ಹಾಕುವ ಮೂಲಕ ಸ್ವಾಗತಿಸಿದರು. ಪಕ್ಷದ ಸಿದ್ಧಾಂತಗಳನ್ನು ಮೈಗೂಡಿಸಿಕೊಂಡು ಕಾಂಗ್ರೆಸ್ ಗೆಲುವಿಗೆ ಶ್ರಮಿಸಬೇಕು.

## ಉದ್ಯೋಗ ಖಾತ್ರಿ ಕೂಲಿಕಾರರಿಗೆ ಮತದಾನ ಜಾಗೃತಿ



ಬೈಲಹೊಂಗಲ: ಗ್ರಾಮ ಪಂಚಾಯತ ಕೆಂಗಾನೂರ ದಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಅಕುಶಲ ಕೂಲಿಕಾರರಿಗೆ ಮತದಾನ ಜಾಗೃತಿಯನ್ನು ಮಾಡಲಾಯಿತು ಪ್ರತಿಜ್ಞಾ ವಿಧಿ, ಬ್ಯಾಡ್ಜ್ ವಿತರಣೆ ಮತ್ತು ಕರಪತ್ರ ಹಂಚು ಮೂಲಕ ಮತದಾನ ಕುರಿತು ಜಾಗೃತಿ ಮಾಡಲಾಯಿತು.

ಉಪಸ್ಥಿತಿ ಗ್ರಾಪಂ ಅಭಿವೃದ್ಧಿ ಅಧಿಕಾರಿ ಮೇಘನಾ ಶೇಟ್ಟಿ, ಸಿದ್ದಾರೋಡ, ಜಗದೀಶ ಈರಣ್ಣ ಹಾಗೂ ನರೇಗಾ ಕೂಲಿಕಾರರು ಹಾಜರಿದ್ದರು.

## ಹನುಮ ಜಯಂತಿ ಕಾರ್ಯಕ್ರಮ



ಹುಕ್ಕೇರಿ: ತಾಲೂಕಿನಲ್ಲಿ ಶ್ರದ್ಧೆ ಭಕ್ತಿಯಿಂದ ಅರ್ಥಪೂರ್ಣವಾಗಿ ಹನುಮ ಜಯಂತಿ ಉತ್ಸವ ಆಚರಿಸಲಾಯಿತು.ಮುಂಜಾನೆಯ ಹನುಮ ಮಂದಿರಗಳಲ್ಲಿ ಅಭಿಷೇಕ ,ಮಂಗಳಾರುತಿ ಜರುಗಿದವು.

ಮದ್ಯಾಹ್ನದವರೆಗೆ ಮಹಾಪ್ರಸಾದ ಹಮ್ಮಿಕೊಳ್ಳಲಾಗಿತು. ಪಟ್ಟಣದ ಹಳೆ ತಹಶಿಲ್ದಾರ ಕಚೇರಿಯ ಆವರಣದಲ್ಲಿ ಹನುಮ ಜಯಂತಿಯನ್ನು ಪೋಲಿಸರ, ಕಂದಾಯ ಇಲಾಖೆ.ವಕೀಲರು. ಪಾಲ್ಗೊಂಡು ವಿಜೃಂಭಣೆಯಿಂದ ಆಚರಿಸಿದರು.

ಹನುಮ ಜಯಂತಿ ಕಾರ್ಯಕ್ರಮದಲ್ಲಿ ರಮಜಾನ ಉಪವಾಸದೊಂದಿಗೆ ಹನುಮದೇವರ ದರ್ಶನ ಪಡೆದು ಸಿಪಿಐ ರಫೀಕ್ ಮಹಮ್ಮದ್ ತಹಶಿಲ್ದಾರ. ಆರ್ಚಕರಿಂದ ಆರತಿ ಪಡೆದುಕೊಂಡರು.

ತಹಶಿಲ್ದಾರ ಸಂಜಯ ಇಂಗಳೆ' ಸಿಪಿಐ ರಫೀಕ್ ಮಹ್ಮದ ತಹಶಿಲ್ದಾರ, ಉಪತಹಶಿಲ್ದಾರ, ಎನ್.ಆರ್.ಪಾಟೀಲ್. ಪಿ.ಜಿ ಕೊಣ್ಣೂರ, ಮಂಜುನಾಥ ಕಬ್ಬೂರ,ರವಿ ಢಂಗ,ವಕೀಲರ ಸಂಘದ ಅಧ್ಯಕ್ಷ ರವಿ ಚೌಗಲಾ,ಕೆ.ಎ.ಜಿನರಾಳ ಬಿ.ಕೆ ಮಗೆಣ್ಣವರ,ಕಲಗೌಡ ಪಾಟೀಲ. ಸಂಗಯ್ಯ ಹಿರೇಮಠ,ಮತ್ತಿತರರು ಉಪಸ್ಥಿತರಿದ್ದರು.

## ಅದ್ಧೂರಿಯಿಂದ ಹನುಮ ಜಯಂತಿ ಆಚರಣೆ

ಬೆಳಗಾವಿ: ಭಗವಾನ್ ಹನುಮಂತನ ಜನ್ಮದಿನವನ್ನು ಗುರುವಾರ ದೇಶಾದ್ಯಂತ ಸಂಭ್ರಮದಿಂದ ಆಚರಿಸಲಾಯಿತು. ಅದೇ ರೀತಿ ಬೆಳಗಾವಿಯಲ್ಲೂ ವಿವಿಧ ಹನುಮ ಮಂದಿರದಲ್ಲಿ ಹನುಮ ಜಯಂತಿಯನ್ನಾಗಿ ಆಚರಿಸಲಾಯಿತು.

ರಾಮಯುಗದಲ್ಲಿ ಅಂದರೆ ತ್ರಾಯುಗದಲ್ಲಿ ಹನುಮಂತನ ಜನನವಾಯಿತು. ದೃಕ್ ಪಂಚಾಂಗದ ಪ್ರಕಾರ ಮಂಗಳವಾರದ ಸೂರ್ಯೋದಯದ ನಂತರ ಚೈತ್ರ ಪೂರ್ಣಿಮೆಯ ಸಮಯದಲ್ಲಿ ಹನುಮಂತನು ಜನಿಸಿದ್ದಾನೆ ಎಂದು ಉಲ್ಲೇಖಿತವಾಗಿದೆ.ಭಗವಾನ್ ಹನುಮಂತನು ಆಧ್ಯಾತ್ಮಿಕ ಪ್ರಯಾಣದಲ್ಲಿ ಶೃದ್ದೆ ಹಾಗೂ ಭಕ್ತಿ ಭಾವದಿಂದ ಆಶೀರ್ವಾದವನ್ನು ಪಡೆಯುವ ಭಕ್ತ ಅಥ-



'ವಾ ಸಾಧಕನಿಗೆ ಅಸಾಧಾರಣ ಶಕ್ತಿಯನ್ನು ಕರುಣಿಸುತ್ತಾನೆ ಎಂದು ನಂಬಲಾಗಿದೆ.

ಬೆಳಗಾವಿಯ ರಾಮತೀಥ-'ರ್ಥ ನಗರದ ಕಣಬರ್ಗಿ ಕೆರೆ ರಸ್ತೆಯಲ್ಲಿರುವ ಶ್ರೀ ಹನುಮಾನ ಟ್ರಸ್ಟ್ ಕಮಿಟಿ ವತಿಯಿಂದ ಶ್ರೀ ಹನುಮಾನ ಜಯಂತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಹನುಮಾನ ದೇವರಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು.

ಈ ವೇಳೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಸುರೇಶ ಯಾದವ ಫೌಂಡೇಶನ್ ಅಧ್ಯಕ್ಷ ಸುರೇಶ ಯಾದವ ಮಾತನಾಡಿ ಎಲ್ಲರಿಗೂ ಹನುಮ ಜಯಂತಿ ಶುಭಾಶಯ ಕೋರಿದರು.

ಹನುಮ ಜಯಂತಿ ನಿಮಿತ್ತ ಹೋಮ-ಹವನ ಮಾಡಲಾಗಿತ್ತು. ಹೂವಿನ ಅಲಂಕಾರ ಸೇವೆಯನ್ನು ಗಿರೀಶ್. ಎಮ್. ದಂಪತಿಗಳು ಸಲ್ಲಿಸಿದರು. ಜಯಂತಿ ನಿಮಿತ್ತ ಎಲ್ಲ ಭಕ್ತರಿಗೆ ಮಹಾಪ್ರಸಾದ ಏರ್ಪಡಿಸಲಾಗಿತ್ತು.

ಇದೇ ವೇಳೆ ಸುರೇಶ ಯಾದವ ಹಾಗೂ ಗಿರೀಶ ಎಂ. ದಂಪತಿಗಳನ್ನು ಸತ್ಕರಿಸಲಾಯಿತು.

ಕಾರ್ಯಕ್ರಮದಲ್ಲಿ ಹನುಮಾನ ದೇವಸ್ಥಾನದ ಅರ್ಚಕ ಆನಂದಯ್ಯಸ್ವಾಮಿ ಚಿಕ್ಕಮಠ, ನಾಗಯ್ಯಸ್ವಾಮಿ ಚಿಕ್ಕಮಠ, ನಗರ ಸೇವಕ ಹನುಮಂತ ಕೊಂಗಾಲಿ, ಪವಿತ್ರಾ ಪಾಟೀಲ, ಎಮ್.ವೈ.ಟೊಪೋಜಿ, ಎಚ್. ತೋರಗಲ್, ಆನಂದ ಪಾಟೀಲ, ಎ.ವೈ. ಕೋಲಕಾರ, ಅರ್ಜುನ್ ಊರಬನಟ್ಟಿ, ಸಿ.ಎನ್.ಬಿಡ್ನಾಳ, ಸಿದ್ರಾಯಿ ಕಲಕಂಭಾಕರ, ಸಂತೋಷ್ ಮೆರೆಕಾರ, ಸಿದ್ದಪ್ಪ ಉಂಡಿ, ಶೋಭಾ ಪಾಟೀಲ, ಪ್ರಭಾವತಿ ಅಮರಸೇತ, ವೃಷಭ ಲಂಗೋಟಿ, ರವಿ ಸತ್ತಿಗೇರಿ, ರಾಜಶೇಖರ ಶಿಂತ್ರಿ, ನಿರ್ವಾಣಿ, ಬೆಣ್ಣಿ, ಸಿಗಹಳ್ಳಿ, ಖಿಲಾರಿ, ಸಂಗೀತಾ ಗುಣಕಿ, ಅಕ್ಕಿಶೆಟ್ಟರ ಹಾಗೂ ರಾಮತೀರ್ಥ ನಗರ ಸೇರಿ ಸುತ್ತಮುತ್ತಲಿನ ಸಾವಿರಾರು ಭಕ್ತರು ಭಾಗವಹಿಸಿ ಮಹಾಪ್ರಸಾದ ಸ್ವೀಕರಿಸಿದರು.

## ವಿಶೇಷಚೇತರಿಗೆ ಮತದಾನ ಜಾಗೃತಿ ಕಾರ್ಯಕ್ರಮ

ಬೆಳಗಾವಿ: ಗೋಕಾಕ ವಿಧಾನಸಭಾ ಮತಕ್ಷೇತ್ರದ ವ್ಯಾಪ್ತಿಯಲ್ಲಿನ ವಿಶೇಷಚೇತರಿಗೆ ಮತದಾನ ಜಾಗೃತಿ ಕಾರ್ಯಕ್ರಮ ಹಾಗೂ ಜಾಗೃತಿ ಜಾಥಾವನ್ನು ಗುರುವಾರ ಹಮ್ಮಿಕೊಳ್ಳಲಾಯಿತು.

ಗೋಕಾಕ ನಗರದ ತಾಪಂ ಕಚೇರಿಯಲ್ಲಿ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಇದೇ ವೇಳೆ ತಾಪಂ ಇಒ ಮುರಳೀಧರ್ ದೇಶಪಾಂಡೆ ಅವರು ಮತದಾರರ ಪ್ರತಿಜ್ಞಾ ವಿಧಿ ಬೋಧಿಸಿದರು.

ಬಳಿಕ ತಾಪಂ ಕಾರ್ಯಾಲಯದಿಂದ ಗೋಕಾಕ ನಗರ ಪ್ರಮುಖ ಬೀದಿಗಳಲ್ಲಿ ಸಂಚರಿಸಿದ ಬೈಕ್ ರ್‍ಯಾಲಿಯೂ ಬಸವೇಶ್ವರ ವೃತ್ತದವರೆಗೆ ಜರುಗಿತು.

ಇದೇ ಸಂದರ್ಭದಲ್ಲಿ ಮಾತನಾಡಿದ



ತಾಪಂ ಇಓ ಮುರಳೀಧರ ದೇಶಪಾಂಡೆ ಅವರು, ವಿಧಾನಸಭೆ ಚುನಾವಣೆಯಲ್ಲಿ ಶೇ.100 ರಷ್ಟು ಮತದಾನ ಮಾಡುವ ನಿಟ್ಟಿನಲ್ಲಿ ವಿವಿಧ ಸ್ವೀಪ್ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಎಲ್ಲ ವಿಶೇಷಚೇತನರು ಕೂಡ ಮತದಾನ ಮಾಡಬೇಕು ಎಂದು ತಿಳಿಸಿದರು.

ತಾ ಪಂ ವ್ಯವಸ್ಥಾಪಕರು ಹೊಸಮನಿ ಐಇಸಿ ಸಂಯೋಜಕ ಶಂಕರ ಗುಜನಟ್ಟಿ, ಎಂಐಎಸ್ ಸಂಯೋಜಕ ರಾಹುಲ್, ತಾಂತ್ರಿಕ ಸಂಯೋಜಕ ಶಬ್ಬೀರ್ ಮೊದಲಾದವರು ತಾ ಪಂ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ವಿವಿಧಡೆ ಹನುಮ ಜನ್ಮೋತ್ಸವ ಆಚರಣೆ



ಬೆಳಗಾವಿ: ಶಾಸಕ ಅನಿಲ ಬೆನಕೆ ಅವರು ಶ್ರೀ. ಹನುಮ ಜನ್ಮೋತ್ಸವ ನಿಮಿತ್ತ ಬೆಳಗಾವಿ ನಗರದ ಆರ್.ಟಿ.ಓ. ವೃತ್ತದ ಹತ್ತಿರದ ಸೋನ್ಯಾ ಮಾರುತಿ, ಅಂಜನೇಯ ನಗರ, ಶಾಹು ನಗರ, ಬಸವ ಕಾಲೋನಿ, ಹನುಮಾನ ನಗರ, ಎ.ಪಿ.ಎಂ.ಸಿ. ಮಾರ್ಕೆಟಯಾರ್ಡ, ಕ್ಯಾಂಪ, ಮೆನಸಿ ಗಲ್ಲಿ, ರಾಮತೀರ್ಥ ನಗರ, ದೇವರಾಜಅರಸು ಕಾಲೋನಿ ಯಲ್ಲಿನ ಹನುಮ ದೇವಸ್ಥಾನಗಳಿಗೆ ತೆರಳಿ ವಿಶೇಷ ಪೂಜೆ ಸಲ್ಲಿಸಿ ಮಹಾಪ್ರಸದವನ್ನು ಸ್ವೀಕರಿಸಿದರು ನಂತರದಲ್ಲಿ ಭಜರಂಗ ಬಲಿ ಶ್ರೀ ಹನುಮನು ಸರ್ವರಿಗೂ ಒಳಿತು ಮಾಡಲಿ ಎಂದು ಪ್ರಾರ್ಥಿಸಿದರು.

ಈ ಸಂದರ್ಭದಲ್ಲಿ ನಗರ ಸೇವಕರು, ಪದಾಧಿಕಾರಿಗಳು ಹಾಗೂ ನೂರಾರು ಸಂಖ್ಯೆಯ ಭಕ್ತಾದಿಗಳು ಉಪಸ್ಥಿತರಿದ್ದರು.

## ವಿದ್ಯಾರ್ಥಿಗಳಿಗೆ ಇವಿಎಂ, ವಿವಿ ಪ್ಯಾಟ್ ಬಳಕೆ ಮಾಹಿತಿ ನೀಡಿದ ಜಿಪಂ ಸಿಇಓ



ಕೊಪ್ಪಳ: ಕೊಪ್ಪಳ ಜಿಲ್ಲೆಯಲ್ಲಿ ಮತದಾನ ಪ್ರಮಾಣ ಹೆಚ್ಚಿಸಲು ಕೊಪ್ಪಳ ಜಿಲ್ಲಾ ಸ್ವೀಪ್ ಸಮಿತಿಯು ಜಿಲ್ಲೆಯಾದ್ಯಂತ ಹಲವು ವೈವಿಧ್ಯಮಯ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದೆ. ಇವಿಎಂ ಹಾಗೂ ವಿವಿ ಪ್ಯಾಟ್ ಬಳಕೆ ಬಗ್ಗೆ ವಿಶೇಷವಾಗಿ ಯುವ ಮತದಾರರಲ್ಲಿ ಅರಿವು ಮೂಡಿಸಲಾಗುತ್ತಿದೆ.

ಕೊಪ್ಪಳ ಜಿಲ್ಲಾ ಸ್ವೀಪ್ ಸಮಿತಿಯ ಅಧ್ಯಕ್ಷರು ಆಗಿರುವ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ರತ್ನಂ ಪಾಂಡೆಯ ಅವರು ಏಪ್ರೀಲ್ 6ರಂದು ಖುದ್ದು ತಾವೇ ಕೊಪ್ಪಳದ ಕಿಮ್ಸ್ ಕಾಲೇಜಿಗೆ ತೆರಳಿ ಅಲ್ಲಿನ ವಿದ್ಯಾರ್ಥಿಗಳಿಗೆ ಇವಿಎಂ ಹಾಗೂ ವಿವಿ ಪ್ಯಾಟ್ ಬಳಕೆ ಕುರಿತಂತೆ ಪ್ರಾತ್ಯಕ್ಷಿಕೆ ಮೂಲಕ ಮಾಹಿತಿ ನೀಡಿದರು.

ಬಳಿಕ ಮಾತನಾಡಿದ ಅವರು, ಜಿಲ್ಲೆಯಲ್ಲಿ ಮತದಾನ ಪ್ರಮಾಣವನ್ನು ಹೆಚ್ಚಿಸಲು ಜಿಲ್ಲಾಡಳಿತ ಹಾಗೂ ಜಿಲ್ಲಾ ಸ್ವೀಪ್ ಸಮಿತಿಯಿಂದ ಜಿಲ್ಲೆಯ ಎಲ್ಲಾ ಪದವಿ ಕಾಲೇಜುಗಳಲ್ಲಿ, ಗ್ರಾಮೀಣ ಪ್ರದೇಶಗಳಲ್ಲಿ ಹಾಗೂ ಇತರ ಸಾರ್ವಜನಿಕ ಸ್ಥಳಗಳಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದರು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರಜೆಗಳೇ ಪ್ರಭುಗಳು. ಪ್ರಜೆಗಳ ಪ್ರತಿನಿಧಿಗಳನ್ನು ಆರಿಸಿ ಕಳುಹಿಸುವ ಮಹತ್ತರ ಜವಾಬ್ದಾರಿ ಈ ದೇಶದ ಪ್ರತಿಯೊಬ್ಬ ಮತದಾರನ ಮೇಲಿದ್ದು, ಈ ಜವಾಬ್ದಾರಿಯ ಮಹತ್ವ ಅರಿತು ಎಲ್ಲ ಮತದಾರರು ತಪ್ಪದೆ ತಮ್ಮ ಮತ ಚಲಾಯಿಸಬೇಕು. ಮತದಾನ ಮಾಡುವುದರ ಮೂಲಕ ಎಲ್ಲರೂ ತಮ್ಮ-ತಮ್ಮ ಆದ್ಯ ಕರ್ತವ್ಯ ಪಾಲಿಸಬೇಕು ಎಂದು ಸಲಹೇ ನೀಡಿದರು.

ಅಣಕು ಮತದಾನ: ಮೊದಲನೇ ಬಾರಿಗೆ ಮತ ಚಲಾವಣೆ ಮಾಡಿದ ಹೊಸ ಮತದಾರರು ಇವಿಎಂ ಹಾಗೂ ವಿವಿಪ್ಯಾಟ್ ಕಾರ್ಯ ಚಟುವಟಿಕೆ ಕುರಿತು ಉತ್ಸಾಹದಿಂದ ತಿಳಿದು ಅಣಕು ಮತದಾನ ಮಾಡಿದರು. ಮತದಾನಕ್ಕೆ ಯುವ ಮತದಾರರನ್ನು ಆಕರ್ಷಿಸಲು ಜಿಲ್ಲಾ ಸ್ವೀಪ್ ಸಮಿತಿಯಿಂದ ಸಿದ್ಧಪಡಿಲಾದ ಫೋಟೋ ಫ್ರೇಮ್‌ನಲ್ಲಿ ವಿದ್ಯಾರ್ಥಿಗಳು ಫೋಟೋ ತೆಗೆಯಿಸಿಕೊಂಡು ಸಂತಸ ವ್ಯಕ್ತಪಡಿಸಿದರು. ಜಾಗೃತಿ ಫಲಕಗಳನ್ನು ಹಿಡಿದು ಮತದಾನ ಜಾಗೃತಿಗೆ ಸಹಕರಿಸಿದರು.

ಪ್ರತಿಜ್ಞಾ ವಿಧಿ ಸ್ವೀಕಾರ: ಕೊಪ್ಪಳ ಜಿಲ್ಲಾ ತರಬೇತಿ ಸಂಸ್ಥೆಯ ಪ್ರಾಚಾರ್ಯರಾದ ಕೃಷ್ಣಮೂರ್ತಿ ದೇಸಾಯಿ ಅವರು ಮತದಾನ ಪ್ರತಿಜ್ಞಾ ವಿಧಿ ಬೋಧಿಸಿದರು. ಕಾರ್ಯಕ್ರಮದಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಪ್ರತಿಜ್ಞಾವಿದಿ ಸ್ವೀಕರಿಸಿದರು.

## 7.5 ಲಕ್ಷಕ್ಕೂ ಅಧಿಕ ಮೌಲ್ಯದ ಮದ್ಯ ವಶ



ಗೋಕಾಕ: ಗೋಕಾಕ ವಲಯ ವ್ಯಾಪ್ತಿಯ ಖನಗಾಂವ ಗ್ರಾಮದ ಮನೆಯೊಂದರಲ್ಲಿ ಅಕ್ರಮವಾಗಿ ಸಂಗ್ರಹಿಸಿಟ್ಟಿದ್ದ 7,70,000 ಲಕ್ಷ ರೂ ಮೌಲ್ಯದ ಮದ್ಯವನ್ನು ಅಬಕಾರಿ ಇಲಾಖೆ ಅಧಿಕಾರಿಗಳು ವಶಕ್ಕೆ ಪಡೆದುಕೊಂಡ ಘಟನೆ ನಡೆದಿದೆ.

7,70,000 ರೂ ಮೌಲ್ಯದ ಮದ್ಯವನ್ನು ಅಕ್ರಮವಾಗಿ ಸಂಗ್ರಹಿಸಿಟ್ಟಿರುವ ಬಗ್ಗೆ ಖಚಿತ ಮಾಹಿತಿ ಲಭ್ಯವಾಗಿತ್ತು.

ಈ ಹಿನ್ನೆಲೆಯಲ್ಲಿ ಅಬಕಾರಿ ನಿರೀಕ್ಷಕರು, ಉಪ ನಿರೀಕ್ಷಕರು ಹಾಗೂ ಸಿಬ್ಬಂದಿಯೊಂದಿಗೆ ದಾಳಿ ನಡೆಸಿದರು.

ಈ ವೇಳೆ ಮನೆಯಲ್ಲಿ ವಿವಿಧ ನಮೂನೆಯ 202 ಪೆಟ್ಟಿಗೆಯ ಒಟ್ಟು 1745.280 ಲೀಟರ್ ನಷ್ಟು ಮದ್ಯ ಹಾಗೂ 24 ಪೆಟ್ಟಿಗೆಯ ಒಟ್ಟು 206. 280 ಲೀಟರ್‌ನಷ್ಟು ಬಿಯರ್ ವಶಕ್ಕೆ ಪಡೆದಿದ್ದಾರೆ.

ಅಕ್ರಮವಾಗಿ ಮದ್ಯ ಸಂಗ್ರಹಿಸಿಟ್ಟಿದ್ದ ಮನೆಯ ಮಾಲೀಕನ ವಿರುದ್ಧ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

## ಶ್ರೀ ಹನುಮ ಜಯಂತಿಯ ತೊಟ್ಟಿಲೋತ್ಸವ



ಘಟಪ್ರಭಾ: ಕಾಯಿಪಲ್ಲೆ ಮಾರು ಕಟ್ಟೆಯಲ್ಲಿರುವ ಪ್ರಸಿದ್ದ ಶ್ರೀ ಹನುಮಾನ ಮಂದಿರದಲ್ಲಿ ಸನಿವಾರ ಮುಂಜಾನೆ 6 ಗಂಟೆಗೆ ಹನುಮ ಜಯಂತಿ ನಿಮಿತ್ತ ತೊಟ್ಟಿಲೊತ್ಸವ ಕಾರ್ಯಕ್ರಮ ಜರುಗಿತು.

ಮುಂಜಾನೆ ಗುಡಿಯ ಅರ್ಚಕರಾದ ಗುರುಬಸ್ಸು ಇವರಿಂದ ಹನುಮಂತ ದೇವರ ರುದ್ರಾಭೀಷೇಕ ಪೂಜೆ ನಂತರ ಹೆಣ್ಣುಮಕ್ಕಳಿಂದ ಸೋಬಾನ ಹಾಡುಗಳೊಂದಿಗೆ ಶ್ರೀ ಹನುಮಾನ ದೇವರ ತೆೊಟ್ಟಿಲೊತ್ಸವ ಜರುಗಿತು.

ನಂತರ ಪ್ರಸಾದ ವಿತರಣೆ ಮುಗಿದ ಬಳಿಕ ಹನುಮತ ದೇವರ ಪಲ್ಲಕ್ಕಿ ಉತ್ಸವ ಜರುಗಿತು.

ಈ ಸಂದರ್ಭದಲ್ಲಿ ಪಾಂಡು ರಂಗ ಪೊತದಾರ, ಜಿ.ಎಸ್.ರಜಪೂತ, ಪ್ರಕಾಶ ಗಾಯಕವಾಡ, ಗುರುಬಸಯ್ಯಾ ಕರ್ಪೂರಮಠ, ಶ್ರೀಮತಿ ಅಂಗಡಿ, ಮಟಗಾರ ಬಾಂಡಗೆ, ದೇಸಪಾಂಡೆ, ಹರಗಾಪೂರೆ, ದಾದಾಗೋಳ, ಪಾಂಡ್ರೆ, ಸೇರಿದಂತೆ ನೂರಾರು ಹೆಣ್ಣು ಮಕ್ಕಳು ಹಾಗೂ ಭಕ್ತರು ಇದ್ದರು.

## ಲಂಚ ಸ್ವೀಕರಿಸುವಾಗ ಲೋಕಾಯುಕ್ತ ಬಲೆಗೆ ಬಿದ್ದ ಲೇಡಿ ಪಿಎಸ್ಐ




ಬೀದರ್: ಠಾಣಾ ವ್ಯಾಪ್ತಿಯಲ್ಲಿ ಮರಳು ಸಾಗಾಣಿಕೆಗೆ ಲಾರಿಗಳಿಗೆ ಅನುಮತಿ ನೀಡಲು 25 ಸಾವಿರ ರೂ. ಲಂಚಕ್ಕೆ ಬೇಡಿಕೆ ಇಟ್ಟಿದ್ದ ಪೊಲೀಸ್ ಸಬ್ ಇನ್ಸ್ಪೆಕ್ಟರ್‌ನ್ನು ಲೋಕಾಯುಕ್ತ ಪೊಲೀಸರು ರೆಡ್ಹ್ಯಾಂಡ್ ಆಗಿ ಬಲೆಗೆ ಕೆಡವಿದ್ದಾರೆ.

ಬಸವಕಲ್ಯಾಣ ತಾಲೂಕಿನ ಮಂಠಾಳ ಠಾಣೆಯ ಪಿಎಸ್ಐ ಶೀಲಾ ನ್ಯಾಮನ್ ಹಾಗು ಕಾನ್ಸ್ಟೆಬಲ್ ಪರಶುರಾಮರೆಡ್ಡಿ ಲೋಕಾಯುಕ್ತ ಬಲೆಗೆ ಬಿದ್ದವರು. ಠಾಣಾ ವ್ಯಾಪ್ತಿಯಲ್ಲಿ ಮರಳು ಸಾಗಾಣಿಕೆ ಲಾರಿಗಳಿಗೆ ಅನುಮತಿ ನೀಡಲು ದೂರುದಾರ ಇರ್ಷಾದ್ ಪಟೇಲ್‌ನಿಂದ 21 ಸಾವಿರ ರೂ. ಲಂಚಕ್ಕೆ ಬೇಡಿಕೆ ಇಟ್ಟಿದ್ದರು.

ಸಾಗಾಣಿಕೆಗೆ ಅನುಮತಿ ಪಡೆದಿದ್ದ ಇರ್ಷಾದ್ ಮೂರು ಲಾರಿ ಮುಖಾಂತರ ಮರಳು ಸಾಗಾಣಿಕೆ ನಡೆಸುತ್ತಿದ್ದ. ಪ್ರತಿ ಲಾರಿಗೆ ಪ್ರತಿ ತಿಂಗಳು 7 ಸಾವಿರ ರೂ. ನೀಡುವಂತೆ ಪೊಲೀಸರು ಬೇಡಿಕೆ ಇಟ್ಟಿದ್ದರು.

ಈ ಸಂಬಂಧ ಮರಳು ಲಾರಿಯ ಮಾಲೀಕ ಇರ್ಷಾದ ಪಟೇಲ್ ಲೋಕಾಯುಕ್ತಕ್ಕೆ ದೂರು ನೀಡಿದ್ದರು. ದೂರಿನ ಅನ್ವಯ ಲೋಕಾಯುಕ್ತ ಅಧಿಕಾರಿಗಳು ಕಾರ್ಯಾಚರಣೆ ನಡೆಸಿ, ಲಂಚ ಸ್ವೀಕರಿಸುವಾಗಲೇ ದಾಳಿ ಮಾಡಿ, ಪಿಎಸ್ಐ ಮತ್ತು ಕಾನ್ಸ್ಟೆಬಲ್ನನ್ನು ಬಂಧಿಸಿದ್ದಾರೆ. ಇಬ್ಬರ ವಿರುದ್ಧವು ಪ್ರಕರಣವನ್ನು ದಾಖಲಿಸಲಾಗಿದೆ.

## ಬೇಸಿಗೆಯಲ್ಲಿ ಕುಡಿವ ನೀರು, ಮೇವಿನ ಸಮಸ್ಯೆಗಳ ನಿರ್ವಹಣೆ: ಜಿಲ್ಲಾ ಮಟ್ಟದ ಟಾಸ್ಕ್ಫೋರ್ಸ್ ಸಭೆ

ಕೊಪ್ಪಳ: ಬೇಸಿಗೆ ಸಮಯದಲ್ಲಿ ಕುಡಿಯುವ ನೀರು ಮತ್ತು ಮೇವಿನ ಸಮಸ್ಯೆಗಳ ನಿವಾರಣೆಗೆ ಕೈಗೊಳ್ಳಬೇಕಾದ ಕ್ರಮದ ಬಗ್ಗೆ ಚರ್ಚಿಸಲು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ಎಂ.ಸುಂದರೇಶಬಾಬು ಅವರ ಅಧ್ಯಕ್ಷತೆಯಲ್ಲಿ ಏಪ್ರೀಲ್ 6ರಂದು ಸಭೆ ನಡೆಯಿತು.

ಜಿಲ್ಲಾಡಳಿತ ಭವನದ ಕೆಸ್ವಾನ್ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಜಿಲ್ಲಾಧಿಕಾರಿಗಳು, ಕುಡಿಯುವ ನೀರಿಗೆ ಸಂಬಂಧಿಸಿದ ಎಲ್ಲಾ ಕಾಮಗಾರಿಗಳ ಸಣ್ಣಪುಟ್ಟ ದುರಸ್ಥಿಯನ್ನು ವಾರದೊಳಗಾಗಿ ಮಾಡಬೇಕು. ಬೋರ್‌ವೆಲ್‌ಗಳ ಮೇಲೆ ಅವಲಂಭಿತವಾಗಿರುವ ಗ್ರಾಮ ಮತ್ತು ವಾರ್ಡವಾರು ಮಾಹಿತಿ ನೀಡಬೇಕು. ಏಪ್ರಿಲ್ ಮತ್ತು ಮೇ ಅಂತ್ಯದವರೆಗೆ



ಕುಡಿಯುವ ನೀರಿನ ಸಮಸ್ಯೆಗಳು ಎದುರಿಸುವ ಗ್ರಾಮಗಳ ಪಟ್ಟಿ ಮಾಡಬೇಕು. ತಾಲೂಕು ತಹಶೀಲ್ದಾರರು, ತಾಪಂ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ನಗರ ಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರು ಟಾಸ್ಕ್ಫೋರ್ಸ್ ಸಭೆ ನಡೆಸಿ ಕುಡಿಯುವ ನೀರಿನ ಸಮಸ್ಯೆ ಬರದಂತೆ ಕ್ರಮವಹಿಸಲು ಸೂಕ್ತ ನಿರ್ದೇಶನ ನೀಡಿದರು.

ಕುಡಿಯುವ ನೀರಿಗೆ ಸಂಬಂಧಿಸಿದಂತೆ ಯಾವುದಾದರು ದೂರು ಬಂದರೆ 24 ಗಂಟೆಯೊಳಗೆ ಬಗೆಹರಿಸಬೇಕು. ತಾಂಡಾ ಮತ್ತು ಬೇಚಾರಕ ಗ್ರಾಮಗಳು ಬೋರ್‌ವೆಲ್‌ಗಳ ಮೇಲೆ ಅವಲಂಬನೆಯಾಗಿದ್ದರೆ ಅಲ್ಲಿ ಪರ್ಯಾಯ ವ್ಯವಸ್ಥೆ ಮಾಡಬೇಕು. ಎಲ್ಲಾ ಕುಡಿಯುವ ನೀರಿನ ಮೂಲಗಳನ್ನು ಪರಿಶೀಲಿಸಿ, ನೀರು ಕುಡಿಯಲು ಯೋಗ್ಯವಿದ್ದಲ್ಲಿ ಮಾತ್ರ ಕುಡಿವ ನೀರಿನ ಬಳಕೆಗೆ ಉಪಯೋಗಿಸಲು ಕ್ರಮಕೈಗೊಳ್ಳಬೇಕು.

ಎಲ್ಲಾ ಕುಡಿಯುವ ಯೋಜನೆಗಳಿಗೆ ವಿದ್ಯುತ್ ಸಂಪರ್ಕದ ಆಡಚಣೆಯಾಗದಂತೆ ಕ್ರಮಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಾಹುಲ್ ರತ್ನಂ ಪಾಂಡೆಯ ಅವರು ಮಾತನಾಡಿ, ಜಿಲ್ಲೆಯಲ್ಲಿ ದುರಸ್ಥಿ ಮಾಡಿಸಲು ಬಾಕಿ ಉಳಿದಿರುವ ಶುದ್ಧ ಕುಡಿವ ನೀರಿನ ಘಟಕಗಳನ್ನು ಸಹ ವಾರದೊಳಗಾಗಿ ದುರಸ್ಥಿಪಡಿಸಲು ಕ್ರಮ ಕೈಗೊಳ್ಳಬೇಕು. ಬೋರ್‌ವೆಲ್‌ಗಳ ಅವಲಂಬನೆ ಆಗಿರುವ ಗ್ರಾಮಗಳ ಪಟ್ಟಿ ಮಾಡಿ ಒಂದು ಪರ್ಯಾಯ ಯೋಜನೆ ರೂಪಿಸಿ ತಾಂಡಾ ಮತ್ತು ಬೇಚರಕ್ ಗ್ರಾಮಗಳಲ್ಲಿ ಸಹ ಬೋರ್‌ವೆಲ್ ಮೇಲೆ ಅವಲಂಬನೆ ಆಗಿರುವ ಬಗ್ಗೆ ವಿವರ ನೀಡುವಂತೆ ಸೂಚನೆ ನೀಡಿದರು.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯನಿರ್ವಹಕ ಅಭಿಯಂತರರು ಮಾತನಾಡಿ, ಜಿಲ್ಲೆಯಲ್ಲಿ ದುರಸ್ಥಿಗೆ ಬಂದಿರುವ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸರಿಪಡಿಸಲು ಕ್ರಮ ವಹಿಸಲಾಗುತ್ತಿದೆ ಎಂದು ತಿಳಿಸಿದರು.

ಕನಕಗಿರಿ ಪಟ್ಟಣದ ಕೆರೆ ತುಂಬಿದ್ದು, ಕುಡಿಯುವ ನೀರಿನ ಯಾವುದೇ ಸಮಸ್ಯೆ ಇರುವುದಿಲ್ಲವೆಂದು ಮುಖ್ಯಾಧಿಕಾರಿಗಳು ಸಭೆಗೆ ತಿಳಿಸಿದರು. ಕೆಲವು ಗ್ರಾಪಂಗಳಲ್ಲಿ ನೀರಿನ ಸಮಸ್ಯೆ ಉಂಟಾಗಬಹುದಾಗಿದೆ. ಕನಕಗಿರಿ ತಾಲೂಕಿನಲ್ಲಿ ಏಪ್ರಿಲ್ ಮಾಹೆಯಲ್ಲಿ 5 ಗ್ರಾಮಗಳಲ್ಲಿ ಮತ್ತು ಮೇ ಮಾಹೆಯಲ್ಲಿ 9 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಬಹುದು ಎಂದು ಕನಕಗಿರಿ ತಾಪಂ ಕಾರ್ಯನಿರ್ವಹಣಾಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089